ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ


ಸಂಪಾದಕರು: **ರಮೇಶರೆಡ್ಡಿ** | **9448 604450**

Mallammanudi Regional News Paper | Editor: **Ramesh Reddy** | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 13 | PAGE- ಪುಟ 8 | ಶುಕ್ರವಾರ 14.02.2025 | RS.ಬೆಲೆ 2/-

# ವಕ್ಫ್ ತಿದ್ದುಪಡಿ ಮಸೂದೆ ಜೆಪಿಸಿ ವರದಿ ಗದ್ದಲ

# ಲೋಕಸಭಾ ಕಲಾಪ ಮಾ. 10ರವರೆಗೆ ಮುಂದೂಡಿಕೆ



ಮಲ್ಲಮ ನುಡಿ ವಾರ್ತೆನವದೆಹಲಿ:ಫೆ.13:ಇಂದು ಸಂಸತ್ತಿನ ಬಜೆಟ್ ಅಧಿವೇಶನದ ಮೊದಲ ಹಂತದ ಕೊನೆಯ ದಿನವಾಗಿದ್ದು, ವಕ್ಫ್ ಮಸೂದೆಯ ಕುರಿತಾದ ಜೆಪಿಸಿ ವರದಿಯನ್ನು ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಮಂಡಿಸಲಾಯಿತು. ಗದ್ದಲದಿಂದಾಗಿ ಉಭಯ ಸದನಗಳ ಕಲಾಪಗಳಿಗೆ ಅಡ್ಡಿಯಾಯಿತು. ಲೋಕಸಭೆಯ ಕಲಾಪವನ್ನು ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಿದ ನಂತರ ಮತ್ತೆ ಆರಂಭಿಸಲಾಯಿತು. ಇದಾದ ನಂತರ, ಬಿಜೆಪಿ ಸಂಸದೆ ಜಗದಂಬಿಕಾ ಪಾಲ್ ಅವರು ವಕ್ಫ್ ಮಸೂದೆಯ ಕುರಿತಾದ ಜೆಪಿಸಿ ವರದಿಯನ್ನು ಸದನದಲ್ಲಿ ಮಂಡಿಸಿದರು. 18 ನಿಮಿಷಗಳ ಸಂಕ್ಷಿಪ್ತ ಕಲಾಪದ ನಂತರ, ಸ್ಪೀಕರ್ ಓಂ ಬಿರ್ಲಾ ಸದನವನ್ನು ಮಾರ್ಚ್ 10ರವರೆಗೆ ಮುಂದೂಡಿದರು.

ವಕ್ಫ್ ತಿದ್ದುಪಡಿ ಮಸೂದೆಯ ಕುರಿತು ಲೋಕಸಭಾ ಕಲಾಪವನ್ನು ಮುಂದೂಡಿದ ನಂತರ, ಅಖಿಲ ಭಾರತ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಂಖಒಖಒ) ಸಂಸದ ಅಸಾದುದ್ದೀನ್ ಓವೈಸಿ ಸಂಸತ್ತಿನ ಆವರಣದಲ್ಲಿ ಮಾತನಾಡಿದ್ದು, ಈ ಮಸೂದೆಯು ಅಸಾಂವಿಧಾನಿಕವಾಗಿದೆ ಎಂದು ಹೇಳಿದರು. ಈ ಮಸೂದೆಯು ಸಂವಿಧಾನದ 14, 15 ಮತ್ತು 29ನೇ ವಿಧಿಗಳನ್ನು ಉಲ್ಲಂಘಿಸುತ್ತದೆ ಎಂದು ಅವರು ಹೇಳಿದರು. ಈ ಮಸೂದೆಯ ಉದ್ದೇಶ ವಕ್ಫ್ ಅನ್ನು ಉಳಿಸುವುದಲ್ಲ, ಬದಲಾಗಿ ಅದನ್ನು ನಾಶಮಾಡಿ ಮುಸ್ಲಿಮರಿಂದ ಕಸಿದುಕೊಳ್ಳುವುದು. ಈ ಮಸೂದೆಯನ್ನು ಖಂಡಿಸುವುದಾಗಿ ಅವರು ಹೇಳಿದರು. ಸಂಸದರ ಭಿನ್ನಾಭಿಪ್ರಾಯದ ಶೇ. 70ರಷ್ಟು ಸಂಪಾದಿತ ಆವೃತ್ತಿಯನ್ನು ಜೆಪಿಸಿ ವರದಿಯಲ್ಲಿ ಸೇರಿಸಲಾಗುವುದು ಎಂದು ಲೋಕಸಭಾ ಸ್ಪೀಕರ್ ಭರವಸೆ ನೀಡಿದ್ದಾರೆ ಎಂದು ಓವೈಸಿ ಹೇಳಿದರು.

## 8,433 ರೈತರ ನೊಂದಣಿ, ಮಾರ್ಚ್ 18ರ ವರೆಗೆ ನೋಂದಣಿಗೆ ಅವಕಾಶ:ಬಿ.ಫೌಜಿಯಾ ತರನ್ನುಮ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.13: ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ 2024-25ನೇ ಸಾಲಿನ ಮುಂಗಾರು ಹಂಗಾಮಿನ ಎಫ್.ಎ.ಕ್ಯೂ. ಗುಣಮಟ್ಟದ ತೊಗರಿ ರೈತ-ರಿಂದ ಖರೀದಿಸಲು ಜಿಲ್ಲೆಯಲ್ಲಿ ಈಗಾಗಲೆ ನೋಂದಣಿ ಮತ್ತು ಮಾರಾಟ ಪ್ರಕ್ರಿಯೆ ನಡೆದಿದ್ದು, ನೊಂದಣಿಗೆ ಮಾರ್ಚ್ 18 ಕೊನೆ ದಿನವಾಗಿರುವುದರಿಂದ ಇದೂವರೆಗೆ ನೊಂದಣಿ ಮಾಡದ ರೈತರು ಕೂಡಲೆ ನೋಂದಣಿ ಮಾಡಿಸಿ ಯೋಜನೆಯ ಲಾಭ ಪಡೆಯಬೇಕೆಂದು ಡಿ.ಸಿ. ಬಿ.ಫೌಜಿಯಾ ತರನ್ನುಮ ರೈತ ಸಮುದಾಯದಲ್ಲಿ ಮನವಿ ಮಾಡಿದ್ದಾರೆ. ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್ ತೊಗರಿಗೆ ಕೇಂದ್ರ ಸರ್ಕಾರ ಪ್ರತಿ ಕ್ವಿಂಟಾಲ್‌ಗೆ 7,550 ರೂ. ದರ ನಿಗದಿ ಮಾಡಿದ್ದು ಇದಕ್ಕೆ ಕರ್ನಾಟಕ ರಾಜ್ಯ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ 450 ರೂ. ಪ್ರೋತ್ಸಾಹ ಧನ ನೀಡುವಾದಿ ಘೋಷಿಸಿದೆ. ಹೀಗಾಗಿ ಪ್ರತಿ ಕ್ವಿಂಟಾಲ್‌ಗೆ 8,000 ರೂ. ಗಳಂತೆ ಪ್ರತಿ ಎಕರೆಗೆ 4 ಕ್ವಿಂಟಾಲ್‌ನಂತೆ ಪ್ರತಿ ರೈತ-ರಿಂದ ಗರಿಷ್ಠ 40 ಕ್ವಿಂಟಾಲ್ ಖರೀದಿಸಲಾಗುತ್ತದೆ. ಹಣವನ್ನು ಡಿ.ಬಿ.ಟಿ ಮೂಲಕ ರೈತರ ಬ್ಯಾಂಕ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು ಎಂದು ಡಿ.ಸಿ.ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಇನ್ನು ತೊಗರಿ ಖರೀದಿಗೆ ಕೇಂದ್ರ ಸರ್ಕಾರವು ನಾಫೆಡ್ ಮತ್ತು ಎನ್.ಸಿ.ಸಿ.ಎಫ್ ಸಂಸ್ಥೆಗಳನ್ನು ಖರೀದಿ ಸಂಸ್ಥೆಗಳನ್ನಾಗಿ ಮಾಡಿದ್ದು, ರಾಜ್ಯದಿಂದ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತ ಮತ್ತು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯನ್ನು ನೋಡಲ್ ಏಜೆನ್ಸಿಗಳನ್ನಾಗಿ ನೇಮಿಸಿದೆ. ಅದರಂತೆ ಕಲಬುರಗಿ ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ರೈತ ಉತ್ಪಾದಕರ ಸಂಘಗಳು ಹಾಗೂ ತಾಲ್ಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘಗಳನ್ನು ಗುರುತಿಸಿ 194 ತೊಗರಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದರು.

ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ಸಂಸ್ಥೆಗೆ 65 ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿಗೆ ಸಂಸ್ಥೆಗೆ 129 ಖರೀದಿ ಕೇಂದ್ರಗಳನ್ನು ಹಂಚಿಕೆ ಮಾಡಲಾಗಿದ್ದು, ಇವರಿಂದ ಕ್ರಮವಾಗಿ 2,669 ಮತ್ತು 5,764 ಸೇರಿ ಇದೂವರೆಗೆ ಜಿಲ್ಲೆಯಲ್ಲಿ 8,433 ರೈತರು ತೊಗರಿ ಮಾರಾಟಕ್ಕೆ ನೋಂದಣಿ ಮಾಡಿಕೊಂಡಿದ್ದಾರೆ ಎಂದು ಡಿ.ಸಿ. ತಿಳಿಸಿದ್ದಾರೆ.

## ಈಗ ಚುನಾವಣೆ ನಡೆದರೆ ಕೇಂದ್ರದಲ್ಲಿ ಎನ್‌ಡಿಎಗೆ ಬಹುಮತ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಫೆ.13: ಪ್ರಸಕ್ತ ಲೋಕಸಭೆಗೆ ಚುನಾವಣೆ ನಡೆದರೆ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ 343 ಸ್ಥಾನಗಳನ್ನು ಗೆಲ್ಲಲಿದೆ. ಇನ್ನು ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟ 188 ಸ್ಥಾನ ಪಡೆಯಲಿದೆ ಎಂದು ಇಂಡಿಯಾ ಟುಡೇ- ಸಿ ವೋಟರ್ ನಡೆಸಿದ ಮೂಡ್ ಆಫ್ ದ ನೇಷನ್ ಸಮೀಕ್ಷೆ ಹೇಳಿದೆ. 2024ರ ಲೋಕಸಭಾ ಚುನಾವಣೆಯಲ್ಲಿ 292 ಸ್ಥಾನ ಗೆದ್ದಿದ್ದ ಎನ್‌ಡಿಎ ಮೈತ್ರಿಕೂಟ ಈಗ ಚುನಾವಣೆ ನಡೆದರೆ ಭರ್ಜರಿ 343 ಸ್ಥಾನ ಗೆಲ್ಲಲಿದೆ. ಅಂದರೆ ಅದರ ಸ್ಥಾನಬಲ 51 ಸ್ಥಾನ ಹೆಚ್ಚಾಗಲಿದೆ. ಬಿಜೆಪಿ ಬಲ 240ರಿಂದ 281ಕ್ಕೆ ಏರಲಿದೆ. ಇನ್ನು ಲೋಕಸಭಾ ಚುನಾವಣೆಯಲ್ಲಿ 232 ಸ್ಥಾನ ಗೆದ್ದಿದ್ದ ಇಂಡಿಂ-ಯಾ ಕೂಟದ ಬಲ 188ಕ್ಕೆ ಇಳಿಯಲಿದೆ. ಅದೇ ರಿತಿ ಕಾಂಗ್ರೆಸ್ ಬಲ 99ರಿಂದ 78ಕ್ಕೆ ಕುಸಿಯಲಿದೆ ಎಂದು ಸಮೀಕ್ಷೆ ಹೇಳಿದೆ.

ಅಲ್ಲದೆ ಬಿಜೆಪಿಯ ಮತ ಪ್ರಮಾಣವು ಶೇ.41ರಷ್ಟು ವೃದ್ಧಿಯಾದರೆ ಕಾಂಗ್ರೆಸ್‌ದು ಶೇ.20ರಷ್ಟು ಕುಸಿತವಾಗಲಿದೆ. ಇಂಡಿಯಾ ಕೂಟದ ಒಳಜಗಳವು ಮತ ಪ್ರಮಾಣಕ್ಕೆ ಕುಸಿತವಾಗಿರಲಿದೆ ಎಂದು ಸಮೀಕ್ಷೆ ಹೇಳಿದೆ.

## ಕಬ್ಬಿನ ಬಾಕಿ ಹಣ ಪಾವತಿಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಫೆ.13:ನಾರಂಜಾ ಸಕ್ಕರೆ ಕಾರ್ಖಾನೆಗೆ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಬುಧುವಾರ ಭೇಟಿ ನೀಡಿ ಸಕ್ಕರೆ ಕಾರ್ಖಾನೆಯಲ್ಲಿ ಈವರೆಗೆ ಕಬ್ಬು ನುರಿಸಿರುವ ಬಗ್ಗೆ ಪರಿಶೀಲಿಸಿ, ಕಬ್ಬು ಸರಬರಾಜು ಮಾಡಿರುವ ರೈತರಿಗೆ ಕಬ್ಬಿನ ಬಾಕಿ ಹಣ ಪಾವತಿಸಲು ಸೂಚಿಸಿದರು.

ಈ ಸಮಯದಲ್ಲಿ ಸಕ್ಕರೆ ಕಾರ್ಖಾನೆಯಲ್ಲಿ ಸಕ್ಕರೆ ದಾಸ್ತಾನನ್ನು ಪರಿಶೀಲಿಸಿದರು. ಸಕ್ಕರೆ ಕಾರ್ಖಾನೆಯವರಿಗೆ ಕಬ್ಬಿನ ಇತರೆ ಉತ್ಪನ್ನಗಳ ಮೂಲಕ ಆದಾಯವನ್ನು ವೃದ್ಧಿ ಮಾಡಿಕೊಳ್ಳಲು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕರು, ಆಹಾರ ಇಲಾಖೆ ಉಪನಿರ್ದೇಶಕರು, ಬೀದರ ತಹಸೀಲ್ದಾರರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## 1.76 ಕೋಟಿ ರೂ.ವೆಚ್ಚದ ಕಾಮಗಾರಿಗಳಿಗೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.13-ಜಿಲ್ಲೆಯ ಮುಧೋಳ ತಾಲೂಕಿನ ರನ್ನ ಬೆಳಗಲಿಯಲ್ಲಿ ಕೈಗೊಳ್ಳಲಾದ ಒಟ್ಟು 1.76 ಕೋಟಿ ರೂ.ಗಳ ವಿವಿಧ ಕಾಮಗಾರಿಗಳಿಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಗುರುವಾರ ಚಾಲನೆ ನೀಡಿದರು.

ರನ್ನ ಬೆಳಗಳಿಯ ಬಂದಲಕ್ಷ್ಮೀ ದೇವಸ್ಥಾನದ ಆವರಣದಲ್ಲಿ ಪೌರಾಡಳಿತ ಹಾಗೂ ಪಟ್ಟಣ ಪಂಚಾಯತ ರನ್ನಬೆಳಗಲಿ ಸಹಯೋಗದಲ್ಲಿ ಹಮ್ಮಿಕೊಂಡ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಅಮೃತ ನಗರೋತ್ಥಾನದಡಿ 200.51 ಲಕ್ಷಗಳಲ್ಲಿ ಬೆಳಗಲಿ ಪಟ್ಟಣ ಪಂಚಾಯತ ಕಾರ್ಯಾಲಯದ ನೂತನ ಕಟ್ಟಡ ನಿರ್ಮಾಣ, 70 ಲಕ್ಷಗಳಲ್ಲಿ ಶಿಥಿಲಗೊಂಡ ಹಳೆಯ ಗ್ರಂಥಾಲಯದ ಹೊಸ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ ಎಂದರು.

ಸ್ವಚ್ಛ ಭಾರತ ಮಿಷನ್ 1.0 ಮತ್ತು 2.0 ಯೋಜನೆಯಡಿ 8.63 ಲಕ್ಷ ರೂ. ವೆಚ್ಚದಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಆಫೀಸ್ ರೂಮ ನಿರ್ಮಾಣ, 40 ಲಕ್ಷ ರೂ.ಗಳಲ್ಲಿ ಎಂ.ಆರ್. ಎಫ್ ಘಟಕಕ್ಕೆ ಪ್ರಾಥಮಿಕ

(2ನೇ ಪುಟ ನೋಡಿ)

## ಮೈಕ್ರೋಫೈನಾನ್ಸ್ ಸಂಸ್ಥೆಗಳ ಕಿರುಕುಳ ನಿಯಂತ್ರಣಕ್ಕೆ ಸರ್ಕಾರಿ ಆಧ್ಯಾದೇಶ ಜಾರಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.13:ಮಧ್ಯಮ ಹಾಗೂ ಕೆಳಮಧ್ಯಮ ವರ್ಗದವರು ಸಣ್ಣ ಫೈನಾನ್ಸ್ ಸಂಸ್ಥೆಗಳಲ್ಲಿ ಸಾಲ ಪಡೆದು ಮರುಪಾವತಿಸುವಲ್ಲಿ ವಿಳಂಬ ಮಾಡುವ ಸಾಲಗಾರರ ಮೇಲೆ ಮೈಕ್ರೋಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿಗಳು ಹಾಗೂ ಲೇವಾದೇವಿಗಾರರು ನೀಡುವ ಕಿರುಕುಳ ಹಾಗೂ ಬಲವಂತದ ವಸೂಲಾತಿ ಕ್ರಮಗಳನ್ನು ನಿಯಂತ್ರಿಸಲು ಸರ್ಕಾರವು ಕರ್ನಾಟಕ ಕಿರು (ಮೈಕ್ರೋ) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ 2025ನ್ನು ಫೆಬ್ರವರಿ 12 ರಿಂದ ಜಾರಿಗೊಳಿಸಿದ್ದು, ಆದೇಶದ ಮುಖ್ಯಾಂಶಗಳು ಹೀಗಿವೆ.

ಮೈಕ್ರೋಫೈನಾನ್ಸ್ ಸಂಸ್ಥೆಗಳು ಸಾಲಗಾರರಿಂದ ಯಾವುದೇ

(2ನೇ ಪುಟ ನೋಡಿ)



ಬಲವಂತದ ವಸೂಲಾತಿಗಳನ್ನು ಕೈಗೊಳ್ಳುವ ವ್ಯಕ್ತಿಯು ವಿಚಾರಣೆಗೆ ಒಳಪಡುತ್ತಾನೆ, ಹತ್ತು ವರ್ಷಗಳ ವರೆಗೆ ವಿಸ್ತರಿಸಬಹುದಾದ ಕಾರಗೃಹವಾಸ ಶಿಕ್ಷೆ ಹಾಗೂ 5 ಲಕ್ಷ ರೂ ವರೆಗೆ ವಿಧಿಸಬಹುದಾದ ಜುಲ್ಮಾನೆಗೆ ಒಳಪಡುತ್ತಾನೆ. ಈ ಅಪರಾಧಗಳು ಸಂಜ್ಞೆಯ (ಕಾಗ್ನಿಜಿಬಲ್) ಹಾಗೂ ಜಾಮೀನು ರಹಿತ (ನಾನ್ ಬೇಲೆಬಲ್) ಪ್ರಕರಣಗಳಾಗಿರುತ್ತವೆ. ಯಾವುದೇ ಪೊಲೀಸ್ ಅಧಿಕಾರಿಗಳು ಇಂತಹ ಪ್ರಕರಣಗಳನ್ನು ನೊಂದಣಿ ಮಾಡಿಕೊಳ್ಳಲು ನಿರಾಕರಿಸಬಾರದು. ಪೊಲೀಸ್ ಉಪ ಅಧೀಕ್ಷಕ (ಡಿವೈಎಸ್‌ಪಿ) ದರ್ಜೆಗಿಂತ ಕಡಿಮೆ ಇಲ್ಲದ ಅಧಿಕಾರಿಯು ಸ್ವತಃ (ಸುಮೊಟೊ) ಪ್ರಕರಣ ದಾಖಲಿಸಬಹುದು. ಸರ್ಕಾರವು ಈ ಅಧ್ಯಾದೇಶದ ಅನುಷ್ಠಾನಕ್ಕೆ ಕಾಲಕಾಲಕ್ಕೆ ನಿರ್ದೇಶನಗಳನ್ನು ನೀಡುವ ಅಧಿಕಾರ ಹೊಂದಿರುತ್ತದೆ. ಈ ಆದೇಶದಿಂದ ಆರ್.ಬಿ.ಐ ಮತ್ತು ಕೇಂದ್ರ / ರಾಜ್ಯ ಸರ್ಕಾರಗಳಿಂದ ನೊಂದಣಿಯಾಗದ ಮೈಕ್ರೋಫೈನಾನ್ಸ್ ಸಂಸ್ಥೆಗಳಲ್ಲಿ ಆರ್ಥಿಕ ಶಿಸ್ತು ಹೆಚ್ಚಿಸಲು ಹಾಗೂ ಸಾಲಗಾರರಿಗೆ ಕಿರುಕುಳ, ಬಲವಂತದ ವಸೂಲಿ ಕ್ರಮಗಳಿಂದ ಮುಕ್ತಿ ನೀಡುತ್ತದೆ.

ಡಾ. ಶಾಲಿನಿ ರಜನೀಶ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು

## ಎಸ್‌ಎಸ್‌ಎಲ್‌ಸಿ ಪರೀಕ್ಷೆ ಜಿಲ್ಲೆಗೆ ಹೆಚ್ಚಿನ ಫಲಿತಾಂಶ ತನ್ನಿ:ಜಿಲ್ಲಾದಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.13: ದಿನನಿತ್ಯ ಪಠ್ಯವನ್ನು ಪುನರ್ ಪಠಿಸಿಕೊಂಡು ಹೆಚ್ಚಿನ ಪರಿಶ್ರಮ ಹಾಕಿ ಶಾಲೆಗೆ ಹಾಗೂ ಜಿಲ್ಲೆಗೆ ಉತ್ತಮ ಫಲಿತಾಂಶ ತರಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಿನ್ನೆ ಅವರು ಜನವಾಡದ ಸರಕಾರಿ ಪ್ರೌಢಶಾಲೆಗೆ ಅನಿರೀಕ್ಷಿತ ಭೇಟಿ ನೀಡಿ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳೊಂದಿಗೆ ಅಭ್ಯಾಸ ಕ್ರಮದ ಬಗ್ಗೆ ಸಂವಾದ ನಡೆಸಿದರು. ಶ್ರದ್ಧೆ ಹಾಗೂ ಪ್ರಮಾಣಿಕತೆಯಿಂದ ಗುರುಗಳ ಮಾರ್ಗದರ್ಶನದಲ್ಲಿ ಪ್ರತಿನಿತ್ಯ ಪಠ್ಯಕ್ರಮವನ್ನು ಪುನರ್ ಮನನ ಮಾಡಿಕೊಂಡು ಪರೀಕ್ಷೆ ಬರೆಯಲು ಸಿದ್ಧಗೊಳ್ಳುವಂತೆ ಹೇಳಿದರು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಭಾರತ ದೇಶದ ಭೌಗೋಳಿಕತೆ ಬಗ್ಗೆ ಪಾಠ ಮಾಡಿದರು.

## ಒಂದನೇ ಪುಟದಿಂದ

# ನಿಯಂತ್ರಣಕ್ಕೆ ಸರ್ಕಾರಿ ಆಧ್ಯಾದೇಶ ಜಾರಿ

ಭದ್ರತೆ ಪಡೆಯಬಾರದು. ಗ್ರಾಹಕರಿಗೆ ವಿಧಿಸುವ ಬಡ್ಡಿದರಗಳ ಬಗ್ಗೆ ಪಾರದರ್ಶಕವಾಗಿ ಲಿಖಿತ ರೂಪದಲ್ಲಿ ತಿಳಿಸಬೇಕು. ಈ ಆದೇಶವು ಭಾರತೀಯ ರಿಸರ್ವ್ ಬ್ಯಾಂಕ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಲ್ಲಿ ನೊಂದಣಿಯಾಗದ ಮೈಕ್ರೋಫೈನಾನ್ಸ್ ಸಂಸ್ಥೆಗಳಿಗೆ ಮಾತ್ರ ಅನ್ವಯಿಸುತ್ತದೆ. ನೊಂದಾಯಿತ ಸಂಸ್ಥೆಗಳಿಂದ ಅಂದಾಜು 60 ಸಾವಿರ ಕೋಟಿ ರೂ ಸಾಲವನ್ನು ಸುಮಾರು 1.09 ಕೋಟಿ ಸಾಲಗಾರರು ಪಡೆದಿದ್ದಾರೆ. ನೊಂದಣಿಯಾಗದ ಸಂಸ್ಥೆಗಳಿಂದ ಸಾಲ ಪಡೆದವರ ಮಾಹಿತಿ ನಿಖರವಾಗಿ ಲಭ್ಯವಿಲ್ಲವಾದರೂ, ಅಂದಾಜು 40 ಸಾವಿರ ಕೋಟಿ ರೂ ಸಾಲ ಪಡೆದಿದ್ದಾರೆ ಎಂಬ ಮಾಹಿತಿ ಇದೆ.ಮೈಕ್ರೋಫೈನಾನ್ಸ್ ಸಂಸ್ಥೆಗಳು ತಾವು ವ್ಯವಹರಿಸುತ್ತಿರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳಲ್ಲಿ ನೊಂದಣಿಯಾಗುವುದು ಕಡ್ಡಾಯವಾಗಿದೆ. ಈ ಸಂಸ್ಥೆಗಳು ವಿಧಿಸುವ ಬಡ್ಡಿದರ, ಸಾಲಗಾರರ ಮಾಹಿತಿ ಹಾಗೂ ಸುಸ್ತಿ ಸಾಲಗಳ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕು. ತ್ರೈ ಮಾಸಿಕ ಮತ್ತು ವಾರ್ಷಿಕ ವ್ಯವಹಾರದ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು. ನಿಗದಿತ ಅವಧಿಯಲ್ಲಿ ಮಾಹಿತಿಯನ್ನು ಸಲ್ಲಿಸದಿದ್ದರೆ 6 ತಿಂಗಳ ಕಾರಗೃಹವಾಸ ಅಥವಾ 10 ಸಾವರಿರೂ ವರೆಗೆ ದಂಡ ಅಥವಾ ಎರಡೂ ಶಿಕ್ಷೆಗೆ ಗುರಿಯಾಗುತ್ತಾರೆ.ವಿವಾದಗಳನ್ನು ಇತ್ಯರ್ಥಗಳನ್ನು ಒಂಬುಡ್ಸ್‌ಮನ್‌ಗಳನ್ನು ಸರ್ಕಾರ ಅಧಿಸೂಚನೆ ಮೂಲಕ ನೇಮಕ ಮಾಡುವ ಅಧಿಕಾರ ಹೊಂದಿರುತ್ತದೆ.

# ಕಾಮಗಾರಿಗಳಿಗೆ ಚಾಲನೆ

ಶೆಡ್ ನಿರ್ಮಾಣ, 54.27 ಲಕ್ಷ ರೂ.ಗಳಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ತ್ಯಾಜ್ಯ ಸಂಸ್ಕರಣೆ ಶೆಡ್ ನಿರ್ಮಾಣ, 73.88 ಲಕ್ಷ ರೂ.ಗಳ ವೆಚ್ಚದಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕದ ಸುತ್ತಲೂ ಕಂಪೌಂಡ್ ಗೋಡೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ನಗರೋತ್ಥಾನ ಹಂತ-4ರಡಿ ಆಯ್ಕೆಯಾದ ಫಲಾನುಭವಿಗಳಿಗೆ ಅಲ್ಮೇರಾ, ಹೊಲಿಗೆಯಂತ್ರ, ಪೌರಕಾರ್ಮಿಕರಿಗೆ ಸುರಕ್ಷತಾ ಹಾಗೂ ಸೋಲಾರ್ ವಾಟರ್ ಹಿಟರ್ ಹಾಗೂ ಕಳೆದ 2021-22ನೇ ಸಾಲಿನ ಡಾ.ಬಿ.ಆರ್.ಅಂಬೇಡ್ಕರ ನಿವಾಸ ಯೋಜನೆ (ನಗರ) ಹೆಚ್ಚುವರಿ ಅಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಮನೆ ಮಂಜೂರಾತಿ ಮತ್ತು ಕಾಮಗಾರಿ ಆದೇಶ ಪತ್ರ ವಿತರಣೆ ಸಹ ಮಾಡಲಾಯಿತು. ಬೆಳಗಲಿಯಿಂದ ಮಿರ್ಜಿವರೆಗೆ 400 ಲಕ್ಷ ರೂ.ಗಳ ವೆಚ್ಚದಲ್ಲಿ ರಸ್ತೆ ನಿರ್ಮಾಣ, ತಲಾ 20 ಲಕ್ಷದಲ್ಲಿ ಮಾಳಿಂಗರಾಯ ತೋಟದ ಹತ್ತಿರ ಮತ್ತು ಪಾದಗಟ್ಟಿ ಹತ್ತಿರ ಅಂಗನವಾಡಿ ಕೇಂದ್ರ ನಿರ್ಮಾಣ ಹಾಗೂ 150 ಲಕ್ಷದಲ್ಲಿ ನಿರ್ಮಿಸಲಾದ ಹೊಸ ಬಸ್ ನಿಲ್ದಾಣವನ್ನು ಉದ್ಘಾಟನೆ ಮಾಡಲಾಯಿತು. ಪ್ರತಿಯೊಂದು ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಕಾಮಗಾರಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ತಿಮ್ಮಾಪೂರ ಸೂಚಿಸಿದರು. ಕಾರ್ಯಕ್ರಮದಲ್ಲಿ ರನ್ನಬೆಳಗಲಿ ಪ.ಪಂಚಾಯತ ಅಧ್ಯಕ್ಷೆ ರೂಪಾ ಸದಾಶಿವ ಹೊಸಟ್ಟಿ, ಉಪಾಧ್ಯಕ್ಷೆ ಸಹನಾ ಸಾಂಗಲೀಕರ, ಮಹಾಲಿಂಗಪುರ ಪುರಸಭೆ ಅಧ್ಯಕ್ಷ ಯಲ್ಲನಗೌಡ ಪಾಟೀಲ, ಸದಸ್ಯರಾದ ಪ್ರವೀಣ ಪಾಟೀಲ, ಸದಾಶಿವ ಸಂಕರೆಡ್ಡಿ, ಪ್ರವೀಣ ಭರಮಣಿ, ಮುಬಾರಕ ಅತ್ತಾರ, ಕರಿಯಪ್ಪ ಕುಂಬಾಡಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿ.ಪಂ ಸಿಇಓ ಶಶಿಧರ ಕುರೇರ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಮುದಾಯದ ಕೇಂದ್ರಿತ ಅಧ್ಯಯನದಿಂದ ಸಾಂಸ್ಕೃತಿಕ ಚರಿತ್ರೆ ನಿರ್ಮಾಣ: ಡಾ. ದುಶಾನ್ ಡೀಕ್




ಮಲ್ಲಮ್ಮ ನುಡಿ ವಾರ್ತೆ.
ಬಸವಕಲ್ಯಾಣ:- ಫೆ 13. ಸಮುದಾಯದ ಕೇಂದ್ರಿತ ಅಧ್ಯಯನದಿಂದ ಈ ನೆಲದ ಸಾಂಸ್ಕೃತಿಕ ಚರಿತ್ರೆಯನ್ನು ರಚಿಸಬಹುದು ಎಂದು ಸ್ಲೋವಾಕಿಯಾದ ಕೊಮೆನಿಯಸ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ದುಶಾನ್ ಡೀಕ್ ಹೇಳಿದರು. ಇಲ್ಲಿನ ಡಾ.ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ಅಲ್ಲಮಪ್ರಭು ಪಿಯು ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 'ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂರಚನೆ' ಕುರಿತ ಪ್ರತಿಷ್ಠಾನದ 89ನೇ ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿ

ಸಮುದಾಯ ಕೇಂದ್ರಿತ ಚರಿತ್ರೆಯ ಅಧ್ಯಯನದಿಂದ ಹೊಸ ಸಾಂಸ್ಕೃತಿಕ ತಿಳುವಳಿಕೆ ಹಾಗೂ ಸಾಧ್ಯತೆಗಳು ಅರಿಯಬಹುದು. ಜನ ಸಮುದಾಯದ ನೆಲೆಯಲ್ಲಿ ಚರಿತ್ರೆ ಕಟ್ಟುವ ಪ್ರಯತ್ನ ನಡೆಯಬೇಕು.ಧರ್ಮ ಹಾಗೂ ಸಂಸ್ಕೃತಿಯ ಬಗೆಗೆ ಜನ ಏನು ಅಂದುಕೊಂಡಿದ್ದಾರೆ ಎಂಬುದನ್ನು ಅರ್ಥೈಸಿಕೊಂಡು ದಾಖಲಿಸುವುದು ಚರಿತೆ-ಯಾಗಿದೆ ಎಂದರು. ಜಗತ್ತಿನ ಯಾವುದೇ ಭಾಷೆ ಮತ್ತು ಯಾವುದೇ ವಿಶ್ವವಿದ್ಯಾಲಯಗಳು ವಚನಕಾರರ ಬಗೆಗೆ ಅಧ್ಯಯನ ಮಾಡಬೇಕಾದರೆ, ವಚನಗಳ ಮೂಲ ಪಠ್ಯ ಓದಲೇಬೇಕು. ಅನ್ಯ ಭಾಷಿಕರು ಕನ್ನಡದ ಮೇಲೆ ಪ್ರಭುತ್ವ ಪಡೆದು ವಚನವನ್ನು ಗ್ರಹಿಸಬೇಕು. ವಚನಗಳು ಹೊಸ ಸಾಂಸ್ಕೃತಿಕ ಪರಂಪರೆ ರೂಪಿಸಿದ ಪಠ್ಯಗಳು

ಅನುವಾದಿತ ಕೃತಿಗಳಿಗಿಂತ ಮೂಲ ಪಠ್ಯದಿಂದ ಅವುಗಳ ಆಶಯ, ತಾತ್ವಿಕತೆ ಮತ್ತು ಸಿದ್ಧಾಂತಗಳು ಗ್ರಹಿಸಲು ಸಾಧ್ಯ ಎಂದರು. ಈ ನೆಲದ ಶರಣರು ಮತ್ತು ಸಂತರು ಜಾತಿ-ಮತ-ಪಂಥಗಳ ಎಲ್ಲೆಯನ್ನು ಮೀರಿದ್ದಾರೆ. ಅವರಿಗೆ ಯಾವುದೇ ಸ್ಥಾಪಿತ ಮತ್ತು ಜಡಗೊಂಡ ಚೌಕಟ್ಟಿನಲ್ಲಿಟ್ಟು ನೋಡಲು ಸಾಧ್ಯವೇ ಇಲ್ಲ. ಅವರು ಕೊಟ್ಟ ಚಿಂತನೆಗಳು, ನೋಟಕ್ರಮಗಳು ಸಮಾಜದ ಗ್ರಹಿಕೆಗೆ ಹೊಸ ವೈಧಾನಿಕತೆ ಒದಗಿಸಿವೆ. ಕನ್ನಡದ ವಚನ ವಾಙ್ಮಯ ಮತ್ತು ಮರಾಠಿಯ ಸಂತ ವಾಙ್ಮಯಗಳಲ್ಲಿ ಹೆಚ್ಚು ಮಾನವೀಯ ಚಿಂತನೆಗಳು ತುಂಬಿವೆ. ಅವರು ಮನುಷ್ಯತ್ವವನ್ನು ಹಾಗೂ ಸಹಬಾಳ್ವೆಯನ್ನು 'ಧರ್ಮ'ದ ಸ್ವರೂಪವೆಂದು ತಿಳಿಸಿದರು. ಎಲ್ಲ ಜೀವಿಗಳ ಒಳಿತಿನಲ್ಲೇ ಧರ್ಮ ಅಡಗಿದೆ ಎಂಬುದು ಬಸವಣ್ಣನವರ ನಂಬಿಕೆಯೂ ಆಗಿತ್ತು ಎಂದರು.

ಭಾರತೀಯ ಸಮಾಜವು ಬಹು ಧರ್ಮಿಯರಿಂದ, ಬಹು ಭಾಷಿಕರಿಂದ, ಬಹು ಸಂಸ್ಕೃತಿಯಿಂದ ಕೂಡಿದೆ. ಇದನ್ನು ಬಹುತ್ವದ ನೆಲೆಯಲ್ಲಿಯೇ ಅಭ್ಯಾಸಿಸಬೇಕಾಗುತ್ತದೆ. ವಚನಗಳ ಅಧ್ಯಯನ ನಡೆಸಬೇಕಾದರೆ ವಚನಕಾರರ ಸಾಮಾಜಿಕ, ರಾಜಕೀಯ, ಸಾಂಸ್ಕೃತಿಕ ಸಂದರ್ಭದ ಅರಿವು ಮುಖ್ಯವಾಗುತ್ತದೆ. ಕಾಲಪ್ರಜ್ಞೆ ಪ್ರಧಾನವಾಗುತ್ತದೆ.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಚಂದ್ರಕಾಂತ ಅಕ್ಕಣ್ಣ ಮಾತನಾಡಿ, ದೇಶಿ ಮತ್ತು ವಿದೇಶಿ ಶಿಕ್ಷಣ ಪದ್ದತಿ ತುಂಬಾ ಭಿನ್ನವಾಗಿದೆ. ಸಂಶೋಧನೆಗೆ ಹೊರ ದೇಶಗಳಲ್ಲಿ ಹೆಚ್ಚು ಮಹತ್ವವಿದೆ. ಸಂಶೋಧಕರು ವಿದ್ವಾಂಸರಾದವರಿಗೆ ಸಾಮಾಜಿಕ ಬದ್ಧತೆ ಮತ್ತು ಹೊಣೆಗಾರಿಕೆ ಇರುತ್ತದೆ ಎಂದರು.

ಪ್ರತಿಷ್ಠಾನದ ನಿರ್ದೇಶಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಸಾಹಿತ್ಯದ ಜೀವಂತಿಕೆ ಇರುವುದು ಅದು ಆಯಾ ಕಾಲಘಟ್ಟದ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಸಮಕಾಲೀನ ಸಂದರ್ಭಕ್ಕೆ ಸ್ಪಂದಿಸುವದರಲ್ಲಿ. ಲೋಕದ ಎಲ್ಲ ರಚನೆಗಳ ಕುರಿತು ವಿದ್ವತ್ಪೂರ್ಣ ಅನುಸಂಧಾನ ನಡೆಸಿದ ಸಂಶೋಧನೆಗಳು ಹಲವು ಕಾಲ ಸಂಕಥದಗೊಳ್ಳುತ್ತವೆ ಎಂದರು.

ಡಾ. ಶಿವಾಜಿ ಮೇತ್ರೆ, ನಾಗರಾಜ ಮಾನೆ, ಇರ್ಫಾನ್ ಶೇಖ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶ್ರೀನಿವಾಸ ಶಿಂಧೆ ಸ್ವಾಗತಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ನಿರೂಪಿಸಿದರು. ಪ್ರತಿಷ್ಠಾನದ ಅಧ್ಯಕ್ಷ ಎಸ್.ಜಿ.ಹುಡೇದ ವಂದಿಸಿದರು.

# ಕಾಯಕ ಬಂಧುಗಳು ಉತ್ತಮವಾಗಿ ಕಾರ್ಯ ನಿರ್ವಹಿಸಿ ಎಲ್ಲರ ಪ್ರೀತಿಗೆ ಪಾತ್ರರಾಗಿ:ಇ. ಓ ಉಮೇಶ್



ಮಲ್ಲಮ್ಮ ನುಡಿ ವಾರ್ತೆ
ಲಿಂಗಸಗೂರು. ಫೆ. 13: ಕಾಯಕ ಬಂಧುಗಳಾಗಿ ನೇಮಕ ಹೊಂದಿದವರು ಉತ್ತಮವಾಗಿ ತಮ್ಮ ಕಾರ್ಯವನ್ನು ನಿರ್ವಹಿಸಿ ಉತ್ತಮ ಕಾಯಕ ಬಂದುಗಳಾಗಿ ಎಲ್ಲರ ಪ್ರೀತಿಗೆ ಪಾತ್ರರಾಗಿ ಎಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಹೇಳಿದರು.

ಲಿಂಗಸಗೂರು ತಾಲೂಕು ಪಂಚಾಯಿತಿಯ ಸಭಾಭವನದಲ್ಲಿ ಗ್ರಾಮ್ ಸ್ವರಾಜ್ ಅಭಿಯಾನ -ಕರ್ನಾಟಕ,

ಸ್ವ ಶಕ್ತಿ ಅಭಿವೃದ್ಧಿ ಸಂಸ್ಥೆ ಲಿಂಗಸಗೂರು ರವರ ಸಂಯುಕ್ತ ಆಶ್ರಯದಲ್ಲಿ ಕಾಯಕ ಬಂಧುಗಳ ತರಬೇತಿಯ ಮೊದಲನೆ ಬ್ಯಾಚನ ಉದ್ಘಾಟನಾ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ನರೇಗಾ ಯೋಜನೆಯಲ್ಲಿ ಕಾಯಕ ಬಂದುಗಳು ಉತ್ತಮವಾಗಿ ಕಾರ್ಯನಿರ್ವಹಣೆ ಮಾಡಬೇಕು ತಮ್ಮನ್ನು ಗ್ರಾಮ ಪಂಚಾಯಿತಿಗಳಿಂದ ಆಯ್ಕೆ ಮಾಡಿ ತರಬೇತಿಗೆ ಕಳಿಸಿಕೊಟ್ಟಿದ್ದು ಒಳ್ಳೆಯ ಅವಕಾಶವಾಗಿದ್ದು ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಮಾದರಿ ಕಾಯಕ ಬಂಧುಗಳಾಗಿ ಕೆಲಸ ಮಾಡಿ ಎಂದು ಅವರು ಕಾಯಕ ಬಂಧುಗಳಿಗೆ ಶುಭಹಾರೈಸಿದರು.

ನಂತರ ಗ್ರಾಮ್ಸ್ ಸಂಸ್ಥೆಯ ಮುಖ್ಯಸ್ಥರು ಹಾಗೂ ರಾಜ್ಯ ಸಮಿತಿಯ ಸದಸ್ಯರಾದ ಸೂಗರಯ್ಯ ಸ್ವಾಮಿಯವರು ಮಾತನಾಡಿ ನರೇಗಾ ಯೋಜನೆಯಲ್ಲಿ ಕಾಯಕ ಬಂಧುಗಳ ಪಾತ್ರ ಹಾಗೂ ಜವಾಬ್ದಾರಿ . ಗ್ರಾಮ ಸ್ವರಾಜ್ ಅಭಿಯಾನದ ಹಿನ್ನೆಲೆ ಅಭಿಯಾನದ ಗುರಿ ಉದ್ದೇಶಗಳ ಕುರಿತು ಮಾಹಿತಿಯನ್ನು ನೀಡಿದರು.ತದನಂತರ ಗ್ರಾಮ ಸ್ವರಾಜ್ ಅಭಿಯಾನದ ರಾಜ್ಯ ಸಂಯೋಜಕರಾದ ಅಶೋಕ್ ಯರಗಟ್ಟಿಯವರು ಮಹಾತ್ಮ ಗಾಂಧಿ ನರೇಗಾ ಯೋಜನೆಯ ದೃಷ್ಟಿಕೋನ ಮತ್ತು ವ್ಯಾಪ್ತಿ ಯೋಜನೆಯ ಉದ್ದೇಶಗಳ ಕುರಿತು ಮಾತನಾಡಿದರು.

ಈ ವೇಳೆ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ವೆಂಕಟೇಶ್ ದೇಸಾಯಿ, ಹಾಗೂ ಸ್ವಶಕ್ತಿ ಅಭಿವೃದ್ಧಿ ಸಂಸ್ಥೆಯ ಮುಖ್ಯಸ್ಥರಾದ ಶ್ರೀಮತಿ ಚಾಂದ್ ಬೇಗಂ, ಗ್ರಾಕೂಸ್ ಸಂಸ್ಥೆ ತಾಲೂಕು ಸಂಯೋಜಕ ಗುಂಡಪ್ಪ ಯಾರಡೋಣ, ಹಾಗೂ ಐ.ಇ.ಸಿ.ಸಂಯೋಜಕರಾದ ಬಾಲಪ್ಪ . ಎಸ್ ಎಂ ಟಿ ವಿಜಯ ಮಹಾಂತೇಶ ಮತ್ತು ಡಿಎಂಟಿ ರಮೇಶ ಗ್ರಾಮ ಕಾಯಕ ಮಿತ್ರರು ಅದಮ್ಮ ಕಾಯಕ ಬಂದುಗಳು ಹಾಗೂ ತಾಲೂಕು ಪಂಚಾಯತ್ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಸಂಸ್ಕಾರವಂತರು ಸಮಾಜದ ಆಸ್ತಿ: ಹಿರೇನಿಂಗಪ್ಪನವರ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಫೆ.13- ಸಂಸ್ಕಾರವಂತರು ಸಮಾಜದ ಆಸ್ತಿಯಾಗಿದ್ದು, ಶಿಕ್ಷಕರು ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಅವರಿಗೆ ಸಂಸ್ಕಾರ ಕಲಿಸಬೇಕು ಎಂದು ಮುಖ್ಯ ಶಿಕ್ಷಕ ಪಿ.ಎನ್.ಹಿರೇನಿಂಗಪ್ಪನವರ ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಸೂಳೇಭಾವಿಯಲ್ಲಿ ಜರುಗಿದ 1999-2000 ನೇ ಸಾಲಿನ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಬೆಳ್ಳಿ ಸಂಭ್ರಮ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಲ್ಲು ಉಳಿಯ ಏಟನ್ನು ಪೆಟ್ಟು ಎಂದುಕೊಂಡರೆ ಆ ಕಲ್ಲು ದೇವರಾಗಿ ಪೂಜಿಸಲ್ಪಡಲು ಹೇಗೆ ಸಾಧ್ಯವಿಲ್ಲವೋ ಹಾಗೆಯೇ ಗುರುಗಳು ನೀಡಿದ ಏಟನ್ನು ಮಕ್ಕಳು ಹೊಡೆತ ಎಂದುಕೊಂಡರೆ ಸಂಸ್ಕಾರವಂತರಾಗುವುದು ಕಷ್ಟ ಎಂದರು. ಡಾ.ಎಸ್ ರಾಧಾಕೃಷ್ಣನ್, ಸಾವಿತ್ರಿಬಾಯಿ ಪುಲೆಯವರ ಭಾವಚಿತ್ರಗಳಿಗೆ ಪುಷ್ಪ ವೃಷ್ಟಿಯ ಮೂಲಕ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜು ವಿಭಾಗದ ಗುರುವೃಂದದವರು ಕಾರ್ಯಕ್ರಮ ಉದ್ಘಾಟಿಸಿದರು.

40 ಜನ ಶಿಕ್ಷಕರಿಗೆ ಅಭಿನಂದನಾ ಪತ್ರ ಹಾಗೂ ಗೌರವ ಸನ್ಮಾನ ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಶಿಕ್ಷಕಿ ಎಸ್.ಎಸ್.ಮುಷ್ಠಿಗೇರಿಮಠ, ಸೂಳೇಬಾವಿಯ ಮಣ್ಣಿನಲ್ಲಿ ಭಾವೈಕ್ಯತೆ, ಸಮಾನತೆಯ ಸಂಸ್ಕಾರವಿದೆ. ಅದರ ಫಲವಾಗಿ ಇಂದು ಸುಸಂಸ್ಕೃತ, ಸಂವಿಧಾನಾತ್ಮಕ, ಭ್ರಾತೃತ್ವದ ಸಮಾಜ ಇಲ್ಲಿ ಅಸ್ಥಿತ್ವದಲ್ಲಿದೆ ಎಂದರು.ನಿವೃತ್ತ ಉಪನ್ಯಾಸಕ ಎಮ್.ಜಿ.ನಾಶಿಮಠ ಮಾತನಾಡಿ, ಕಲಿಸಿದ ಗುರುಗಳಿಗೆ ಗೌರವಿಸುವ ತಮ್ಮ ನಡೆ ಶ್ಲಾಘನೀಯ. ಆದರೆ ಬದಲಾದ ಇಂದಿನ ಕಾಲಘಟ್ಟದಲ್ಲಿ ವಯಸ್ಸಾದ ತಂದೆ-ತಾಯಿಗಳನ್ನು ನಿಕೃಷ್ಟವಾಗಿ ಕಾಣುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಂತಹ ತಂದೆ-ತಾಯಿ,ವಯೋವೃದ್ಧರನ್ನು ಪ್ರೀತಿಸಿ ಆರೈಕೆ ಮಾಡಿದರೆ ಅದುವೇ ನಾವು ಹಿರಿಯರಿಗೆ ನೀಡುವ ಗೌರವ ಎಂದರು.

ಪ್ರಾಥಮಿಕ ಶಾಲಾ ಶಿಕ್ಷಕರ ಪರವಾಗಿ ಎಂ.ಎಂ.ನಾಲತವಾಡ, ವಿ.ಆರ್.ವಜ್ರಮಟ್ಟಿ, ಪ್ರೌಢಶಾಲಾ ವಿಭಾಗದಿಂದ ಮುಖ್ಯಗುರುಮಾತೆ ಬಿ.ವಿ.ಕತ್ತಿ, ಎಸ್.ಎಸ್.ಹೊಸಳ್ಳಿ ಕಾಲೇಜು ವಿಭಾಗದಿಂದ ಉಪನ್ಯಾಸಕ ಬಿ.ಡಿ.ದೋಟಿಹಾಳ ಮಾತನಾಡಿದರು. ಹಳೆಯ ವಿದ್ಯಾರ್ಥಿಗಳಾದ ಶಿವು ಐಹೊಳ್ಳಿ, ಮಹಾಂತೇಶ ಚಲವಾದಿ, ಶಿವಪ್ಪ ರಾಮದುರ್ಗ, ಗೀತಾ ಭಾಪ್ರಿ, ಬಸವರಾಜ ಜೀರಗಿ, ರಮೇಶ ಮಿಣಜಗಿ ಅನಿಸಿಕೆ ಹಂಚಿಕೊಂಡರು. ಗುಲಾಮನಬಿ ಹಿರೇಮನಿ ಪ್ರಾರ್ಥಿಸಿದರು. ಸೋಮು ಬಸರಕೋಡ ಸ್ವಾಗತಿಸಿದರು. ವಿಜಯಕುಮಾರ ಧುತ್ತರಗಿ, ರವಿ ಕತ್ತಿ ನಿರೂಪಿಸಿದರು. ಆರ್.ಹೆಚ್.ಬೀಳಗಿ, ಎಂ.ಬಿ.ಪತ್ತಾರ, ಎಸ್.ವಿ.ಲೆಂಕೆಪ್ಪನವರ, ಸಿ.ಎಸ್.ಮರಡಿ, ವಿ.ಎ. ಗುರುಶಾಂತನವರ, ಎಚ್.ಎನ್.ಮಾಚಾ, ಪಿ.ಎನ್.ಭಟ್, ಎಸ್.ಎ.ಮೇಳಿ, ಪರಶು ಕತ್ತಿ, ಮಾರುತಿ ಹುಣಶ್ಯಾಳ, ಅಬ್ದುಲ್ ರೆಹಮಾನ್ ಪಾಪಣ್ಣವರ, ಸಂಗಪ್ಪ ನಾವಿ, ವಿಠ್ಠಲ ಕಂಬಾರ, ಚಂದ್ರು ಹನುಮಸಾಗರ, ಗೀತಾ ಚಂದ್ರಗಿರಿ, ಗಾಯತ್ರಿ ಬಿಸರಡ್ಡಿ, ಮಾಬೂಬಿ ಸಾಲಮನಿ ಇತರರು ಉಪಸ್ಥಿತರಿದ್ದರು.

# ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವೈಭವದ ಸಿದ್ದಲಿಂಗೇಶ್ವರರ ರಥೋತ್ಸವ



ಸೇಡಂ: ಫೆ.13. ತಾಲೂಕಿನ ಬಟಗೇರಾ (ಬಿ) ಗ್ರಾಮದ ಆರೈದ್ಯದೈವ ಶ್ರೀ ಸಿದ್ಧಲಿಂಗೇಶ್ವರ ಏಳನೇ ಜಾತ್ರ ಮಹೋತ್ಸವ ಬುಧವಾರ ಸಂಜೆ ಸಹಸ್ರಾರು ಭಕ್ತರ ಜಯಘೋಷ ಹಾಗೂ ವಾದ್ಯ ಮೇಳಗಳ ಮದ್ಯ ಅದ್ದೂರಿಯಾಗಿ ಜರಗಿತು.

ಶ್ರೀ ಸಿದ್ಧಲಿಂಗೇಶ್ವರ ರಥೋತ್ಸವವು. ಕ್ರಿಯ ಶಿಲಾರತ್ನ ಶ್ರೀ ಷ.ಬ್ರ ಸಿದ್ದವೀರ ಶಿವಾಚಾರ್ಯ ನೇತೃತ್ವದಲ್ಲಿ ಸಹಸ್ರಾರು ಭಕ್ತರ. ಸಹಯೋಗದೊಂದಿಗೆ.

ಶ್ರೀ ಸಿದ್ಧಲಿಂಗೇಶ್ವರ ಮಹಾರಾಜ ಜೈ ಜೈ ಶ್ರೀ ಚೆನ್ನವೀರ ಮಹಾರಾಜ, ಜೈ ಜೈ ಹಾಗೂ ಹರ ಹರ ಮಾಹಾದೇವ ಎಂದು ಜಯಘೋಷ ಮುಳಗಿದವು.

ಭಾವೈಕತೆಯ ಸಂಕೇತ ಸಾರುವ ಕೇಸರಿ ಧ್ವಜಗಳು ರಾರಜಿಸಿದವು.

ಹೂವಿನಿಂದ ಅಲಂಕಾರಿಸಿ ಕೇಸರಿ ಧ್ವಜಗಳು ಹಿಡಿದು-ಕೊಂಡು ರಥೋತ್ಸವ ಮುಂದೆ ಸಾಗಿದರು.

ಹಾಗೂ ಹಲವಾರು ಬಣ್ಣ ಬಣ್ಣದ ಮದ್ದು ಸಡಿಸಿ ಸಂಭ್ರಮದಿಂದ ಆಚರಿಸಿದರು.

ಭಕ್ತರು ಹೂವು ಉತ್ತುತ್ತಿ ಬಾಳೆಹಣ್ಣು ಹಾರಿಸಿ ಭಕ್ತಿಯ ಪರಕಾಷ್ಟೆ ಮೇರೆದರು.

ಭಕ್ತರು ಹರ್ಷೋದ್ಗಾರ ಕರಡಾತನ ಮುಗಿಲು ಮುಟ್ಟಿತ್ತು. ಸಾವಿರಾರು ಭಕ್ತ ಸಮೂಹ ಬೀದಿ ಬೀದಿಗಳಲ್ಲಿ ಹಾಗೂ ಮನೆಗಳ ಮೇಲೆ ನಿಂತು ದೂರದಿಂದಲೇ ರಥೋತ್ಸವ ಕಣ್ಣುತುಂಬಿಸಿಕೊಂಡು ಚಪ್ಪಾಳೆ ತಟ್ಟಿ ಹರ್ಷ ವ್ಯಕ್ತಪಡಿಸಿದರು.

ರಥವು ಸುಗಮವಾಗಿ ಪಾದಗಟ್ಟಿ ತಲುಪಿ ಸ್ವಸ್ಥಳಕ್ಕೆ ಬಂದು ತಲುಪಿತು.

ಪಂಚಗೃಹ ಹಿರೇಮಠ ನಾಗಾವಿ ಹಾಗೂ ಬಟಗೇರಾ(ಬಿ) ಬೃಹನ್ಮಠದ ಪೂಜ್ಯರಾದ ಕ್ರಿಯ ಶಿಲಾ ರತ್ನ ಷ.ಬ್ರ ಸಿದ್ದವೀರ ಮಹಾಸ್ವಾಮಿಗಳು ರಥೋತ್ಸವಕ್ಕೆ ಪೂಜ್ಯ ವಿಧಿ ವಿಧಾನ ಮಾಡಿ ರಥೋತ್ಸವಕ್ಕೆ ಚಾಲನೆ ನೀಡಿದರು.

ಬುಧವಾರ ಬೆಳಗ್ಗೆ ವಾದ್ಯ ಮೇಳಗಳೊಂದಿಗೆ.ಮುತ್ಯೆದರಿಂದ ಗಂಗಾ ಸ್ಥಾನಕ್ಕೆ ತೇರಳಿ ಬಂದು ಕೃತಗದ್ದುಗೆಗೆ ಮಹಾ ರುದ್ರಾಭಿಷೇಕ. ನಂತರ ಪಲ್ಲಕ್ಕಿ ಮೆರವಣಿಗೆ ಗ್ರಾಮದ ಬೀದಿ ಬೀದಿಗಳಲ್ಲಿ. ಪುರುವಂತರ ಸೇವೆಯೊಂದಿಗೆ ಜರಗಿತು.

ಹಾಗೂ ಮದ್ಯಹ್ನ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಸಂಜೆ ಶ್ರೀ ಸಿದ್ಧಲಿಂಗೇಶ್ವರ ರಥೋತ್ಸವ ವೇಳೆಯಲ್ಲಿ. ಗ್ರಾಮದ ಮುಖಂಡ ರಾದ ಮಾಜಿ ಜಿ.ಪಂ ಸದಸ್ಯ ವೀರರೆಡ್ಡಿ ಹೂವಿನಭಾವಿ,ಜೇ.ಡಿ.ಎಸ್ ಮುಖಂಡ ಮುಕ್ರಂಖಾನ,ಶರಣಗೌಡ ಪೋ.ಪಾಟೀಲ್. ಗ್ರಾಮದ ಮುಖಂಡ ಶಿವರೆಡ್ಡಿ ಹೂವಿನ ಬಾವಿ,ಸಿದ್ರಾಮಪ್ಪ ಪಾಟೀಲ್ ಇಂಜೋಳ್ಳಿ, ತಮ್ಮರೆಡ್ಡಿ ಹಾಸನಪಲ್ಲಿ, ಗ್ರಾ.ಪಂ ಸದಸ್ಯ ವೆಂಕಟರೆಡ್ಡಿ ಹಾಸನಪಲ್ಲಿ, ಗ್ರಾ.ಪಂ ಸದಸ್ಯ ಶರಣಪ್ಪ ಹೊಸೂರು,ಗ್ರಾಮದ ಮುಖಂಡ ವೀರಾರೆಡ್ಡಿ ಯಾನಾಗುಂದಿ, ಮುಖಂಡ ರುದ್ರಗೌಡ ಪಾಟೀಲ್, ವಿಜಯಕುಮಾರರೆಡ್ಡಿ ಮಳಖೇಡ್,

ಸಿದ್ದಲಿಂಗಯ್ಯ ಪುರಾಣಿಕ್, ಶಂಕ್ರಯ್ಯ ಸ್ವಾಮಿ, ರೈತ ವೆಂಕಟರೆಡ್ಡಿ ನಾಯಿಕೋಟಿ, ಮಲ್ಲರೆಡ್ಡಿ ರಾಜೋಳ್ಳಿ, ನಿವೃತ್ತ ಶಿಕ್ಷಕ ಭೀಮರೆಡ್ಡಿ ಗೌರಿಮನಿ, ಮಲ್ಲಿಕಾರ್ಜುನ ಬುಗ್ಗಣಿ, ದೇವೀಂದ್ರಪ್ಪ ಮಡಿವಾಳ,ಗೈಬಸಾಬ ಬಹರಪೇಠ, ಮಲ್ಲಪ್ಪ ಹೋಸೂರ,ಮಲ್ಕಪ್ಪ ಪೂಜಾರಿ, ಗ್ರಾಮದ ಹಲವಾರು ಹಿರಿಯರು ಹಾಗೂ ಗ್ರಾಮದ ಅಕ್ಕ ಪಕ್ಕದ ಗ್ರಾಮಸ್ಥರು ಸೇಡಂ ಪೋಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮದ ಪ್ರಮುಖರು ಶ್ರೀ ಮಠದ ಸೇವಾ ಸಮಿತಿ ಅಧ್ಯಕ್ಷರು ಸರ್ವ ಸದಸ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಪಾಲ್ಗೊಂಡಿದ್ದರು.

ಇದೆ ಸಂದರ್ಭದಲ್ಲಿ ಮಧ್ಯಾಹ್ನ ಜಿಲ್ಲಾ ಕೃಷಿ ಮತ್ತು ರಾಜ್ಯ ಕೃಷಿ ಸದಸ್ಯ ಬಸವರಾಜ ಪಾಟೀಲ್ ಊಡಿಗಿ, ನಾಗೇಶರಾವ್ ಮಾ.ಪಾಟೀಲ್, ಮಾಜಿ ಎ.ಪಿ. ಎಮ್. ಸಿ ಅಧ್ಯಕ್ಷ ಗುರನಾಥರೆಡ್ಡಿ, ವಿಶ್ವನಾಥ್ ಪಾಟೀಲ್ ಬೋಮ್ಮನಳ್ಳಿ,

ಮುರಳಿಧರರೆಡ್ಡಿ ಕೋಂತನಪಲ್ಲಿ ಶಿವರೆಡ್ಡಿ ರಾವಲಪಲ್ಲಿ, ಸಿದ್ದಣ್ಣ ಬುಕ್ಕಾ,ಬಸವರಾಜ ಎಮ್ಮಿ, ವೀರಭಧ್ರಪ್ಪ ಕಲ್ಲಶೇಟ್ಟಿ,

ಬಸವರಾಜ ಹಡಪದ, ಸಿದ್ದಲಿಂಗರೆಡ್ಡಿ ಹಾಸನಪಲ್ಲಿ,ಮಲ್ಕಪ್ಪ ಪಟ್ಟಣ್ಣ, ಅನೇಕ ಕಾಂಗ್ರೆಸ್ ಮುಖಂಡರು ಗ್ರಾಮದ ಅನೇಕ ಮುಖಂಡರು ಭಾಗವಹಿಸಿದ್ದರು.

# ಮೂವರಿಗೆ ತ್ರಿವೇಣಿ ಶೆಲ್ಲಿಕೇರಿ ಸಾಹಿತ್ಯ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಫೆ.13-ತ್ರಿವೇಣಿ ಶೆಲ್ಲಿಕೇರಿ ಪ್ರತಿಷ್ಠಾನದವತಿಯಿಂದ ತ್ರಿವೇಣಿ ಶೆಲ್ಲಿಕೇರಿ ಸಾಹಿತ್ಯ ಪ್ರಶಸ್ತಿ-2024 ಮೂರು ಪ್ರಕಾರದಲ್ಲಿ ನೀಡಲಾಗುತ್ತಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಮಲ್ಲಿಕಾರ್ಜುನ ಶೆಲ್ಲಿಕೇರಿ ತಿಳಿಸಿದರು. ನಗರದಲ್ಲಿ ಗುರುವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾದಂಬರಿ ವಿಭಾಗದಲ್ಲಿ ತುಮಕೂರಿನ ಗುರುಪ್ರಸಾದ ಕಂಟಲಗೆರೆ ಅವರ 'ಅಟ್ರಾಸಿಟಿ' ಕಾದಂಬರಿ, ಬೆಳಗಾವಿಯ ಲಕ್ಷ್ಮಣ ಶರೇಗಾರ ಅವರ 'ತಿದಿಯ ತುದಿಗೆ ಬೆಂಕಿಯ ಉಗುಳು' ಎಂಬ ಕಥಾಸಂಕಲನ ಹಾಗೂ ಚಿಕ್ಕಮಗಳೂರಿನ ಶಶಿ ತರೀಕೆರೆ ಅವರ 'ಪ್ಯೂಪಾ' ಕವನ ಸಂಕಲನಕ್ಕೆ ಸಾಹಿತ್ಯ ಪ್ರಶಸ್ತಿ ನೀಡಲಾಗುತ್ತಿದೆ ಎಂದು ತಿಳಿಸಿದರು. ಈ ಮೂವರು ಪ್ರಶಸ್ತಿ ವಿಜೇತರಿಗೆ ತಲಾ 10 ಸಾವಿರ ರೂ.ನಗದು ಮತ್ತು ಪ್ರಶಸ್ತಿ ಫಲಕ ನೀಡಿ ಗೌರವ ಸನ್ಮಾನ ಮಾಡಲಾಗುತ್ತದೆ. ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಫೆ.23ರಂದು ನವನಗರದ ಡಿಸಿಸಿ ಬ್ಯಾಂಕ್ ಸಭಾಭವನದಲ್ಲಿ ಬೆಳಿಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಕಾರ್ಯಕ್ರಮ ಉದ್ಘಾಟಿಸಲಿದ್ದು, ತೋಟಗಾರಿಕೆ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ ಪಾಲ್ಗೊಳ್ಳಲಿದ್ದಾರೆ ಎಂದು ಶೆಲ್ಲಿಕೇರಿ ತಿಳಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ಶಿವಾನಂದ ಶೆಲ್ಲಿಕೇರಿ, ಆರ್.ಸಿ.ಚಿತ್ತವಾಡಗಿ ಹಾಗೂ ಮನೋಹರ ಬ್ಯಾಡಗಿ ಇದ್ದರು.

# ಬೀದರ್ ಜಿಲ್ಲೆಯಲ್ಲಿ ಐಟಿಬಿಟಿ ಬೃಹತ್ ಕೈಗಾರಿಕೆ ಸ್ಥಾಪನೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಬೀದರ್‌ಜಿಲ್ಲೆಯಲ್ಲಿರುವ ಪದವಿಧರನಿರುದ್ಯೋಗಿಗಳಿಗೆ ಕೆಲಸ ಕೊಡುವ ಐಟಿಬಿಟಿ ಮೇಘಾ ಕೈಗಾರಿಕೆಗಳನ್ನು ಸ್ಥಾಪನೆ ಮಾಡಬೇಕೆಂದು ಬೀದರ್ ಜಿಲ್ಲಾ ಎಸ್ ಸಿ ಸಿ ಎಸ್ಟಿ ಸಣ್ಣ ಕೈಗಾರಿಕೆಗಳ ಸಂಘದಪ್ರಧಾನಕಾರ್ಯದರ್ಶಿ ಪ್ರಥ್ವಿರಾಜ ಎಸ್ ಮನವಿ ಮಾಡಿದ್ದಾರೆ.

ಈ ಕುರಿತು ಬೆಂಗಳೂರಿನಲ್ಲಿ ಪಂಚಾಯತ ರಾಜ ಮತ್ತು ಐಟಿಬಿಟಿಸಚಿವರಾದಪ್ರಿಯಾಂಕ್ ಖರ್ಗೆ ಅವರನ್ನುಭೇಟಿಯಾಗಿ ಮನವಿ ಸಲ್ಲಿಸಿ ಐತಿಹಾಸಿಕ, ಸಾಂಸ್ಕೃತಿಕವಾಗಿಅತ್ಯಂತಮಹತ್ವದ ಜಿಲ್ಲೆಯಾಗಿರುವ ಬೀದರ್ ಆರ್ಥಿಕವಾಗಿ ಸುಭದ್ರಗೊಂಡು ಪ್ರಗತಿ ಸಾಧಿಸಲು ವಿಶೇಷ ಗಮನ ನೀಡುವುದರ ಜೊತೆಗೆ ದುಡಿಯುವಕೈಗಳಿಗೆಉದ್ಯೋಗ ನೀಡಿ ಸ್ವಾವಲಂಬನೆ ಬದುಕಿಗೆ ದಾರಿದೀಪ ಮಾಡಬೇಕಾಗಿದೆ.

ಉದ್ಯೋಗಕ್ಕಾಗಿ ಬೀದರ್ ಜಿಲ್ಲೆಯ ಬಿಇ, ಡಿಪ್ಲೋಮಾ, ಸಿವಿಲ್‌ಇಂಜಿನಿಯರ್‌ಸೇರಿದಂತೆ ವಿವಿಧಪದವಿಧರನಿರುದ್ಯೋಗಿ ಯುವಕ-ಯುವತಿಯರು ನೆರೆ ರಾಜ್ಯಗಳಾದ ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ಇತರೆ ರಾಜ್ಯಗಳಿಗೆ ಗೂಳೆ ಹೋಗುತಿದ್ದಾರೆ. ಬೀದರ್ನಲ್ಲಿರುವ ಕೋಳಾರ ಮತ್ತು ನೌಬಾದ್ ಕೈಗಾರಿಕಾ ಪ್ರದೇಶದಲ್ಲಿ ಈ ಹಿಂದೆ ಅಂದರೆ 1986 ರಿಂದ ಇದುವರೆಗಿನ ನೂರಾರು ಕೈಗಾರಿಕೆಗಳು ಮುಚ್ಚಿಹೊಗಿದ್ದು, ಹಲವಾರು ಕೈಗಾರಿಕೆಗಳು ಇಲ್ಲಿಂದ ಬೇರೆಡೆ ಸ್ಥಳಾಂತರಗೊಂಡಿರುತ್ತವೆ.ಹೀಗಾಗಿ ಇಲ್ಲಿ ನಿರುದ್ಯೋಗದ ಜ್ವಲಂತ ಸಮಸ್ಯೆ ಇದೆ ಎಂದಿದ್ದಾರೆ.

ಬೀದರ್ ನಗರ ಪ್ರದೇಶದಲ್ಲಿ ಸುಮಾರು 20 ಸಾವಿರ ನಿರುದ್ಯೋಗಿ ಯುವಕ-ಯುವತಿಯರಿಗೆ ಉದ್ಯೋಗ ದೊರಕಿಸಿಕೊಡುವ ಐಟಿಬಿಟಿ ಬೃಹತ್‌ಮತ್ತುಮಧ್ಯಮಕೈಗಾರಿಕೆ ಸ್ಥಾಪನೆಮಾಡಿಸಿಕೊಡಬೇಕೆಂದು ಸಚಿವ ಪ್ರೀಯಾಂಕ ಖರ್ಗೆ ಅವರಿಗೆಸಲ್ಲಿಸಿದಮನವಿಯಲ್ಲಿ ಪ್ರಥ್ವಿರಾಜ್ ಎಸ್ ಕೋರಿದ್ದಾರೆ.

# ತೋರಣ:ವಿವಿಧ ಬೇಡಿಕೆ ಈಡೇರಿಸುವಂತೆ ಅಮರ ಉಪವಾಸ ಸತ್ಯಾಗ್ರಹ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ವಿವಿಧ ಬೇಡಿಕೆ ಈಡೇರಿಸುವಂತೆ ತಾಲೂಕಿನ ತೋರಣಾ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಬೇಡಿಕೆಗಳು ಈಡೇರಿಸುವ ತನಕ ಅಮರ ಉಪವಾಸ ಸತ್ಯಾಗ್ರಹ ಗ್ರಾಮಸ್ಥರು ಕುಳಿತಿದ್ದಾರೆ.

ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹತ್ತು ಹಾಸಿಗೆಗಳ ಹೆರಿಗೆ ಆಸ್ಪತ್ರೆಯ ಮಾರ್ಗಸೂಚಿಯಂತೆ ಸಿಬ್ಬಂದಿಗಳ ಭರ್ತಿ ಮಾಡಬೇಕು ಹೆರಿಗೆ ವ್ಯವಸ್ಥೆಯ ತುರ್ತಾಗಿ ಪ್ರಾರಂಭಿಸಬೇಕು.24*7 ಸೇವೆ ಒದಗಿಸುವುದು, ಅಂಬುಲೆನ್ಸ್ ವ್ಯವಸ್ಥೆ, ಮರಣೋತ್ತರ ಪರೀ-ಕ್ಷೆ ಕೋಣೆ ನಿರ್ಮಾಣ ಮಾಡಿ ಮರಣೋತ್ತರ ಪರೀಕ್ಷೆ ಮಾಡವುದು, ಸಿಬ್ಬಂದಿಗಳು ಕೇಂದ್ರ ಸ್ಥಾನದಲ್ಲಿರಬೇಕು ಈ ಬೇಡಿಕೆಗಳನ್ನು ಈಡೇರಿಸುವ ತನಕ ಅಮರ ಉಪವಾಸ ಸತ್ಯಾಗ್ರಹ ನಡೆಯುವುದು ಎಂದು ಗ್ರಾಮಸ್ಥರು ತಿಳಿಸಿದರು.

ಅಮರ ಉಪವಾಸ ಸತ್ಯಾಗ್ರಹ ಸ್ಥಳಕ್ಕೆ ಸೋಮವಾರ ಜಿಲ್ಲೆಯ ಡಿಹೆಚ್‌ಒ ಧ್ಯಾನೇಶ್ ನೀರ್ಗುಡೆ, ಕಮಲನಗರ ತಸಿಲ್ದಾರ್ ಅಮಿತ್ ಕುಮಾರ್ ಕುಲಕರ್ಣಿ ಕಮಲನಗರ ಸಿಪಿಐ ಅಮರೆಪ್ಪ, ಪಿಎಸ್‌ಐ ಚಂದ್ರಶೇಖರ್ ನಿರ್ಣೆ ಅವರು ಹೋರಾಟಗಾರರ ಮನವೊಲಿಸಲು ಪ್ರಯತ್ನಿಸಿದ್ದರು.

ಗ್ರಾಪಂ ಅಧ್ಯಕ್ಷ ಸುನೀಲ ಶಿಗರೆ,ಗ್ರಾಮದ ಮುಖಂಡರಾದ ಅರಹಂತ ಸಾವಳೆ,ಸುಲೇಮಾನ ಶೆಕ,ಪ್ರವೀಣ ಭೋಸಲೆ,ಪ್ರವೀಣ ಶಿಗರೆ,ಸಚಿನ ಬೆಂಬ್ರೆ,ಸಂತೋಷ ಗವಳಿ,ಸುನೀಲ ಮೊರ್ಗೆ,ಕುಶಾಲ ಸಿಂದೆ,ಮಾಧವ ಜಮಾದಾರ,ದೇವಿದಾಸ ಭೋಸಲೆ,ಪುಂಡಲಿಕ ಬಾಕಲೆ,ಪ್ರಕಾಶ ಮದನೆ,ನರಸಿಂಗ ಸೇರಿದಂತೆ ಇನ್ನಿತರರಿದ್ದರು

## ನಾವು ಗಳಿಸಿದ ಆಸ್ತಿ, ಅಂತಸ್ತು, ಸಂಪತ್ತು ಯಾವುದೂ ಕೊನೆಯವರೆಗೂ ಉಳಿಯೊಲ್ಲ: ಶಂಭುಲಿಂಗ ಸ್ವಾಮೀಜೀ



ಮಲ್ಲಮ್ಮ ನುಡಿ ವಾರ್ತೆ

ಆಳಂದ: ನಾವು ಗಳಿಸಿದ ಆಸ್ತಿ, ಅಂತಸ್ತು, ಸಂಪತ್ತು ಯಾವುದೂ ಕೊನೆಯವರೆಗೂ ಉಳಿಯೊಲ್ಲ. ಆದರೆ ಕಲಿತ ವಿದ್ಯೆ ಮಾತ್ರ ಕೊನೆಯವರೆಗೂ ಜತೆಗಿರುತ್ತದೆ ಎಂದು ಪಡಸಾವಳಿ-ಡೊಣಗಾಂವ ಮಠದ ಪೀಠಾಧಿಪತಿ ಶಂಭುಲಿಂಗ ಸ್ವಾಮೀಜೀ ಅವರು ತಾಲ್ಲೂಕಿನ ಪಡಸಾವಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆಯ 2006-2023ನೇ ಬ್ಯಾಚಿನ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಮಾತನಾಡುತ್ತಾ ನುಡಿದರು. ಜೀವನದಲ್ಲಿ ಗುರಿ, ಛಲ, ಗುರುವಿನ ಆಶೀರ್ವಾದ ಇದ್ದರೆ ಮಾತ್ರವೇ ವಿದ್ಯೆ ಕಲಿತು ಸಮಾಜದಲ್ಲಿ ಉನ್ನತ ಸ್ಥಾನ ಗಳಿಸಲು ಸಾಧ್ಯ ಎಂದರು.

ನಾವು ಇಂದು ಉನ್ನತ ಶಿಕ್ಷಣ ಪಡೆದ ಸಮಾಜದಲ್ಲಿ ಒಳ್ಳೆಯ ಸ್ಥಾನಮಾನ ಪಡೆದಿದ್ದರೆ ಅದರ ಹಿಂದೆ ಈ ಸಮಾಜದ ಕೂಲಿ, ಕಾರ್ಮಿಕಸೇರಿದಂತೆಪ್ರತಿಯೊಬ್ಬರ ಶ್ರಮ ಅಡಗಿರುತ್ತದೆ. ಅವರು ಬೆವರು ಸುರಿಸಿ ಸಂಪಾದಿಸಿದ ಹಣವನ್ನು ಖರ್ಚು ಮಾಡುವ ಮೂಲಕ ಕಟ್ಟಿದ ತೆರಿಗೆಯ ಹಣದಿಂದಲೆ ನಾವು ಈ ಸ್ಥಾನಕ್ಕೇರಿದ್ದೇವೆ ಎಂಬುದನ್ನು ಯಾರೂ ಮರೆಯಬಾರದು ಎಂದರು.

ಕಲ್ಬುರ್ಗಿ ಶಿಕ್ಷಕರ ತರಬೇತಿ ಕಾಲೇಜು ಪ್ರಾಚಾರ್ಯ ಜಿ.ಎಂ.ವಿಜಯಕುಮಾರ್ ಮಾತನಾಡಿ,ಪಾಠ ಪ್ರವಚನಗಳಷ್ಟೇ ನಡೆಯುವುದಲ್ಲ. ಕ್ರಿಯಾತ್ಮ ಚಟುವಟಿಕೆಗಳು ನಡೆದಾಗಲೇ ಶಾಲೆಯೊಂದು ಶೈಕ್ಷಣಿಕ ಅಭಿವೃದ್ಧಿ ಜತೆಗೆ ಗ್ರಾಮದ ಅಭಿವೃದ್ಧಿಯಲ್ಲೂ ತನ್ನ ಪಾತ್ರವನ್ನು ವಿಸ್ತರಿಸಲು ಸಾಧ್ಯವಾಗುತ್ತದೆ ಎಂಬುದು ಈ ಕಾರ್ಯಕ್ರಮದ ಮೂಲಕ ಸಾಬೀತಾಗಿದೆ. ಆ ನಿಟ್ಟಿನಲ್ಲಿ ಗ್ರಾಮದ ಕೆಲ ಕ್ರಿಯಾತ್ಮಕ ಯುವಜನರ ಕನಸಿನಂತೆ ಈ ಹಿರಿಯ ವಿದ್ಯಾರ್ಥಿಗಳ ಸಂಘದ ಆರಂಭ ಹಾಗೂ ಗುರುವಂದನಾ ಕಾರ್ಯಕ್ರಮವನ್ನುಹಮ್ಮಿಕೊಂಡಿದ್ದು ಇದಕ್ಕೆ ಈ ಗ್ರಾಮದ ಎಲ್ಲ ಯುವಕರು, ಯುವತಿಯರು ಮುಖಂಡರು ಪಕ್ಷಾತೀತವಾಗಿ ಒಗ್ಗೂಡಿ ಯಶಸ್ಸುಗೊಳಿಸಿದ್ದು ಎಲ್ಲರಿಗೂ ಅಭಿನಂದನೆ ಸಲ್ಲಿಸಿದರು. ಶಾಲೆಯಲ್ಲಿ ಶಿಕ್ಷಕರಾಗಿ ಕಾರ್ಯ ನಿರ್ವಹಿಸಿದ ಶಶಿಕಾಂತ ಪಡಶೆಟ್ಟಿ, ಬಸವರಾಜ ಜಳಕೋಟೆ, ಸಂತೋಷ ಹೂಗಾರ, ಸಂತೋಷ ಕಲಶೆಟ್ಟಿ, ಬಸವರಾಜ ದೊಡ್ಡಮನಿ, ರಮೇಶ

ಚವ್ಹಾಣ, ಉಮಾದೇವಿ ಸೇರಿದಂತೆ ಪ್ರಾಥಮಿಕ ಮತ್ತು ಪ್ರೌಢಶಾಲೆಯ 115 ಜನ ಶಿಕ್ಷಕರನ್ನು ಪುಷ್ಪವೃಷ್ಟಿ ಸಲ್ಲಿಸಿ ಸನ್ಮಾನಿಸಿ ಗುರುವಂದನೆ ಸಲ್ಲಿಸಿದರು. ಅದ್ದೂರಿ ಮೆರವಣಿಗೆ: ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಿಂದ ನೂರಕ್ಕೂ ಹೆಚ್ಚು ಜನ ಶಿಕ್ಷಕರನ್ನು ನೂರಾರು ವಿದ್ಯಾರ್ಥಿಗಳು ಭವ್ಯವಾಗಿ ಸ್ವಾಗತಿಸಿದರು.ಗ್ರಾಮದಮುಖ್ಯಬೀದಿ ಮುಖಾಂತರ ಪ್ರೌಢಶಾಲಾ ಸಭಾಂಗಣದವರೆಗೆ ಮೆರವಣಿಗೆ ಮೂಲಕ ಕರೆತರಲಾಯಿತು. ಮುಖಂಡರಾದ ಶ್ರೀಶೈಲ ಕಂಬಾರ್, ಬಾಬು ಕೋರ, ಶ್ರೀಪಾಲ್ ಬೋಗಾರ್, ಗಜಾನಂದ್ ಕುಂಬಾರ್, ಲಕ್ಷ್ಮಿಪುತ್ರ ಪಾಟೀಲ್, ಹಾಜಿ ದಸ್ತಗೀರ ಗುಂಜೋಟಿ, ಸಂತೋಷ್ ಚವ್ಹಾಣ ಹಾಗೂ ಹಳೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರು ಗ್ರಾಮಸ್ಥರು ಭಾಗವಹಿಸಿದ್ದರು. ಕೇದಾರ್ ಕುಂಬಾರ್ ನಿರೂಪಿಸಿದರು. ಬಸವರಾಜ ಘೋಡಕೆ ಸ್ವಾಗತಿಸಿದರು. ಸಂತೋಷ ಕುಂಬಾರ ವಂದಿಸಿದರು.

# ಇಂದು ಜೀತ ಪದ್ದತಿ ರದ್ದತಿ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.13-ಕಲಬುರಗಿ ಜಿಲ್ಲಾದಳಿತ,ಜಿಲ್ಲಾಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ "ಜೀತ ಪದ್ಧತಿ ರದ್ದತಿ ದಿನಾಚರಣೆ" ಕಾರ್ಯಕ್ರಮವನ್ನು ಫೆಬ್ರವರಿ 14 ರಂದು ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ಹಳೆಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಹಮ್ಮಿಕೊಳ್ಳಲಾಗಿದೆ.

ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸನವಲೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ನಗರ ಪೊಲೀಸ್ ಆಯುಕ್ತಡಾ. ಶರಣಪ್ಪ ಎಸ್.ಡಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ. ವೆಂಕಟೇಶ ಎ. ಶಿಂಧಿಹಟ್ಟಿ ಅವರು ವಿಶೇಷ ಉಪನ್ಯಾಸ ನೀಡುವರು.

# ರಕ್ತದಾನದಿಂದ ಆತ್ಮತೃಪ್ತಿ ಸಿಗುತ್ತದೆ: ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ : ರಕ್ತದಾನದಿಂದ ರಕ್ತದೊತ್ತಡ, ಮಧುಮೇಹದಂತಹರೋಗಗಳು ನಿಯಂತ್ರಣಕ್ಕೆ ಬರುವುದರ ಜತೆಗೆ ಆತ್ಮತೃಪ್ತಿ ಸಿಗುತ್ತದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆ ತಿಳಿಸಿದರು.

ಪಟ್ಟಣದತಾಲೂಕುಪಂಚಾಯತ ಸಭಾಂಗಣದಲ್ಲಿ ಗುರುವಾರ ನರೇಗಾ ಹಬ್ಬ 2025ರ ಪ್ರಯುಕ್ತ ನರೇಗಾ ಮಹಿಳಾ ಕೂಲಿ ಕಾರ್ಮಿಕರಿಗಾಗಿ ಆಯೋಜನೆ ಮಾಡಿರುವ ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮತ್ತು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದವರು,

ಜಿಲ್ಲೆಯಲ್ಲಿ ಹುಮನಾಬಾದ ತಾಲೂಕ ಮಾದರಿಯಾಗಿದೆ, ಏಕೆಂದರೆ ನರೇಗಾ ಯೋಜನೆ ಪರಿಣಾರಿಯಾಗಿ ಅನುಷ್ಠಾನ ಮಾಡುವುದರ ಜೊತೆಗೆ ಅದ್ದೂರಿಯಾಗಿ ನರೇಗಾ ಹಬ್ಬ ಆಚರಣೆ ಮಾಡಿ. ಮಹಿಳಾ ಕೂಲಿ ಕಾರ್ಮಿಕರಿಗೆ ಮತ್ತು ಮೇಟಿಗಳ ಕ್ರೀಡಾ ಕೂಟ ಸ್ಪರ್ಧೆ ಏರ್ಪಡಿಸಿ ಮತ್ತು ರಕ್ತದಾನ ಶಿಬಿರವನ್ನು ಅರ್ಥಪೂರ್ಣವಾಗಿ ಆಯೋಜನೆ ಮಾಡಲಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ರಕ್ತದಾನ ಮನುಷ್ಯನ ದೈಹಿಕ ಮತ್ತು ಮಾನಸಿಕ ಆರೋಗ್ಯದಮೇಲೆಸಕಾರಾತ್ಮಕ ಪರಿಣಾಮ ಬೀರುತ್ತದೆ. ಸಮಯಕ್ಕೆ ಸರಿಯಾಗಿ ರಕ್ತ ಸಿಗದೆ ವಿವಿಧ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳು, ಅಪಘಾತದ ಗಾಯಾಳುಗಳು ಮೃತಪಡುತ್ತಿದ್ದಾರೆ.ಅಮೂಲ್ಯವದ ಜೀವಗಳನ್ನು ಉಳಿಸಲು ರಕ್ತದಾನ ಮಾಡುವುದು ಅತಿ ಅಗತ್ಯವಾಗಿದ್ದು, ಸ್ವ-ಯಂ ಪ್ರೇರಿತರಾಗಿ ರಕ್ತದಾನ ಮಾಡಬೇಕು ಎಂದು ಕರೆ ನೀಡಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ಬಿ ನಾಯ್ಕರ ಮಾತನಾಡಿ, ಗ್ರಾಮ ಪಂಚಾಯತಿಯ ಅಧ್ಯಕ್ಷರು ಉಪಾಧ್ಯಕ್ಷರುಮತ್ತುಸದಸ್ಯರುಗಳ ಮತ್ತು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಮತ್ತು ನಮ್ಮ ಎಲ್ಲಾ ನರೇಗಾ ಸಿಬ್ಬಂದಿಯವರ ಸಹಕಾರದಿಂದ ನಾವು ತಾಲೂಕಿನಲ್ಲಿ ನರೇಗಾ ಯೋಜನೆಯಲ್ಲಿ ವಿವಿಧ ಕಾಮಗಳನ್ನುಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಗ್ರಾಮಗಳನ್ನು ಅಭಿವೃದ್ಧಿ ಮಾಡಲು ಸಾಧ್ಯ ಎಂದು ತಿಳಿಸಿದರು.

ರಕ್ತದಾನಮಹಾದಾನ ಇದರಿಂದ ಒಂದು ಜೀವ ಉಳಿಯಲು ಸಾಧ್ಯ, ರಕ್ತದಾನದಿಂದ ಯಾವುದೇ ತೊಂದರೆ ಇಲ್ಲ, ಆರೋಗ್ಯ ಚೇತರಿಕೆಗೆ ಸಾಧ್ಯ.ಯುವ ಜನತೆ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಮುಂದಾಗುವಂತೆ ಸೂಚಿಸಿದರು.

ನರೇಗಾ ಯೋಜನೆಯಡಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿರುವಂತಹ ತಾಲೂಕಿನ ಸಿಬ್ಬಂದಿಗಳಾದ. ತಾಲ್ಲೂಕು ಟಿ.ಎಮ್.ಐ.ಎಸ್, ತಾಂತ್ರಿಕ ಸಹಾಯಕರು, ಬಿ.ಎಫ್.ಟಿ ಮತ್ತು ಗ್ರಾಮ ಕಾಯಕ ಮಿತ್ರರನ್ನು ಮತ್ತು ಕ್ರೀಡಾಕೂಟದಲ್ಲಿ ಅತ್ಯುತ್ತಮವಾಗಿ ನಿರ್ಣಾಯಕರಾಗಿ ಕರ್ತವ್ಯ ನಿರ್ವಹಿಸಿದ್ದಕ್ಕಾಗಿ ವಿವಿಧ ಶಾಲೆಯ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಈ ವೇಳೆ ತಾಲೂಕು ಪಂಚಾಯತ ಸಹಾಯಕ ನಿರ್ದೇಶಕರುಗಾಳದ (ಉಖಾ) ಜಗನ್ನಾಥ್, ಮತ್ತು ಶಿವಲೀಲಾ (ಪಂ.ರಾ), ಧೂಮ್ಮನಸೂರು ಗ್ರಾಮ ಪಂಚಾಯತ್ ಅಧ್ಯಕ್ಷ ವೀರಪ್ಪ, ಹಳ್ಳಿಖೇಡ್ (ಕೆ) ಶಿವಕುಮಾರ ಪಾಟೀಲ್ ,ತಾಲೂಕು ಪಂಚಾಯತ ಸಿಬ್ಬಂದಿಗಳಾದ ಸತೀಶ್ ವಾಲಿ, ಪೂರ್ಣಿಮಾ, ಮಲ್ಲಿಕಾರ್ಜುನ್, ಪಾರ್ವತಿ, ಆಕಾಶ ಉದುಗೇರೆ, ದರ್ಶನ್, ನೀತಿ ಆಯೋಗದ ಸಂಯೋಜಕ ನಾಗೇಂದ್ರ ನಿರೂಪಿಸಿ ವಂದಿಸಿದರು ಮತ್ತು ತಾಲೂಕಿನ ವಿವಿಧ ಮಹಿಳಾ ಕೂಲಿ ಕಾರ್ಮಿಕರು ಮತ್ತು ಮೇಟಿಗಳು ಭಾಗಿಯಾಗಿದ್ದರು.

## 18 & 19 ರಂದು ವಿವಿಧ ಕ್ರೀಡಾ ಸ್ಪರ್ಧೆ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಕುಕನೂರ ತಾಲೂಕಿನ ಮಂಡಲಗೇರಿಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಗದಗಿನ ಪರಮ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 76ನೆಯ ಜಯಂತಿಯ ಅಂಗವಾಗಿ ಮಂಡಲಗಿರಿ ಶ್ರೀ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆಯ ಆವರಣದಲ್ಲಿ ದಿ. 18 ಮತ್ತು 19ರಂದು ವಿವಿಧ ಕ್ರೀಡೆಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಕ್ರೀಡೆಗಳಲ್ಲಿ ವಿಜೇತರಾದವರಿಗೆ ಸೂಕ್ತ ಬಹುಮಾನ ವಿತರಿಸಲಾಗುವುದು. ದಿ. 21ರಂದು ಪೂಜ್ಯರ ಜನ್ಮದಿನವನ್ನು ಭಾವೈಕ್ಯತಾ ದಿನವನ್ನಾಗಿ ಆಚರಿಸಲಾಗುವದೆಂದು ಕಾಲೇಜಿನ ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾನ ಧರ್ಮ ಕರುಣೆ ಪ್ರೀತಿ ವಾತ್ಸಲ್ಯ ದಯಾಮಯ ಪರೋಪಕಾರದಿಂದ ಪುಣ್ಯಪ್ರಾಪ್ತಿ..!



ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿ ಮಾಸಿಕ ಶ್ರೀಕಾಂತೇಶ್ವರ ಮಠದಲ್ಲಿ ನಡೆದ ಹುಣ್ಣಿಮೆಯ ಶಿವಾನುಭವ ಗೋಷ್ಠಿ

ದಾನ, ಧರ್ಮ, ಕರುಣೆ, ಪ್ರೀತಿ, ವಾತ್ಸಲ್ಯ, ದಯಾಮಯ ಪರೋಪಕಾರದಿಂದ ಪುಣ್ಯ ಪ್ರಾಪ್ತಿ ಸುಲಭ ಸಾಧ್ಯ ಎಂದು ಮುರಾರ್ಜಿ ದೇಸಾಯಿ ವಸತಿ ಶಾಲೆಯ ಸಂಗೀತ ಶಿಕ್ಷಕ, ರಮೇಶ ಶಾಸ್ತ್ರೀ ಯಾಳಗಿ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶ್ರೀ ಗುರು ಕಾಂತೇಶ್ವರ ಜನ ಕಲ್ಯಾಣ ಸೇವಾ ಪ್ರತಿಷ್ಠಾನದ ವತಿಯಿಂದ ಬುಧವಾರ ಸಂಜೆ ಹಮ್ಮಿಕೊಂಡಿದ್ದ ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿಯನ್ನು ಉದ್ಘಾಟಿಸಿ ಉಪನ್ಯಾಸ ನೀಡಿದ ಅವರು ಜೀವನದಲ್ಲಿ ಹಣ, ಅಧಿಕಾರ, ಅಂತಸ್ತು, ಶಾಶ್ವತವಲ್ಲ ಗುಣ ಮಾತ್ರ ಶ್ರೇಷ್ಠವಾದದ್ದು, ಜಗದ ಜೀವಿಗಳು ಜೀವಿಸಲು ಬಚ್ಚಿಟ್ಟು ತಿನ್ನುವುದಕ್ಕಿಂತ ಹಂಚಿ ತಿನ್ನುವುದು ಒಳ್ಳೆಯದು, ಕೆರೆಯ ನೀರು ಕೆರೆಗೆ ಚೆಲ್ಲಿ ವರವ ಪಡೆಯೋಣ ಎಂದವರು, ಸದ್ಭಕ್ತರು ಸದ್ಗುಣ ಸಂಪನ್ನರಾಗಲಿ ಎಂದು ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿ ಆರಂಭಿಸಿ ಅನುಭವದ ಅಮೃತಧಾರೆ ಎರೆಯುತ್ತಿರುವ, ಅಧ್ಯಾತ್ಮಿಕ ಚಿಂತನೆಗಳ ರೂವಾರಿ ಪೂಜ್ಯ ಶ್ರೀ ಚನ್ನಬಸವ ಶಿವಾಚಾರ್ಯರು ಎಂದು ಬಣ್ಣಿಸಿದರು.

ಸಾನ್ನಿಧ್ಯವಹಿಸಿ ಆಶೀರ್ವಚನ ನೀಡಿದ ಷ ಬ್ರ ಚನ್ನಬಸವ ಶಿವಾಚಾರ್ಯರು ಸತ್ಸಂಗ ಎಂದರೆ ಜ್ಞಾನದ ಜ್ಯೋತಿ, ಕತ್ತಲು ಕವಿದ ಬಾಳಿಗೆ ಬೆಳಕು ಚೆಲ್ಲುವ ಬೆಳದಿಂಗಳು, ಬಾಳ ನೌಕೆಯನ್ನು ಮುನ್ನಡೆಸುವ ಮಹಾ ಬೆಳಕು, ಲೇಸು ಬಯಸುವ ಸಾರ ಸಜ್ಜನರ ಸಂಗವ ಸತ್ಸಂಗ, ಶಿವಾನುಭವ, ಎಂದು ಆಶಿಸಿದರು.

ಶರಣಕುಮಾರ ಯಾಳಗಿ ಹಾಗೂ ಯಮನೇಶ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು. ಪ್ರಮುಖರಾದ ಮಹಾದೇವಪ್ಪವಜ್ಜಲ್, ನಿಂಗನಗೌಡ ದೇಸಾಯಿ, ಅಭಿಷೇಕ್ ಪಾಟೀಲ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು ಮಹಿಳೆಯರು ಮಕ್ಕಳು ಉಪಸ್ಥಿತರಿದ್ದರು, ಡಾ ಯಂಕನಗೌಡ ಎಸ್ ಪಾಟೀಲ, ನಿರೂಪಿಸಿ ವಂದಿಸಿದರು.

# ರಾಷ್ಟ್ರೀಯ ಆಯುರ್ವೇದ ಸಮ್ಮೇಳನ ಉದ್ಘಾಟನೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.13: ನಗರದ ಶ್ರೀ ಜಗದ್ಗುರು ಗವಿಸಿದ್ದೇಶ್ವರ ಆಯುರ್ವೇದಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ರಚನಾ ಶಾರೀರ, ಕ್ರಿಯಾ ಶಾರೀರ, ಕಾಯಚಿಕಿತ್ಸಾ, ಪಂಚಕರ್ಮ ಹಾಗೂಶಲ್ಯತಂತ್ರವಿಭಾಗದಿಂದ "ಪ್ರಸವಣ 2025" ಎಂಬ ಶೀರ್ಷಿಕೆಯಲ್ಲಿ ರಾಷ್ಟ್ರೀಯ ಆಯುರ್ವೇದ ಸಮ್ಮೇಳನ ಇಂದು ದಿನಾಂಕ 13, ಗುರುವಾರದಂದು ನಗರದ ಶ್ರೀ ಶಿವಶಾಂತವೀರ ಮಂಗಲ ಭವನದಲ್ಲಿ ಚಾಲನೆಗೊಂಡಿತು.

ಸಮ್ಮೇಳನದಮುಖ್ಯಅತಿಥಿಗಳು ಎಸ್.ಡಿ.ಎಂ ಆಯುರ್ವೇದ ಮಹಾವಿದ್ಯಾಲಯಗಳ ನಿರ್ದೇಶಕರಾದ ಡಾ. ಪ್ರಸನ್ನ. ಎನ್.ರಾವ್ ಹಾಗೂ ಗುಜರಾತಿನ ಎಂ.ಎ.ಎಂ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಸ್. ಎನ್.ಗುಪ್ತಾ ಇವರುಗಳು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿದರು.

ಶ್ರೀಧರ್ಮಸ್ಥಳಮಂಜುನಾಥೇಶ್ವರ ಸಂಸ್ಥೆಯ ಆಯುರ್ವೇದ ಮಹಾವಿದ್ಯಾಲಯಗಳ ನಿರ್ದೇಶಕರಾದ ಡಾ. ಪ್ರಸನ್ನ. ಎನ್. ರಾವ್ ತಮ್ಮ ದಿಕ್ಸೂಚಿ ಭಾಷಣದಲ್ಲಿ ಮಾತನಾಡಿ ತಮ್ಮ ವೃತ್ತಿಯಲ್ಲಿ ಮೂತ್ರವಹ ರೋಗಗಳಿಗೆ ಮನೆಮದ್ದಿನಿಂದ ಹಿಡಿದು ಶಸ್ತ್ರ ಚಿಕಿತ್ಸೆಯವರೆಗೂ ಆಯುರ್ವೇದೋಕ್ತ ವಿಶಿಷ್ಟ ಚಿಕಿತ್ಸೆಗಳ ಮಹತ್ವವನ್ನು ತಮ್ಮ ದೀರ್ಘ ಅನುಭವಗಳೊಂದಿಗೆ ಹಂಚಿಕೊಂಡರು. ಆಯುರ್ವೇದದಲ್ಲಿ 'ಬಸ್ತಿ' ಅಂದರೆ ಮೂತ್ರವಹಸ್ರೋತಸ್ ಒಂದು ಪ್ರಾಣಾಯತನವಾಗಿದ್ದು, ವೈದ್ಯರು ಆಯುರ್ವೇದ ಮೂಲಕ ಉತ್ತಮ ಚಿಕಿತ್ಸೆ ನೀಡಬಹುದೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ನಂತರ ಗುಜರಾತಿನ ಎಂ.ಎ.ಎಂ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಸ್. ಎನ್.ಗುಪ್ತಾ ಮಾತನಾಡಿ ಆಯುರ್ವೇದವನ್ನು ವೈಜ್ಞಾನಿಕವಾಗಿ ನೋಡುವುದರ ಜೊತೆಗೆ ವೈದಿಕವಾಗಿಯೂ ತಿಳಿದುಕೊಂಡು ವೈದ್ಯಕೀಯ ವೃತ್ತಿಯಲ್ಲಿ ಅಳವಡಿಸಿಕೊಳ್ಳಬೇಕೆಂದರು. ಇನ್ನೊರ್ವ ಅತಿಥಿಗಳಾದ ಎಸ್.ಡಿ.ಎಂ ಆಯುರ್ವೇದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಶೈಲಜಾ ಮಾತನಾಡಿ ಚಿಕ್ಕಮಕ್ಕಳಲ್ಲಿ ಆಗುವ ಮೂತ್ರರೋಗಗಳ ಬಗ್ಗೆ ವಿಶ್ಲೇಷಿಸಿದರು. ಸಮ್ಮೇಳನದ ವೈಜ್ಞಾನಿಕ ಗೋಷ್ಠಿಯಲ್ಲಿ ರಾಷ್ಟ್ರೀಯ ಆಯುರ್ವೇದ ಸಂಸ್ಥಾನ, ಜೈಪುರದ ಡಾ. ಸ್ವಪ್ನಾ. ಬಿ. ವಿವಿಧ ಮೂತ್ರರೋಗ ಶಸ್ತ್ರ ಚಿಕಿತ್ಸೆಸಂಬಂಧಿತ ರೋಗಗಳ ಬಗ್ಗೆ ತಿಳಿಸಿದರು ಹಾಗೂ ತಿಲಕ ಆಯುರ್ವೇದಮಹಾವಿದ್ಯಾಲಯ, ಪುಣೆಯ ಡಾ. ತರನ್ನುಮ್ ಪಟೇಲ್ ಇವರು ಮೂತ್ರ ಸ್ರೋತೋವಹ ಕ್ರಿಯೆಗಳ ಮೇಲೆ ವಿಶೇಷ ಉಪನ್ಯಾಸ ಮಂಡನೆ ಮಾಡಿದರು.

ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಮಹಾವಿದ್ಯಾಲಯದ ಕಾರ್ಯಾಧ್ಯಕ್ಷರಾದ ಸಂಜಯ ಕೊತಬಾಳ ಹಾಗೂ ಶ್ರೀಮತಿ ಶಾರದಮ್ಮ ಕೊತಬಾಳ ಬಿ.ಬಿ.ಎಂ ಕಾಲೇಜಿನ ನಿರ್ದೇಶಕರಾದ ಮಹೇಶ ಮುದುಗಲ್ ಇವರು ವಹಿಸಿಕೊಂಡಿದ್ದರು. ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಹಾಂತೇಶ ಸಾಲಿಮಠ ಇವರು ಮೂತ್ರರೋಗಗಳಿಗೆ ಆಯುರ್ವೇದ ಚಿಕಿತ್ಸೆಯನ್ನು ಉದಾಹರಣೆಗಳೊಂದಿಗೆ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ವಿವರಿಸಿದರು. ಕಾರ್ಯಕ್ರಮದ ಸಂಘಟಕರಾದ ಡಾ. ಕೆ.ಬಿ.ಹಿರೇಮಠ ಸ್ವಾಗತಿಸಿದರು ಹಾಗೂ ಡಾ. ರಾಜಶೇಖರ ಶೆಟ್ಟರ್ ವಂದನಾರ್ಪಣೆ ಸಲ್ಲಿಸಿದರು. ಉಪಪ್ರಾಂಶುಪಾಲರಾದ ಡಾ. ಸುರೇಶ ಹಕ್ಕಂಡಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ರಾಷ್ಟ್ರೀಯ ಸಮ್ಮೇಳನದಲ್ಲಿ ಶ್ರೀ ಜಗದ್ಗುರು ಗವಿಸಿದ್ದೇಶ್ವರ ಆಯುರ್ವೇದ ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ವರ್ಗ ಹಾಗೂ ರಾಜ್ಯದ 400 ಪ್ರತಿನಿಧಿಗಳು ಹೊರ ರಾಜ್ಯದ 15 ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಸಮಾರೋಪ ಸಮಾರಂಭ: ನಾಳೆಯು ಸಹ ರಾಷ್ಟ್ರೀಯ ಆಯುರ್ವೇದ ಸಮ್ಮೇಳನವು ಮುಂದುವರೆಯಲಿದ್ದು ನಾಳೆ ರಾಷ್ಟ್ರೀಯ ಆಯುರ್ವೇದ ಸಮ್ಮೇಳನದ ವಿಶೇಷ ಉಪನ್ಯಾಸಕರಾಗಿ ಡಾ. ಅವಿನಾಶ್ ಓದುಗೌಡರ್, ಡಾ. ಶ್ರೀಪತಿ ಅಡಿಗ, ಡಾ. ಪ್ರಸನ್ನ ಕುಲಕರ್ಣಿ ಹಾಗೂ ಡಾ. ಸಿ.ಆರ್. ಯಾದವ್ ಆಗಮಿಸಲಿದ್ದಾರೆ. ಸಾಯಂಕಾಲ ಸಮಾರೋಪ ಸಮಾರಂಭ ಜರುಗಲಿದೆ ಎಂದು ಮಹಾವಿದ್ಯಾಲಯದ ಪ್ರಕಟಣೆ ತಿಳಿಸಿದೆ.

# ಹೊಸ ಕಾರ್ಖಾನೆ ಅಂಕಿತ : ಸಿವಿ ಚಂದ್ರಶೇಖರ ಆತಂಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಫೆ.13: ಖಾಸಗಿ ಉಕ್ಕು ಕಂಪನಿಯೊಂದು ರಾಜ್ಯ ಸರಕಾರದ ಜೊತೆಗೆ 54,000 ಕೋಟಿ ರೂಪಾಯಿ ವೆಚ್ಚದ ಯೋಜನೆಗೆ ಸಹಿ ಹಾಕಿರುವುದಕ್ಕೆ ಜೆ ಡಿ (ಎಸ್) ಕೋರ್ ಕಮಿಟಿ ಸದಸ್ಯರಾದ ಸಿ ವಿ ಚಂದ್ರಶೇಖರ್ ಆತಂಕ ವ್ಯಕ್ತಪಡಿಸಿದ್ದಾರೆ.

ಕೊಪ್ಪಳದಲ್ಲಿ ನೂರಕ್ಕೂ ಹೆಚ್ಚು ಸಂಖ್ಯೆಯ ಕೈಗಾರಿಕಾ ಘಟಕಗಳು ಸ್ಥಾಪನೆಯಾಗಿ ಸಮುದಾಯದ ಮೇಲೆ ದುಷ್ಪರಿಣಾಮ ಪರಿಣಾಮ ಬೀರಿವೆ. ಕಳೆದಕೆಲವು ವರ್ಷಗಳಲ್ಲಿ ಅನೇಕ ಪ್ರತಿಭಟನೆಗಳು ನಡೆದಿವೆ. ಈ ಕೈಗಾರಿಕಾ ಘಟಕಗಳು ಕಾನೂನನ್ನು ಗಾಳಿಗೆ ತೂರಿ ಸಮುದಾಯದ ಆರೋಗ್ಯಕ್ಕೆ ದುಷ್ಪರಿಣಾಮ ಉಂಟುಮಾಡುವೆ. ಇದೀಗ ಖಾಸಗಿ ಕಂಪನಿಯೊಂದು 54,000 ಕೋಟಿ ವೆಚ್ಚದ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯನ್ನು ಸ್ಥಾಪಿಸುತ್ತಿರುವುದು ಆತಂಕಕಾರಿ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಿ ಹಾಕಲ್ಪಟ್ಟ ಯೋಜನೆ ಕೊಪ್ಪಳ ಪಟ್ಟಣವನ್ನು ನರಕವನ್ನಾಗಿಸುವ ಸಾಧ್ಯತೆ ಇದೆ. ಹೀಗಾಗಿ ಕರ್ನಾಟಕ ರಾಜ್ಯ ಸರಕಾರ ಕೊಪ್ಪಳ ಜನರ ಭಾವನೆಯನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳಬೇಕು. ಮಂಗಳವಾರ ಈ ಯೋಜನೆಗೆ ಸರಕಾರ ಅಂಕಿತ ಹಾಕಿದೆ. ಜನರ ವಿರೋಧ ವ್ಯಕ್ತವಾದರೆ ಇದನ್ನು ಪುನರ್ ಪರಿಶೀಲಿಸಬೇಕು. ಸಮುದಾಯ ಹಾಗೂ ಇಲ್ಲಿನ ನೈಸರ್ಗಿಕ ಸಂಪನ್ಮೂಲಗಳ ರಕ್ಷಣೆಯ ಹೊಣೆ ಸರಕಾರದ್ದು. ಈ ನಿಟ್ಟಿನಲ್ಲಿ ಸೂಕ್ತ ನಿರ್ಧಾರವನ್ನು ಕೈಗೊಳ್ಳಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಮಾಡುತ್ತೇನೆ ಇಂದು ಅವರ ತಿಳಿಸಿದ್ದಾರೆ.

ಯೋಜನೆಯ ಸಾಧಕ ಬಾಧಕ ಹಾಗೂ ಕೊಪ್ಪಳದ ಜನರ ಭಾವನೆಗಳ ಕುರಿತಾಗಿ ಕೇಂದ್ರ ಸಚಿವರಾದ ಹೆಚ್ ಡಿ ಕುಮಾರಸ್ವಾಮಿ ಅವರ ಜೊತೆಗೆ ಚರ್ಚೆ ಮಾಡುವುದಾಗಿ ಅವರು ಹೇಳಿದ್ದಾರೆ.

# ಅನಧಿಕೃತ ಗರ್ಭಪಾತ ನಡೆಸುವ ಆಸ್ಪತ್ರೆಯ ಪರವಾನಿಗೆ ರದ್ದು :ಡಾ. ಲಿಂಗರಾಜು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.13: ಆಸ್ಪತ್ರೆಗಳಲ್ಲಿ ಅನಧಿಕೃತ ಗರ್ಭಪಾತ ನಡೆಸಿದರೆ ಪ್ರಕರಣ ದಾಖಲಿಸಿ, ಅಂತಹ ಆಸ್ಪತ್ರೆಯ ಪರವಾನಿಗೆ ರದ್ದುಪಡಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ ಟಿ.ಲಿಂಗರಾಜು ಹೇಳಿದರು.

ಅವರು ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ಆಯೋಜಿಸಿದ್ದ ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಮತ್ತು ಎಂ.ಟಿ.ಪಿ ಕಾಯ್ದೆಯ ಅಡಿ ಬರುವ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆ-1994 ರಡಿಯಲ್ಲಿ ಭ್ರೂಣ ಲಿಂಗ ಪತ್ತೆ ಮತ್ತು ಭ್ರೂಣಲಿಂಗ ಆಯ್ಕೆಗೆ ಅವಕಾಶವಿಲ್ಲ. ಆದಾಗ್ಯೂ ಇಂತಹ ಕಾನೂನು ಬಾಹಿರ ಕ್ರಮಗಳಲ್ಲಿ ಭಾಗಿಯಾದಲ್ಲಿ ಅಂತವರ ವಿರುದ್ಧ ಕಠಿಣವಾದ ಕಾನೂನು ಕ್ರಮ ಕೈಗೊಳ್ಳಲಾಗುವುದು. ಈ ಕಾಯ್ದೆಯಡಿ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಮತ್ತು ಹತ್ಯೆ ಕಾನೂನು ಬಾಹಿರ ಮತ್ತು ಶಿಕ್ಷಾರ್ಹ ಅಪರಾಧವಾಗಿದೆ. ಇದಲ್ಲದೆ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಕುರಿತಂತೆ ಯಾವುದೇ ರೀತಿಯ ಜಾಹೀರಾತು ನೀಡುವಂತಿಲ್ಲ. ಸರ್ಕಾರಿ ಅಥವಾ ಖಾಸಗಿ ಯಾವುದೇ ವೈದ್ಯರು ಇಂತಹ ಕೃತ್ಯಗಳಲ್ಲಿ ಭಾಗಿಯಾದಲ್ಲಿ ಅವರ ವಿರುದ್ಧ ಕಠಿಣ ಕ್ರಮಕ್ಕೂ ಅವಕಾಶವಿದ್ದು, ಇದರ ತಪಾಸಣಾ ಮತ್ತು ಮೇಲ್ವಿಚಾರಣೆಗಾಗಿ ಜಿಲ್ಲಾ ಮಟ್ಟದ, ಜಿಲ್ಲಾ ತಪಾಸಣಾ ಮತ್ತು ಮೇಲ್ವಿಚಾರಣಾ ಸಮಿತಿಯನ್ನು ಕಾಯ್ದೆಯಡಿ ರಚಿಸಲಾಗಿದೆ. ತಪಾಸಣಾ ಸಮಿತಿಯು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಸಲಹಾ ಸಮಿತಿ ಸಭೆಯಲ್ಲಿ ವರದಿ ನೀಡುತ್ತದೆಂದರು.

ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ರವೀಂದ್ರನಾಥ್ ಎಂ.ಎಚ್ ಅವರು ಮಾತನಾಡಿ, ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳು ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆಯಡಿ ನಿಯಮಾನುಸಾರ ನೋಂದಣಿ ಮಾಡಿಕೊಳ್ಳಬೇಕು ಹಾಗೂ ನೋಂದಣಿ ಅವಧಿ ಪೂರ್ಣಗೊಳ್ಳುವುದಕ್ಕಿಂತ ಮೂರು ತಿಂಗಳ ಮುಂಚೆ ಅರ್ಜಿ ಸಲ್ಲಿಸಿ ನವೀಕರಣ ಮಾಡಿಕೊಳ್ಳಬೇಕು. ಸ್ಕ್ಯಾನಿಂಗ್ ಕುರಿತಾದ ಮಾರ್ಗಸೂಚಿಗಳನ್ನು ಪಾಲಿಸಿ ನಿಗದಿತ ನಮೂನೆಗಳನ್ನು ನಿರ್ವಹಿಸಬೇಕು. ನೋಂದಣಿ, ಪರವಾನಗಿ ನವೀಕರಣವಿಲ್ಲದ ಆರೋಗ್ಯ ಸಂಸ್ಥೆಗಳ ಮೇಲೆ, ನಿಗದಿತ ನಿಯಮ ಪಾಲನೆ ಹಾಗೂ ದಾಖಲಾತಿಗಳನ್ನು ನಿರ್ವಹಿಸದ ಆರೋಗ್ಯ ಸಂಸ್ಥೆಗಳನ್ನು ಮುಚ್ಚಿಸಲು ಅಥವಾ ಸ್ಥಗಿತಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲು ಕಾಯ್ದೆಯಡಿ ಅವಕಾಶವಿದೆ. ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಅನುಸಾರ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧಿಸಲಾಗಿದ್ದು, ಸರ್ಕಾರಿ ಅಥವಾ ಖಾಸಗಿ ಯಾವುದೇ ವೈದ್ಯರು ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆಯಂತಹ ಕೃತ್ಯಗಳಲ್ಲಿ ಭಾಗಿಯಾದಲ್ಲಿ ಅವರಿಗೆ ಕಾರಾಗೃಹ ಶಿಕ್ಷೆ ಸಹಿತ ದಂಡವನ್ನು ವಿಧಿಸಲಾಗುವುದು. ಮೊದಲ ಅಪರಾಧಕ್ಕೆ 5 ವರ್ಷ ವೈದ್ಯಕೀಯ ಪರವಾನಿಗೆಯನ್ನು ರದ್ದುಪಡಿಸುವುದು.

# ವಿದ್ಯಾಭ್ಯಾಸದಲ್ಲಿ ಅಂಗವಿಕಲರಿಗೆ

## ಶೇ. 5 ರಷ್ಟು ಸ್ಥಾನಗಳು ಮೀಸಲು: ದಾಸ್ ಸೂರ್ಯವಂಶಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.13: ಎಲ್. ಕೆ.ಜಿ ಯಿಂದ ಪಿ.ಜಿ ವರೆಗಿನ ವಿದ್ಯಾಭ್ಯಾಸದಲ್ಲಿ ಅಂಗವಿಕಲರಿಗೆ ಶೇ.5 ರಷ್ಟು ಸ್ಥಾನಗಳು ಮೀಸಲಿರಿಸಲಾಗಿದೆ ಎಂದು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತರಾದ ದಾಸ್ ಸೂರ್ಯವಂಶಿ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016 ಅನುಷ್ಠಾನಗೊಳಿಸುವ ಕುರಿತು ಕರೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ರಾಷ್ಟ್ರದಲ್ಲಿನ ವಿಕಲಚೇತನ ವ್ಯಕ್ತಿಗಳಿಗೆ ಅಗತ್ಯವಿರುವ ಆರೋಗ್ಯ, ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ ಹಾಗೂ ಸಾಮಾಜಿಕ ಭದ್ರತೆಗಳಂತಹ ಪುನರ್ವಸತಿ ಸೇವೆಗಳನ್ನು ಕಲ್ಪಿಸುವುದರ ಮೂಲಕ ಅವರಿಗೆ ಸಮಾನ ಅವಕಾಶ ಕಲ್ಪಿಸಿ ಅವರನ್ನು ಮುಖ್ಯ ವಾಹಿನಿಗೆ ತರುವ ಉದ್ದೇಶದಿಂದ ಕೇಂದ್ರ ಸರ್ಕಾರವು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ನ್ನು ಜಾರಿಗೆ ತಂದಿದ್ದು, ಈ ಅಧಿನಿಯಮವನ್ನು ಕರ್ನಾಟಕ ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು "ಕರ್ನಾಟಕ ರಾಜ್ಯ ಅಂಗವಿಕಲ ವ್ಯಕ್ತಿಗಳ ನಿಯಮಗಳು-2019"ನ್ನು ರೂಪಿಸಿದೆ. ವಿಕಲಚೇತನ ವ್ಯಕ್ತಿಗಳನ್ನು ಸಬಲೀಕರಣಗೊಳಿಸುವುದರ ಮೂಲಕ ಅವರ ಹಕ್ಕುಗಳನ್ನು ಸಂರಕ್ಷಿಸಲು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016 ರಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದರು.

ಕರ್ನಾಟಕ ರಾಜ್ಯದಲ್ಲಿ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಅನುಷ್ಠಾನಕ್ಕಾಗಿ ರಾಜ್ಯ ಆಯುಕ್ತರ ಕಛೇರಿಯನ್ನು ಸ್ಥಾಪಿಸಿದ್ದು, ಈ ಕಛೇರಿಗೆ ಆಯುಕ್ತರನ್ನು ನೇಮಕ ಮಾಡಿದೆ. ಅಲ್ಲದೆ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016 ಸೆಕ್ಷನ್ 80ರ ಪ್ರಕಾರ ಆಯುಕ್ತರಿಗೆ ಕೆಲ ಅಧಿಕಾರಗಳನ್ನು ಪ್ರತ್ಯಯೋಜಿಸಲಾಗಿದ್ದು, ಜಿಲ್ಲೆಗಳಲ್ಲಿ ವಿವಿಧ ಇಲಾಖೆಗಳು ಈ ಅಧಿನಿಯಮವನ್ನು ಅನುಷ್ಠಾನಗೊಳಿಸುತ್ತಿರುವ ಬಗ್ಗೆ ಇಲಾಖಾವಾರು ಜಿಲ್ಲಾ ಅಂಗವಿಕಲರ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ. ಶಿಕ್ಷಣ ಮೀಸಲಾತಿ ಜೊತೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ನೇಮಕಾತಿಯಲ್ಲಿ ಅಂಗವಿಕಲರಿಗಾಗಿಯೇ ಇರುವ ಶೇ. 4 ಮತ್ತು 5 ರ ಮೀಸಲಾತಿ ಇದ್ದು, ಅದರ ಪರಿಶೀಲನೆಗಾಗಿ ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಎಲ್ಲಾ ಸಾರ್ವಜನಿಕ ಸ್ಥಳಗಳು ವಿಕಲಚೇತನಸ್ನೇಹಿಯಾಗಿರಬೇಕು. ಆ ಸ್ಥಳಗಳಲ್ಲಿ ಅಂಗವಿಕಲರ ಓಡಾಟಕ್ಕೆ ಸುಲಭ ದಾರಿ, ವೀಲ್ ಚೇರ್ ವ್ಯವಸ್ಥೆ, ಶೌಚಾಲಯ ಸೇರಿದಂತೆ ಅಗತ್ಯವಾದ ಮೂಲಭೂತ ಸೌಕರ್ಯಗಳ ವ್ಯವಸ್ಥೆಗಳಿರಬೇಕು. ಈ ಹಿನ್ನೆಲೆಯಲ್ಲಿ ಭಾರತ ರಾಷ್ಟ್ರದಲ್ಲಿ 'ಸುಗಮ್ ಯಾತ್ರಾ' ಕಾರ್ಯಕ್ರಮ ಜಾರಿಯಾಗಿದೆ. ಈ ಕಾರ್ಯಕ್ರಮದ ಜಾಗೃತಿ ಮೂಡಿಸಲು ಹಳ್ಳಿ-ಹಳ್ಳಿಗಳಲ್ಲಿ ಶಿಬಿರಗಳನ್ನು ಹಮ್ಮಿಕೊಳ್ಳಾಗುತ್ತಿದೆ. ಇದಕ್ಕಾಗಿ ಒಂದು ???ಪ್ ಸಿದ್ದಪಡಿಸಲಾಗಿದ್ದು, ???ಪ್ ನಲ್ಲಿ ಅಲ್ಲಿನ ವ್ಯವಸ್ಥೆಯ ಬಗ್ಗೆ ವಿಕಲಚೇತನರಿಗೆ ಸಂಪೂರ್ಣ ಮಾಹಿತಿ ಸಿಗಲಿದೆ. ಅಂಗವಿಕಲರಿಗೆ ಇರುವ ಸರ್ಕಾರದ ಸೌಲಭ್ಯಗಳನ್ನು ಒದಗಿಸಲು "ಅಂಗವಿಕಲರಿಂದ ಅಂಗವಿಕಲರ ಅಭಿವೃದ್ಧಿ" ಎಂಬಂತೆ ಗ್ರಾಮ ಪಂಚಾಯತ್ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸೇರಿದಂತೆ ಕರ್ನಾಟಕದಲ್ಲಿ ಸುಮಾರು 7 ಸಾವಿರ ಅಂಗವಿಕಲರ ಪುನರವಸತಿ ಕಾರ್ಯಕರ್ತರು ಕಾರ್ಯನಿರ್ವಹಿಸುತ್ತಿರುವುದು ದೇಶದಲ್ಲಿಯೇ ನಮ್ಮ ರಾಜ್ಯ ಮಾದರಿಯಾಗಿದೆ ಎಂದರು.

ಅದಲ್ಲದೇ ಭಾರತ ದೇಶದಲ್ಲಿ ಮೊಟ್ಟಮೊದಲ ಬಾರಿಗೆ ಕರ್ನಾಟಕದಲ್ಲಿ ವಿಶೇಷಚೇತನರ 'ಆರೈಕೆ ದಾರರ ರಕ್ಷಣೆ' ಎಂಬ ಕಾರ್ಯಕ್ರಮವನ್ನು ಎಪ್ರಿಲ್ ಮಾಹೆಯಿಂದ ಜಾರಿಗೆ ತರಲಾಗುತ್ತಿದ್ದು, ಇದರ ಉದ್ದೇಶ ಅಂಗವಿಕಲರ ಪೋಷಕರಿಗೆ ಪ್ರೋತ್ಸಾಹಿಸುವುದಾಗಿದೆ. ರಾಜ್ಯ ಸರ್ಕಾರದಿಂದ ನಡೆಸುವಂತಹ ಸುಮಾರು 900 ವಸತಿಶಾಲೆಗಳಲ್ಲಿ 25 ಪ್ರತಿಶತ ಅಂಗವಿಕಲತೆ ಹೊಂದಿದ ಮಕ್ಕಳಿಗೆ ಯಾವುದೇ ಪ್ರವೇಶ ಪರೀಕ್ಷೆ ಇಲ್ಲದೇ 12ನೇ ತರಗತಿವರೆಗೆ ಉಚಿತ ಶಿಕ್ಷಣ ನೀಡಲು ಅವಕಾಶವಿದೆ. ರಾಷ್ಟ್ರೀಯ ಅಂಗವಿಕಲರ ಅಭಿವೃದ್ಧಿ ಹಣಕಾಸು ಸಂಸ್ಥೆಯ ಮೂಲಕ ಪ್ರತಿ ವರ್ಷ ರಾಜ್ಯಕ್ಕೆ ರೂ. 100 ಕೋಟಿ ತರಬಹುದಾಗಿದ್ದು, ಅಂಗವಿಕಲರಿಗೆ 50 ಲಕ್ಷದವರೆಗೆ ಸಾಲ ಸೌಲಭ್ಯ ಹಾಗೂ ಇತರೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ವೆಂಕಟೇಶ ದೇಶಪಾಂಡೆ, ವಿಕಲಚೇತನರ ಪ್ರತಿನಿಧಿ ಬಿ.ಹಂಪಣ್ಣ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕೊಪ್ಪಳ ಜಿಲ್ಲೆಯ ಶಾಲೆಗಳಲ್ಲಿ ಬೋಧನಾ ಗುಣಮಟ್ಟ ಸುಧಾರಣೆಗೆ ಪರಿಣಾಮಕಾರಿ ಕ್ರಮ ಕೈಗೊಳ್ಳಲು ಒತ್ತಾಯಿಸಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.13: ಜಿಲ್ಲೆಯ ಶಾಲೆಗಳಲ್ಲಿ ಬೋಧನಾ ಗುಣಮಟ್ಟ ಸುಧಾರಣೆಗೆ ಪರಿಣಾಮಕಾರಿ ಕ್ರಮ ಕೈಗೊಳ್ಳಲು ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರ ಮುಖಾಂತರ ಶಾಲಾ ಪಾಲಕರ ಹೋರಾಟ ಸಮಿತಿ ನೇತೃತ್ವದಲ್ಲಿ ವಿವಿಧ ಸಂಘಟನೆಗಳಿಂದ ಮನವಿ ಸಲ್ಲಿಸಿದರು. ಮನವಿಯಲ್ಲಿ ಕೊಪ್ಪಳ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ, ಕನ್ನಡ ಮತ್ತು ಆಂಗ್ಲ ಮಾಧ್ಯಮದ ಪ್ರಾಥಮಿಕ ಶಾಲೆಗಳಲ್ಲಿ ಕಳೆದ ಒಂದು ದಶಕಕ್ಕೂ ಹೆಚ್ಚು ಅವಧಿಯಿಂದ ಸಾರ್ವತ್ರಿಕವಾಗಿ ಪ್ರತಿವರ್ಷವೂ ಶೈಕ್ಷಣಿಕ ಬೋಧನಾ ಗುಣಮಟ್ಟ ಕುಸಿಯುತ್ತಾ ಬಂದಿದೆ. ಅದರ ಪರಿಣಾಮ ಪ್ರೌಢ ಶಾಲೆಯಲ್ಲಿ ಕಾಣುತ್ತಿದೆ, ಕಳಪೆಮಟ್ಟದ ಬೋಧನೆ ಮಾಡುತ್ತಿರುವುದರಿಂದ ಶೈಕ್ಷಣಿಕವಾಗಿ ಹಿಂದುಳಿಯುತ್ತಿದ್ದಾರೆ. ಅನರ್ಹ ಶಿಕ್ಷಕರಿಂದ ತಮ್ಮ ತರಗತಿಯ ಬೋಧನಾ ಅವಧಿಯಲ್ಲಿ ಮಕ್ಕಳಿಗೆ ಒಳಗೆ ನಡಿ, ಕೈ ಕಟ್, ಗಪ್ ಚುಪ್, ಬಾಯಿ ಮುಚ್ಚ್, ಘಂಟೆ ಹೊಡೆ ಹೊರ ನಡಿ ಅನ್ನುವಂತಾಗಬಾರದು, ಕೆಲ ತಿಂಗಳುಗಳ ಹಿಂದೆ ನಡೆಸಿದ ಸಮೀಕ್ಷೆ ಪ್ರಕಾರ ಜಿಲ್ಲೆಯಲ್ಲಿ 7,000ಕ್ಕೂ ಹೆಚ್ಚು ಆಯಾ ಮಧ್ಯಮಗಳಲ್ಲಿ ವಿದ್ಯಾರ್ಥಿಗಳು ಕಲಿತ ಕನ್ನಡ, ಆಂಗ್ಲ ಭಾಷೆ ಓದಲು, ಬರೆಯಲು ಬರುತ್ತಿಲ್ಲ ಎಂಬ ಸಂಗತಿ ಸರ್ಕಾರಕ್ಕೆ ನಾಚಿಕೆಗೇಡಿನ ಪ್ರಶ್ನೆ, ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಗಮನ ಕೊಟ್ಟು ಸಮರ್ಥವಾಗಿ ಬೋಧಿಸುವಂತೆ ಈ ಹಿಂದಿನ ಅಧಿಕಾರಿಗಳು ಸೂಚಿಸಿದ್ದರೂ ಕೆಲ ಶಿಕ್ಷಕರು ಅನುಷ್ಠಾನಗೊಳಿಸದೆ, ವಿದ್ಯಾರ್ಥಿಗಳನ್ನು ಹೊಣೆಗಾರರನ್ನಾಗಿ ಮಾಡಿ ತಮ್ಮ ಜವಾಬ್ದಾರಿಯಿಂದ ನುಣಿಚಿಕೊಳ್ಳುತ್ತಾ ಬಂದಿದ್ದಾರೆ. ಮಕ್ಕಳ ಮನೋವಿಜ್ಞಾನ ಪುಸ್ತಕಗಳನ್ನು ಓದದ ಅಥವಾ ಓದಿಯೂ ವೈಜ್ಞಾನಿಕವಾಗಿ ಬೋಧಿಸದೆ. ಮಕ್ಕಳನ್ನು ಬೋಧನೆಯಿಂದ ಆಕರ್ಷಣೆಗೊಳಪಡಿಸಿ ಸಂಪೂರ್ಣ ಗಮನವನ್ನು ತಮ್ಮ ಕಡೆ ಸೆಳೆದುಕೊಳ್ಳುವಲಿ ವಿಫಲರಾಗಿದ್ದಾರೆ, ಬೋಧನಾ ತಂತ್ರಗಾರಿಕೆಯಿಂದ ವಿಫಲವಾಗಿರುವ ಬೋಧಕರು ಮಕ್ಕಳ ಮೇಲೆ ತಪ್ಪನ್ನು ಹೋರಿಸಿ ತಮ್ಮ ವೈಫಲ್ಯತೆಯನ್ನು ಮುಚ್ಚಿಕೊಳ್ಳುತ್ತಾ ಬಂದಿದ್ದಾರೆ. ಪ್ರಾಥಮಿಕ ಅಷ್ಟೇ ಅಲ್ಲ ಪ್ರೌಢ ಶಾಲೆಗಳಲ್ಲೂ ಪ್ರತಿಯೊಂದು ವರ್ಗದಲ್ಲೂ ಬೆರಳೆಣಿಕೆಯಷ್ಟು ವಿದ್ಯಾರ್ಥಿಗಳು ಮಾತ್ರ ಶಿಕ್ಷಕರು ಫಲಕದ ಮೇಲೆ ಬರೆದದ್ದನ್ನು ವೇಗವಾಗಿ ಬರೆದುಕೊಳ್ಳುತ್ತಾರೆ. ಉಳಿದವರು ಮೇಲಿನಿಂದ ನಿಧಾನವಾಗಿ ಬರೆದುಕೊಳ್ಳುತ್ತಿರುವಾಗ ಎಲ್ಲರೂ ಬರೆದುಕೊಂಡಿದ್ದೀರಾ? ಎಂದು ಕೇಳಿದಾಗ ಹಾ... ಎಂದು ವೇಗವಾಗಿ ಬರೆದುಕೊಂಡ ಮಕ್ಕಳು ಹೇಳಿದ ಕೊಡಲೆ ಬೋಧಕರು ಗೋಡೆ ಫಲಕದ ಬರಹ ಅಳಿಸಿ ತಮ್ಮ ಬರವಣಿಗೆ ಮುಂದುವರಿಸಿಕೊಂಡು ಹೋಗುತ್ತಾರೆ. ಉಳಿದ ಬಹುತೇಕ ನಿಧಾನ ಗತಿಯ ಮಕ್ಕಳು ಬರವಣಿಗೆಯಿಂದ ವಂಚಿತರಾಗಿ, ಬರವಣಿಗೆ ಅಪೂರ್ಣಗೊಳಿಸಿ ಪರೀಕ್ಷೆಯಲ್ಲಿ ಅಷ್ಟಕಷ್ಟೇ ಬರೆಯುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಜಿಲ್ಲೆಯ ಸರ್ಕಾರಿ, ಖಾಸಗಿ ಶಾಲೆಗಳಲ್ಲಿ ಕಳಂಕವಾಗಲು ಬೋಧನಾ ವಿಧಾನ ತಿಳಿಯದೆ ಇರುವಂತಹ ಅನೇಕ ಅನರ್ಹ ಶಿಕ್ಷಕರು ಸಂಪೂರ್ಣ ಹೊಣೆಗಾರರಾಗಿದ್ದು. ಕನ್ನಡ ಮಾಧ್ಯಮ, ಆಂಗ್ಲ ಮಾಧ್ಯಮದ ಶಾಲೆಗಳಾಗಿದ್ದರೂ ಬಹುತೇಕ ವಿದ್ಯಾರ್ಥಿಗಳು ವ್ಯಾಕರಣಬದ್ಧವಾಗಿ ಕನ್ನಡ ಭಾಷೆ. ಆಂಗ್ಲ ಭಾಷೆ ಕಲಿತಿಲ್ಲ ಅನ್ನೋದಕ್ಕಿಂತ ಕನ್ನಡ, ಆಂಗ್ಲ ಹಾಗೂ ಹಿಂದಿ ವಿಷಯಗಳನ್ನು ಸ್ಪಷ್ಟವಾಗಿ ಓದಲು ಬರೆಯಲು ಸಹ ಬಾರದ ಮಕ್ಕಳ ಸಂಖ್ಯೆ ಹೆಚ್ಚಿದೆ. ಆಯಾ ಶಾಲೆಗಳ ಮಕ್ಕಳ ಫಲಿತಾಂಶ ದಾಖಲೆಗಳನ್ನು ಪರಿಶೀಲಿಸಿ ಕಡಿಮೆ ಅಂಕ ಪಡೆದ ವಿಷಯಗಳ ಆಯಾ ಬೋಧಕರನ್ನು ತಕ್ಷಣ ಸೇವೆಯಿಂದ ತೆಗೆದುಹಾಕಿ. ಉನ್ನತ ಅರ್ಹತಾ ಪದವಿಗಳನ್ನು ಪಡೆದ ಮಕ್ಕಳ ಮನೋವಿಜ್ಞಾನ ಓದಿ ತಿಳಿದುಕೊಂಡು ಗುಣಮಟ್ಟದಿಂದ ಬೋಧಿಸುವ ಶಿಕ್ಷಕರನ್ನು ನೇಮಕ ಮಾಡುವ ಮೂಲಕ ಮಕ್ಕಳ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ದೃಢವಾದ ಕ್ರಮ ಕೈಗೊಳ್ಳುವಿರೆಂದು ಆಶಿಸುತ್ತೇವೆ. ಕೊಪ್ಪಳ ಜಿಲ್ಲೆಯ ಸರ್ಕಾರಿ, ಖಾಸಗಿ ಅನುದಾನಿತ, ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಓದಿನಲ್ಲಿ ಹಿಂದುಳಿದಂತಹ ಮಕ್ಕಳಿಗೆ ಆಪ್ತ ಸಮಾಲೋಚಕರನ್ನು ನೇಮಿಸಲು ಕ್ರಮ ಕೈಗೊಳ್ಳಬೇಕು, ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ಅರ್ಹ ವಿಷಯವಾರು ಗುಣಮಟ್ಟದ ಶಿಕ್ಷಕರನ್ನು ನೇಮಕ ಮಾಡಬೇಕು. ಪ್ರಾಥಮಿಕ ಶಾಲೆಗಳಲ್ಲಿ ಪ್ರತ್ಯೇಕ ಗ್ರಂಥಾಲಯಗಳ ಕಡ್ಡಾಯವಾಗಿ ಪ್ರಾರಂಭಿಸಿ, ಆ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಬೇಕು. ಕೆಲ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಒಂದು ಎರಡು ಮೂರನೇ ತರಗತಿಗಳು ಮತ್ತು 4,5,6 ನೇ ತರಗತಿ ಮಕ್ಕಳಿಗೆ ಒಂದುಗೂಡಿಸಿ ಒಂದೇ ಕೊಠಡಿಯಲ್ಲಿ ಪಾಠ ಮಾಡುವುದರಿಂದ ಮಕ್ಕಳ ಗ್ರಹಿಕೆಗೆ ಆಡಚಣೆ ಉಂಟಾಗುತ್ತದೆ, ಜಿಲ್ಲೆಯ ಶಾಲೆಗಳಲ್ಲಿ ತರಗತಿ ಹಾಗೂ ಮಕ್ಕಳಿಗೆ ತಕ್ಕಂತೆ ವಿಷಯವಾರು ಶಿಕ್ಷಕರನ್ನು ನೇಮಕ ಮಾಡಬೇಕು. ಶಿಕ್ಷಕರಿಗೆ ಸರ್ಕಾರದ ಅನಿವಾರ್ಯ ಕರ್ತವ್ಯಗಳು ಹೊರತುಪಡಿಸಿ ಅನ್ಯ ಕಾರ್ಯಗಳಿಗೆ ನಿಯೋಜಿಸಬಾರದು. ಜಿಲ್ಲೆಯ ಎಲ್ಲಾ ಶಾಲೆಗಳಿಗೆ ಪ್ರತಿಯೊಂದು ಕೊಠಡಿಗಳಲ್ಲಿ, ಕಾರ್ಯಾಲಯ ಮತ್ತು ಆವರಣಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮೆರಾ ಗಳನ್ನು ಅಳವಡಿಸಬೇಕು, ಮುಖ್ಯೋಪಾಧ್ಯಾಯರು ಹಾಗೂ ಎಲ್ಲಾ ಶಿಕ್ಷಕರಿಗೆ ಶಾಲೆಯಲ್ಲಿ ಬಯೋಮೆಟ್ರಿಕ್ ವ್ಯವಸ್ಥೆ ಕಡ್ಡಾಯಗೊಳಿಸಬೇಕು, ಕಲಿಕಾ ಸಮಸ್ಯೆ ಪರಿಹರಿಸಿ ಜಿಲ್ಲೆಯಲ್ಲಿ ಉತ್ತಮ ಶೈಕ್ಷಣಿಕ ಗುಣಮಟ್ಟ ಇದೆ ಎಂಬ ಹೆಗ್ಗಳಿಕೆಗೆ ಪಾತ್ರರಾಗುವಿರೆಂದು ನಿರೀಕ್ಷಿಸುತ್ತೇವೆ. ನಿಮ್ಮ ಮೇಲೆ ಬಹು ನಿರೀಕ್ಷೆಗಳನ್ನು ಇಟ್ಟು-ಕೊಂಡು ನಮ್ಮ ಜಿಲ್ಲೆಯ ಶೈಕ್ಷಣಿಕ ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಬೇಕೆಂದು ಶಾಲಾ ಪಾಲಕರ ಹೋರಾಟ ಸಮಿತಿ ಸಂಚಾಲಕ ಎಸ್.ಎ. ಗಫಾರ್. ಸಂಘಟನಾ ಸಂಚಾಲಕ ಸುಂಕಪ್ಪ ಮೀಸಿ, ಭ್ರಾತೃತ್ವ ಸಮಿತಿ ಜಿಲ್ಲಾ ಸಹ ಸಂಚಾಲಕ ಚನ್ನಬಸಪ್ಪ ಅಪ್ಪಣ್ಣವರ್, ವಿಮುಕ್ತಿ ವಿದ್ಯಾ ಸಂಸ್ಥೆಯ ಕಾರ್ಯಕರ್ತ ವೀರೇಶ್ ತೆಗ್ಗಿನಮನಿ ಮುಂತಾದವರು ಒತ್ತಾಯಿಸಿದರು.

# ಕೂಚಬಾಳ ಪಿಕೆಪಿಎಸ್ ಗೆ ಅಧ್ಯಕ್ಷ – ಉಪಾಧ್ಯಕ್ಷರ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಕೂಚಬಾಳ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ಗುರುವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಚಂದ್ರಶೇಖರ ಸಂಗಯ್ಯ ಹಿರೇಮಠ( ಕೂಚಬಾಳ) ಹಾಗೂ ಉಪಾಧ್ಯಕ್ಷರಾಗಿ ನಿಂಗಪ್ಪ ಎಲ್ಲಪ್ಪ ಮಡಿಕೇಶ್ವರ( ಗುಡ್ನಾಳ) ಅವಿರೋಧವಾಗಿ ಆಯ್ಕೆಯಾದರು. ಅಧ್ಯಕ್ಷ ಉಪಾಧ್ಯಕ್ಷರ ಆಯ್ಕೆ ಕುರಿತು ನಡೆದ ಈ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಚಂದ್ರಶೇಖರ ಹಿರೇಮಠ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಿಂಗಪ್ಪ ಮಡಿಕೇಶ್ವರ ಇವರಿಬ್ಬರೇ ನಾಮಪತ್ರ ಸಲ್ಲಿಸಿರುವುದರಿಂದ ಇವರು ಅವಿರೋಧವಾಗಿ ಆಯ್ಕೆಯಾಗಿದ್ದಾ-ರೆಂದು ಚುನಾವಣಾಧಿಕಾರಿ ಶ್ರೀಮತಿ ಐ.ಜೆ.ನಾಯಕ್ ಘೋಷಿಸಿದರು.ಈ ವೇಳೆ ಸಂಘದ ನೂತನ ಅಧ್ಯಕ್ಷ ಚಂದ್ರಶೇಖರ ಹಿರೇಮಠ ಮಾತನಾಡಿ ಈ ಸಹಕಾರಿ ಸಂಘವನ್ನು ನಮ್ಮ ಹಿರಿಯರು ಬಹಳ ಕಷ್ಟಪಟ್ಟು ಕಟ್ಟಿ ಬೆಳೆಸಿದ್ದಾರೆ ಈಗ ನಮಗೆ ಇದರ ಜವಾಬ್ದಾರಿಯನ್ನು ವಹಿಸಿದ್ದಾರೆ ನಾವು ನಮ್ಮ ನಾಯಕರಾದ ಆರ್. ಎಸ್. ಪಾಟೀಲ ಕೂಚಬಾಳ ಇವರ ಮಾರ್ಗದರ್ಶನದಲ್ಲಿ ಸಂಘದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇವೆ ಎಂದರು. ಇದೆ ವೇಳೆ ನೂತನ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ನಿರ್ದೇಶಕರಿಗೆ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಈ ವೇಳೆ ನಿರ್ದೇಶಕರುಗಳಾದ ಅಕ್ಷಯ ಕುಮಾರ ಮುದ್ದೇಬಿಹಾಳ ಇಂಗಳಗೇರಿ, ಗುರಣ್ಣ ಗೋಳರೆಡ್ಡಿ (ಇಂಗಳಗೇರಿ) ರಾಮನಗೌಡ ಪಾಟೀಲ (ಕೂಚಬಾಳ) ಶಂಕರಗೌಡ ಬಿರಾದಾರ (ಕೂಚಬಾಳ) ಲಕ್ಷ್ಮಿ ಅಸ್ಕಿ (ಬಾವೂರ), ಶಾರದಾ ಬಿರಾದಾರ(ಕೂಚಬಾಳ),ಸಿದ್ದಪ್ಪ ದಿಡ್ಡಿ(ಇಂಗಳಗೇರಿ),ಗಂಗವ್ವ ಕೋಳ್ಯಳ( ಮಾದರ) ಕೂಚಬಾಳ, ಪರಪ್ಪ ವಾಲಿಕರ (ಇಂಗಳಗೇರಿ),ಭೀಮಶೇಪ್ಪ ಹಿರೇಕುರುಬರ (ಕೂಚಬಾಳ), ಸಂಘದ ಮಾಜಿ ಅಧ್ಯಕ್ಷ ಸಾಹೇಬಗೌಡ ಬಿರಾದಾರ, ಮುಪ್ಪಯ್ಯ ಹಿರೇಮಠ,ಗುರು ಬಿರಾದಾರ,ಕುಮ್ಮಯ್ಯ ಹಿರೇಮಠ,ಸಿದ್ದು ಮೇಲಪ್ಪಗೋಳ,ಕಾರ್ಯದರ್ಶಿ ರಾಮನಗೌಡ ಹಂದ್ರಾಳ ಕೊಣ್ಣೂರ,ಸಿಬ್ಬಂದಿಗಳಾದ ಸಿದ್ದು ಮಡ್ಡಿಮನಿ, ಯಮನೂರಪ್ಪ ಬೊಮ್ಮನಹಳ್ಳಿ ಮತ್ತಿತರರು ಇದ್ದರು.

# ಅರ್ಥಪೂರ್ಣವಾಗಿ ಛತ್ರಪತಿ ಶಿವಾಜಿ ಜಯಂತಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆ:11 : ಛತ್ರಪತಿ ಶಿವಾಜಿ ಅವರ ಜಯಂತಿಯನ್ನು ಇದೇ ಫೆಬ್ರವರಿ 19 ರಂದು ಜಿಲ್ಲಾಡಳಿತದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಶಿವಾಜಿ ಜಯಂತಿ ಆಚರಣೆ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು, ಛತ್ರಪತಿ ಶಿವಾಜಿ ಜಯಂತಿಯೂ ಫೆಬ್ರವರಿ 19 ರಂದು ಇರುವುದರಿಂದ ಜಿಲ್ಲೆಯ ಎಲ್ಲ ಶಾಲೆ, ಕಾಲೇಜು, ಕಚೇರಿಗಳಲ್ಲಿ, ತಾಲೂಕ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು.

ಈಗ ಸಮಾಜದ ಮುಖಂಡರು, ಪ್ರತಿನಿಧಿಗಳ ಬೇಡಿಕೆಯ ಹಿನ್ನೆಲೆಯಲ್ಲಿ ಬರುವ ಫೆಬ್ರವರಿ 24 ರಂದು ಮೆರವಣಿಗೆ ನಡೆಸುವುದಾಗಿ ತಿಳಿಸಿರುವದರಿಂದ ಮೆರವಣಿಗೆ ಮಾರ್ಗದ ಬಗ್ಗೆ ಮುಂಚಿತವಾಗಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಗಮನಕ್ಕೆ ತರಲು ಸೂಚಿಸಲಾಯಿತು.

ಜಿಲ್ಲಾ ಮಟ್ಟದ ಮುಖ್ಯ ಸಮಾರಂಭವು ಫೆಬ್ರವರಿ 19 ರಂದು ನಗರದ ವಿದ್ಯಾಮಂಗಲ ಕಾರ್ಯಾಲಯದಲ್ಲಿ ಮಧ್ಯಾಹ್ನ 3 ಗಂಟೆಗೆ ಆಚರಿಸಲು ಇಂದಿನ ಸಭೆಯಲ್ಲಿ ನಿರ್ಧರಿಸಲಾಯಿತು.

ಶಿಷ್ಟಾಚಾರದಂತೆ ಅತಿಥಿಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಜಿಲ್ಲೆಯ ಎಲ್ಲ ಶಾಲಾ, ಕಾಲೇಜು, ಕಚೇರಿಗಳಲ್ಲಿ ಈ ಜಯಂತಿ ಆಚರಿಸಲು ಹಾಗೂ ತಾಲೂಕು ಮಟ್ಟದಲ್ಲಿ, ಈ ಜಯಂತಿಯನ್ನು ಆಚರಣೆಗೆ ಸಕಲ ಕ್ರಮಗಳನ್ನು ಕೈಗೊಳ್ಳಬೇಕು, ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲು ಹಾಗೂ ನುರಿತ ಉಪನ್ಯಾಸಕರನ್ನು ಜಿಲ್ಲಾಮಟ್ಟದಲ್ಲಿ ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಜಯಂತ್ಯೋತ್ಸವ ಸಮಿತಿ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು, ಜಿಲ್ಲೆಯ ಅಧಿಕಾರಿಗಳು, ಸಿಬ್ಬಂದಿಗಳು, ಆಯಾ ಸಮಾಜದ ಮುಖಂಡರು, ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಸಲಹೆ ನೀಡಿದರು ಎಂದು ಹೇಳಿದರು.

ಸಭೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ, ರಾಜಕುಮಾರ್ ಧಾವಲೆ, ಜಿತೇಂದ್ರ ನವಗಿರೆ, ರಾಹುಲ್ ಮೊರ್ಡೇ, ಪ್ರಕಾಶ್ ಭೋಸ್ಲೆ ಸೇರಿದಂತೆ ಸಮಾಜದ ಇತರರು ಉಪಸ್ಥಿತರಿದ್ದರು.

# ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಸುರಪುರ ತಾಲೂಕಿನ ಕೆಂಭಾವಿ ವಿದ್ಯಾರ್ಥಿ ಜೀವನವನ್ನು ಸದುಪಯೋಗಪಡಿಸಿಕೊಂಡು ಚೆನ್ನಾಗಿ ಓದಿದರೆ ಜೀವನ ಪೂರ್ತಿ ನೀವು ನೆಮ್ಮದಿಯ ಮತ್ತು ಸಂತೃಪ್ತಿ ಜೀವನ ನಡೆಸಬಹುದು ಎಂದು ಶ್ರೀ ಕಾಂತೇಶ್ವರ ಮಠದ ಶ್ರೀ ಶ್ರೀ ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿಗಳು. ಹೇಳಿಕೆ ಪಟ್ಟಣದ ಪ್ರತಿಷ್ಠಿತ ಶಾಲೆಯಾದ ಹೇಮರೆಡ್ಡಿ ಸ್ಕೂಲಿನ ಎಸ್ ಎಸ್ ಎಲ್ ಸಿ ಮಕ್ಕಳ ಬೀಳ್ಕೊಡುಗೆ ಸಮಾರಂಭದಲ್ಲಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಶ್ರೀಗಳು. ಎಸ್ ಎಸ್ ಎಲ್ ಸಿ ವಿದ್ಯಾರ್ಥಿ ಪ್ರಮುಖ ಘಟ್ಟ. ಇಲ್ಲಿಂದಲೇ ನೀವು ವಿವಿಧ ಕೋರ್ಸುಗಳನ್ನು ಆಯ್ಕೆ ಮಾಡಿಕೊಳ್ಳಬೇಕಾಗುತ್ತದೆ. ಉತ್ತಮ ಅಂಕ ಪಡೆದ-ರೆ ನೀವು ಬಯಸಿದ ಕೋರ್ಸ್ ಗಳನ್ನು ಪಡೆದುಕೊಳ್ಳಲು ಉತ್ತಮ ಕಾಲೇಜಿಗೆ ಪ್ರವೇಶ ದೊರೆಸಿಕೊಳ್ಳಲು ನೆರವಾಗುತ್ತದೆ. ಶ್ರೀಗಳು ಎಂದರು. ಎಸ್ ಎಲ್ ಸಿ ವಿದ್ಯಾರ್ಥಿನಿಯರು ಮಾತನಾಡಿ. ಕಣ್ಣಂಚಿನಲ್ಲಿ ನೀರು ಹಾಕುತ್ತಾ.. ಇಂಥ ಸ್ಕೂಲಿನಲ್ಲಿ ಕಲಿತ ನಾವು ಧನ್ಯರು.. ಶಿಕ್ಷಕ ಶಿಕ್ಷಕಿಯರಿಗೆ ಧನ್ಯವಾದ ತಿಳಿಸಿದ ವಿದ್ಯಾರ್ಥಿ ವಿದ್ಯಾರ್ಥಿನಿಯರು.! ಈ ಬಿಳ್ಕೊಡುಗೆ ಸಮಾರಂಭದ ಅತಿಥಿ-ಯಾಗಿ ಭಾಗವಹಿಸಿದ ಸುಮಿತ್ರಪ್ಪ ಸಾಹುಕಾರ್ ಅಂಗಡಿ ಬಂದೇನವಾಜ್ ನಾಲತ್ವಾಡ (ಅಖಿಕ) ವೈ ಟಿ ಪಾಟೀಲ್ ಸಿದ್ದನಗೌಡ ಪಾಟೀಲ್ ಶಿವಪುರ ಮಲ್ಲ ರೆಡ್ಡಿ ಹತ್ತಿಕುಣಿ "ಮೋಹನ್ ರೆಡ್ಡಿ ದಿಗ್ಗಾವಿ" "ಶ್ರೀಮತಿ ಉಮಾದೇವಿ ಪಾಟೀಲ್" ವೆಂಕನಗೌಡ ಪೊಲೀಸ್ ಪಾಟೀಲ್ ಗಣ್ಯರು ಹೇಮರೆಡ್ಡಿ ಶಾಲೆಯ ಶಿಕ್ಷಕರು ಶಿಕ್ಷಕಿಯರು ಭಾಗಿಯಾಗಿದ್ದರು.!




ತಾಳಿಕೋಟಿ ಪಟ್ಟಣದಲ್ಲಿ ಫೆಬ್ರವರಿ 21ರಿಂದ 23ರ ವರೆಗೆ ನಡೆಯಲಿರುವ ಸಾರ್ವಜನಿಕ ಕುರಆನ್ ಪ್ರವಚನ ಕಾರ್ಯಕ್ರಮದ ಬಿತ್ತಿ ಪತ್ರ ( ಪೋಸ್ಟರ್) ಗಳನ್ನು ಗುರುವಾರ ಪ್ರವಚನ ಕಾರ್ಯಾಲಯದಲ್ಲಿ ಅನಾವರಣಗೊಳಿಸಲಾಯಿತು. ಈ ವೇಳೆ ಪೂಜ್ಯ ಶ್ರೀ ಶರಣಪ್ಪ ಮುತ್ಯಾ ಶರಣರ,ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ, ಹಿರಿಯ ಪತ್ರಕರ್ತ ಜಿ.ಟಿ. ಘೋರ್ಪಡೆ, ಕಾಂಗ್ರೆಸ್ ಜಿಲ್ಲಾ ಕಾರ್ಯದರ್ಶಿ ವಿಜಯಸಿಂಗ್ ಹಜೇರಿ,ವಸಾಪ ಅಧ್ಯಕ್ಷ ಮಹಾಂತೇಶ ಮುರಾಳ, ಎ.ಕೆ.ನಮಾಜಕಟ್ಟಿ,ಎಂ.ಎ.ಮೇತ್ರಿ, ಸಂಚಾಲಕ ಸೈಯದ್ ಇರ್ಫಾನ್ ಖಾಜಿ, ಅಧ್ಯಕ್ಷ ಮುಜಾಹೀದ ನಮಾಜಕಟ್ಟಿ ಮತ್ತಿತರರು ಇದ್ದರು.

# ಟೈಲ್ ಕಾರ್ಖಾನೆಯಿಂದ ವಿಷಕಾರಿ ಹೊಗೆ: ಪರಿಸರಕ್ಕೆ ಮಾರಕ

ಮಲ್ಲಮ್ಮ ನುಡಿ ವಾರ್ತೆ

ಕಮಲಾಪುರ,ಫೆ 13: ತಾಲ್ಲೂಕಿನಲ್ಲಿ ಪರವಾನಿಗೆ ಇಲ್ಲದೆ ಅಕ್ರಮವಾಗಿ ನಡೆಸುತ್ತಿರುವ ಟೈಲ್ಸ್ ಕಾರ್ಖಾನೆಯಿಂದ ಅಕ್ಕಪಕ್ಕದ ರೈತರ ಬೆಳೆಗಳು ಬಾಡಿ ಹೋಗುತ್ತಿವೆ, 10, 15 ಕಿಲೋಮೀಟರ್ ಗ್ರಾಮದವರೆಗೆ ಟೈಯರ್ ಸುಡುವ ಹೊಗೆಯಿಂದ ರಾತ್ರಿ ಸಮಯ ದುರ್ವಾಸನೆ ಹೆಚ್ಚಾಗುತ್ತಿದೆ ಎಂದು ಸಾರ್ವಜನಿಕರು ದೂರಿದ್ದಾ-ರೆ. ಕಮಲಾಪುರ ಹತ್ತಿರ ಟೈರ್ ಸುಡುವ ಕಾರ್ಖಾನೆಯಲ್ಲಿ ಅನುಪಯುಕ್ತ ವಾಹನಗಳ ಟೈರ್ ಖರೀದಿಸಿ, ಟ್ರಕ್ ಹಾಗೂ ಲಾರಿಗಳ ಮೂಲಕ ಟೈಯರ್ ತಂದು ಸುಡುತ್ತಾರೆ. ಅದ-ರಿಂದ ಬರುವ ಹೊಗೆಯಿಂದ ಅಥವಾ ಗಂಧಕದ ಡೈಆಕ್ಸೆಡ್ ಕಾರ್ಖಾನೆ ಸುತ್ತಲು ಇರುವ ರೈತರ ಜಮೀನುಗಳು ಫಲವತ್ತತೆ ಕಳೆದುಕೊಳ್ಳುತ್ತಿವೆ. ಭೂಮಿಯ ಪರಿಸರ ವ್ಯವಸ್ಥೆಗಳಿಗೂ ಅಪಾಯ ಉಂಟಾಗಲಿದೆ.

# ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡಿ: ಮುಖಂಡ ವಿಜಯಸಿಂಗ್



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಕಳೆದ 22 ತಿಂಗಳಿನಿಂದ ಪುರಸಭೆ ವಿಷಯ ನ್ಯಾಯಾಲಯದ ವ್ಯಾಪ್ತಿಗೆ ಹೋಗಿದ್ದರಿಂದ ಅಭಿವೃದ್ಧಿಗೆ ತೀವ್ರ ಹಿನ್ನಡೆಯಾಗಿದೆ. ಈಗ ಆಡಳಿತ ಮಂಡಳಿ ರಚನೆಯಾಗಿದ್ದು ನಿಮಗೆ ಕೇವಲ ಏಳೆಂಟು ತಿಂಗಳುಗಳ ಸೇವಾ ಅವಕಾಶ ಸಿಕ್ಕಿದೆ ಇದರಲ್ಲಿ ಪಟ್ಟಣದ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಆಸಕ್ತಿಯಿಂದ ಕೆಲಸ ಮಾಡಿ ಎಂದು ಪುರಸಭೆ ಮಾಜಿ ಸದಸ್ಯ ವಿಜಯಸಿಂಗ್ ಹಜೇರಿ ಹೇಳಿದರು. ಗುರುವಾರ ಪಟ್ಟಣದ ಪುರಸಭೆಯಲ್ಲಿ ನೂತನವಾಗಿ ಆಯ್ಕೆಯಾದ ಅಧ್ಯಕ್ಷ ಉಪಾಧ್ಯಕ್ಷರ ಅಧಿಕಾರ ಪದಗ್ರಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ಪ್ರತಿಮಾಸಕ್ಕೊಮ್ಮೆ ಸಭೆಗಳನ್ನು ನಡೆಸಿ ಎಲ್ಲ ವಾರ್ಡಿನ ಸದಸ್ಯರಿಂದ ಅವರ ಸಮಸ್ಯೆಗಳನ್ನು ತಿಳಿದುಕೊಂಡು ಕ್ರಿಯಾಯೋಜನೆ ರೂಪಿಸಿ ಕೆಲಸ ಮಾಡಿ ನಿಮ್ಮಲ್ಲಿ ಅನುಭವಿ ಸದಸ್ಯರಿದ್ದಾರೆ ಅವರಿಂದ ಪ್ರಯೋಜನ ಪಡೆಯಿರಿ, ನೀವು ಒಳ್ಳೆಯ ರೀತಿಯಲ್ಲಿ ಕೆಲಸ ಮಾಡಿದರೆ ಶಾಸಕರಿಗೂ ಒಳ್ಳೆಯ ಹೆಸರು ಬರುತ್ತದೆ ಎಂದರು. ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಹಾಗೂ ಹಾಲಿ ಸದಸ್ಯ ಪರಶುರಾಮ ತಂಗಡಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಸಿದ್ದನಗೌಡ ಪಾಟೀಲ ನಾವದಗಿ,ಪುರಸಭೆ ಮಾಜಿ ಉಪಾಧ್ಯಕ್ಷ ಮಾಸೂಮಸಾಬ ಕೆಂಭಾವಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಿಬೂಬ ಚೋರಗಸ್ತಿ, ಸಿಕಂದರ್ ವಠಾರ,ಅಬ್ದುಲ್ ಸತ್ತಾರ ಅವಟಿ,ಮಂಜೂರಬೇಪಾರಿ,ಹುಸೇನ್ ಜಮಾದಾರ, ಸಿಕಂದರ ಡೋಣಿ, ಮೋದೀನಸಾ, ಮೆಹಬೂಬ ಶಾ ಮಕಾಂದಾರ, ಆಸಿಫ್ ಕೆಂಬಾವಿ, ಪುರಸಭೆ ಸದಸ್ಯರಾದ ಮುತ್ತಪ್ಪ ಚಮಲಾಪೂರ,ಯಾಸೀನ ಮಮದಾಪೂರ,ಮುದುಕಪ್ಪ ಬಡಿಗೇರ, ನಿಂಗಣ್ಣ ಕುಂ-ಟೋಜಿ, ಮುಖ್ಯ ಅಧಿಕಾರಿ ಮೋಹನ ಜಾಧವ ಹಾಗೂ ಸಿಬ್ಬಂದಿಗಳು ಇದ್ದರು.

# ಕತ್ತಲೆಯಿಂದ ಬೆಳಕಿನೆಡೆ ನಡೆಸುವುದೆ ಶಿಕ್ಷಣ – ಸುರೇಖಾ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅಂಧಕಾರದಲ್ಲಿ ಮುಳುಗಿರುವ ಸಮಾಜದಲ್ಲಿ, ಕತ್ತಲೆಯಿಂದ ಬೆಳಕಿನೆಡೆ ನಡೆಸುವುದೇ ನಿಜವಾದ ಶಿಕ್ಷಣವಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಆಡಳಿತ ವಿಭಾಗದ ರಿಜಿಸ್ಟ್ರಾರ್ ಸುರೇಖಾ (ಕೆ.ಎ.ಎಸ್) ಅಭಿಪ್ರಾಯಪಟ್ಟರು.

ಪಟ್ಟಣದ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಶ್ರೀ ಚನ್ನಬಸವೇಶ್ವರ ಸ್ನಾತ-ಕೋತ್ತರ ಪದವಿ ಮಹಾವಿದ್ಯಾಲಯದಲ್ಲಿ ಗುರುವಾರ ನಡೆದ ಪ್ರಗತಿ ಸಮಾರಂಭ 2025 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸ್ಪರ್ಧಾತ್ಮಕ ಯುಗದಲ್ಲಿ ಸತತ ಪ್ರಯತ್ನದ ಅವಶ್ಯಕತೆ ಇದೆ. ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಸತತ ಪ್ರಯತ್ನದಿಂದ ಯಶಸ್ಸು ಕಂಡುಕೊಳ್ಳಬೇಕು. ಕತ್ತಲೆಯಿಂದ ಬೆಳಕಿನೆಡೆ ನಡೆಯುವುದೇ ಶಿಕ್ಷಣವಾಗಿದೆ. ಅಂಕಗಳಿಗಾಗಿ ವಿದ್ಯಾಭ್ಯಾಸ ಮಾಡದೇ ಸಂಪೂರ್ಣ ವಿಕಾಸಕ್ಕಾಗಿ ಅಭ್ಯಾಸ ಮಾಡಬೇಕು. ವಿದ್ಯಾರ್ಥಿನಿಯರು ಧೃಢ ಸಂಕಲ್ಪದೊಂದಿಗೆ ಮುಂದೆ ಬರುವ ಕಾರ್ಯವಾಗಬೇಕು ಎಂದು ಹೇಳಿದರು.

ಬೀದರ ವಿ.ವಿ. ಮೌಲ್ಯಮಾಪನ ವಿಭಾಗದ ರಿಜಿಸ್ಟ್ರಾರ್ ಡಾ. ಪರಮೇಶ್ವ ನಾಯಕ ಮಾತನಾಡಿ, ವಿಶ್ವ ಗೆಲ್ಲಲೂ ಶಿಕ್ಷಣವೇ ಪೂರಕ, ಶಿಕ್ಷಣದಿಂದಲೇ ಎಲ್ಲವೂ ಸಾಧ್ಯ ಎನ್ನುವ ಮೂಲ ಉದ್ದೇಶದಿಂದ ಖಂಡ್ರೆ ಕುಟುಂಬದ ಹಿರಿಯರು ಈ ಭಾಗದಲ್ಲಿ ಶಿಕ್ಷಣ ಸಂಸ್ಥೆ ತೆಗೆದು, ಗ್ರಾಮೀಣ ಭಾಗದ ಬಡ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಕಾರ್ಯ ಮಾಡುತ್ತಿರುವುದು ಪ್ರಶಂಶನಾರ್ಹವಾಗಿದೆ. ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳನ್ನು ರೂಪಿಸುವಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಕಾರ್ಯ ನಿರ್ವಹಿಸುತ್ತಲಿದೆ. ವಿದ್ಯಾರ್ಥಿಗಳು ಧನಾತ್ಮಕ ಚಿಂತನೆ ಬೆಳೆಸಿಕೊಂಡು ಮುಂದೆ ಬರಬೇಕು ಎಂದು ಹೇಳಿದರು.

> ವಿದ್ಯಾರ್ಥಿಗಳು ಸತತ ಪ್ರಯತ್ನದಿಂದ ಮುನ್ನಡಯಬೇಕು. ಪಠ್ಯ ಪುಸ್ತಕ ಆಳವಾಗಿ ಅಭ್ಯಾಸ ಮಾಡುವುದರೊಂದಿಗೆ ಪರೀಕ್ಷೆ ಎದುರಿಸುವ ಕಾರ್ಯವಾಗಬೇಕು. ಸಕಾರಾತ್ಮಕ ಚಿಂತನೆಯೊಂದಿಗೆ ಜೀವನ ರೂಪಿಸಿಕೊಳ್ಳಬೇಕು.
>
> – ಡಾ. ಗೀತಾ ಈಶ್ವರಖಂಡ್ರೆ, ನಿರ್ದೇಶಕರು, ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಭಾಲ್ಕಿ.

ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ. ಗೀತಾ ಖಂಡ್ರೆ ಕಾರ್ಯಕ್ರಮದ ಅದ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಸಿ.ಬಿ. ಪಿಜಿ ಕಾಲೇಜಿನ ಪ್ರಾಂಶುಪಾಲೆ ಪ್ರೋ. ಮೀನಾಕುಮಾರಿ ಪಾಟೀಲ, ನಮ್ಮ ನಡೆ ಪ್ರಗತಿಯ ಕಡೆ ಎನ್ನುವ ಧ್ಯೇಯೋದ್ಯಾಸದೊಂದಿಗೆ ಕೇವಲ ಮೂರು ಕೋರ್ಸಗಳಿಂದ ಪ್ರಾರಂಭವಾದ ಸ್ನಾತಕೋತ್ತರ ಪದವಿ ಕಾಲೇಜು ಇವಾಗಿ 7 ವಿಭಾಗಗಳೊಂದಿಗೆ ಮುನ್ನಡೆಯುತ್ತಿದೆ ಎಂದು ಹೇಳಿದರು. ವಿದ್ಯಾರ್ಥಿನಿ ಭವಾನಿ ಹಿರೇಮಠ ಅನುಭವ ನುಡಿ ನುಡಿದರು. ಕಾರ್ಯಕ್ರಮದಲ್ಲಿ ಎಸ್.ವಿ.ಇ.ಎಸ್ ಆಡಳಿತಾಧಿಕಾರಿ ಅಂಕುಶ ಢೋಲೆ, ಸಿ.ಬಿ. ಡಿಗ್ರೀ ಕಾಲೇಜಿನ ಪ್ರಾಂಶುಪಾಲ ಪ್ರೊ. ರಮೇಶ ಪಾಟೀಲ ಉಪಸ್ಥಿತರಿದ್ದರು. ವಿದ್ಯಾರ್ಥಿ ಶರ್ಫೊದಿನ್ ದೇಶಭಕ್ತಿ ಗೀತೆ ಹಾಡಿದರು. ಮೀನಾ ಪಾಟೀಲ ಸ್ವಾಗತಿಸಿದರು. ರಾಬರ್ಟ ನಿರೂಪಿಸಿದರು. ಪಾಶುಸಾಬ್ ವಂದಿಸಿದರು.

# ರಕ್ತ ಸಹಿ ಸಂಗ್ರಹಿಸಿ ಹಾಸ್ಟೆಲ್ ಹೊರಗುತ್ತಿಗೆ ನೌಕರರ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಫೆ.13: ರಾಜ್ಯದಲ್ಲಿ ಕಳೆದ 15– 20 ವರ್ಷಗಳಿಂದ ಸರಕಾರಿ ಹಾಸ್ಟೆಲ್‌ಗಳಲ್ಲಿ ದುಡಿಯುತ್ತಿರುವ ಹೊರಗುತ್ತಿಗೆ ನೌಕರರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಸರಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘ ಜಿಲ್ಲಾ ಸಮಿತಿಯಿಂದ ನಗರದಲ್ಲಿ ಇಂದು ರಕ್ತದಲ್ಲಿ ಸಹಿ ಸಂಗ್ರಹಿಸಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಕಳೆದ 25 ದಿನಗಳಿಂದ ನೂರಾರು ಮಹಿಳೆಯರು ಅಹೋರಾತ್ರಿ ಧರಣಿ ನಡೆಸಿದರೂ ಜಿಲ್ಲಾಡಳಿತ ಸ್ಪಂದಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಭೀಮಶೆಟ್ಟಿ ಯಂಪಳ್ಳಿ, ಹುಲಗಪ್ಪಾ ಚಲವಾದಿ, ಪರಶುರಾಮ ಹಡಲಗಿ, ಕಾಶೀನಾಥ ಬಂಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಕ್ಕಳು ತಮ್ಮ ಪ್ರತಿಭೆ ಗುರುತಿಸಲು ಸ್ಪರ್ಧೆಗಳಲ್ಲಿ ಭಾಗವಹಿಸಲಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.13–ಮಕ್ಕಳಲ್ಲಿನ ಅನೇಕರೀತಿಯಪ್ರತಿಭೆಗಳನ್ನು ಗುರುತಿಸಲುವಿವಿಧಸ್ಪರ್ಧೆಗಳಲ್ಲಿ ಭಾಗವಹಿಸಬೇಕು ಎಂದು ಸರ್ಕಾರಿ ಕನ್ನಡ ಮಾಧ್ಯಮ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಮುಖ್ಯಪಾಧ್ಯಾಯರಾದ ಲೀಮ ರೋಸ್ ಅವರು ಹೇಳಿದರು.

ರಾಜ್ಯಬಾಲಭವನಸೊಸೈಟಿ (ರಿ)ಬೆಂಗಳೂರು,ಜಿಲ್ಲಾಡಳಿತ, ಜಿಲ್ಲಾಪಂಚಾಯತ್,ಮಹಿಳಾ ಮತ್ತುಮಕ್ಕಳಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ,ಜಿಲ್ಲಾ ಬಾಲಭವನಸೊಸೈಟಿ ಇವರ ಸಹಯೋಗದಲ್ಲಿ ನಗರದ ಪಾರ್ವತಿನಗರಬಡಾವಣೆಯ ಸರಕಾರಿ ಕನ್ನಡ ಮಾಧ್ಯಮ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 05 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಗುರುವಾರ ಏರ್ಪಡಿಸಿದ್ದ ಚಿತ್ರಕಲೆ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳಿಗೆಪಠ್ಯದಜೊತೆಗೆಪಠ್ಯೇತರ ಚಟುವಟಿಕೆಗಳಲ್ಲಿಯೂ ಎಲ್ಲಾ ಮಕ್ಕಳು ಹೆಚ್ಚಾಗಿ ಭಾಗವಹಿಸಲು ಆಸಕ್ತಿ ವಹಿಸಬೇಕು ಎಂದು ಕಿವಿಮಾತು ಹೇಳಿದರು.

ಶಿಕ್ಷಕಿ ಶ್ವೇತಾ ಹೆಚ್.ಎಂ ಅವರು ಮಾತನಾಡಿ, ಮಕ್ಕಳಿಗೆ ವಿವಿಧ ಕಲೆಗಳಲ್ಲಿ ಪ್ರತಿಭೆಯಿದ್ದು, ಅದನ್ನು ಸೂಕ್ತ ರೀತಿಯಲ್ಲಿ ಹೊರ ತರುವಲ್ಲಿ ಇಂತಹ ಸ್ಪರ್ಧೆಯಲ್ಲಿಭಾಗವಹಿಸಿದಾಗ ಮಾತ್ರ ತಮ್ಮಲ್ಲಿರುವ ಹೊಸ ಪ್ರತಿಭೆ ಹೊರ ಹೊಮ್ಮಲು ಸಾಧ್ಯ ಎಂದು ಹೇಳಿದರು.

ಚಿತ್ರಕಲೆ ಸ್ಪರ್ಧೆಯಲ್ಲಿ 65 ಮಕ್ಕಳು ಭಾಗವಹಿಸಿದ್ದರು. ವಿಜೇತರಾದಮಕ್ಕಳಿಗೆಪ್ರಮಾಣ ಪತ್ರ ಹಾಗೂ ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕರಾದ ವೀಣಾಕುಟ್ಟಿ.ಎಂ., ಶಶಿರೇಖಾ, ಶರ್ಮಿಳಾ.ಯು., ಜಿಲ್ಲಾ ಬಾಲಭವನ ಸೊಸೈಟಿಯ ಕಚೇರಿ ಸಹಾಯಕ ಜೀರ್ ಮಲ್ಲಿಕಾರ್ಜುನ,ಜಿಲ್ಲಾಮಹಿಳಾ ಸಬಲೀಕರಣ ಘಟಕದ ಕಾರ್ಯಕ್ರಮ ಸಂಯೋಜಕ ಷಹಜಹಾನ್.ಟಿ ಸೇರಿದಂತೆ ಸಿಬ್ಬಂದಿ ವರ್ಗ ಮತ್ತು ಶಾಲಾ ಮಕ್ಕಳು ಭಾಗವಹಿಸಿದ್ದರು.

# ಸಿರುಗುಪ್ಪ: ಸ್ವ–ಸಹಾಯ ಸಂಘಗಳಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.13–ಸಿರುಗುಪ್ಪ ನಗರಸಭೆ ವ್ಯಾಪ್ತಿಯ ಡೇ–ನಲ್ಮ್ ಅಭಿಯಾನದಡಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ವಸೂಲಾತಿಗಾಗಿನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರಚಿತವಾದ ಅರ್ಹ ಮಹಿಳಾ ಸ್ವಸಹಾಯ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಿರುಗುಪ್ಪ ನಗರಸಭೆ ಪೌರಯುಕ್ತರು ತಿಳಿಸಿದ್ದಾರೆ.

ನಗರಸಭೆ ವ್ಯಾಪ್ತಿಯಲ್ಲಿ ಬಹು ದಿನಗಳಿಂದ ಬಾಕಿ ಇರುವ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ವಸೂಲಾತಿ ಸಂಗ್ರಹಣೆ ಮಾಡಲು ತೊಡಗಿಸಿಕೊಳ್ಳಲಾಗುವುದು.

ಆಸಕ್ತ ಮಹಿಳಾ ಸ್ವಸಹಾಯ ಸಂಘಗಳು ಸಿರುಗುಪ್ಪನಗರಸಭೆ ಕಾರ್ಯಾಲಯಕ್ಕೆ ಭೇಟಿ ನೀಡಿ ಅರ್ಜಿ ನಮೂನೆ ಪಡೆದುಕೊಂಡು, ಭರ್ತಿ ಮಾಡಿ ಫೆ.25 ರೊಳಗಾಗಿ ಸಲ್ಲಿಸಬೇಕು.

*ಅರ್ಹತೆ:*

ಮಹಿಳಾಸ್ವ–ಸಹಾಯಸಂಘವು ಡೇ–ನಲ್ಮ್ ಅಭಿಯಾನದಡಿ ನೋಂದಾಯಿಸಿರಬೇಕು ಹಾಗೂ ಪಂಚಸೂತ್ರಗಳನ್ನು ಅನುಸರಿಸುತ್ತಿರುಬೇಕು(ನಿರಂತರ ಸಭೆ, ನಿರಂತರ ಉಳಿತಾಯ, ಆಂತರಿಕ ಸಾಲ ವಿತರಣೆ, ನಿಯಮಿತ ಸಾಲಮರುಪಾವತಿ ಮತ್ತುದಾಖಲಾತಿ ನಿರ್ವಹಣೆ).

ಆಸಕ್ತಮಹಿಳಾ ಸ್ವ–ಸಹಾಯ ಸಂಘಗಳ ಸದಸ್ಯರು ಕನಿಷ್ಠ 7ನೇ ತರಗತಿಯವರೆಗೆ ಶಿಕ್ಷಣ ಹಾಗೂ ಎಲೆಕ್ಟ್ರಾನಿಕ್ ಪರಿಕರ ಬಳಸುವ ಸಾಮರ್ಥ್ಯ ಹೊಂದಿರಬೇಕು. ಸ್ವ–ಸಹಾಯ ಸಂಘವು ಸಂಘದ ಹೆಸರಿನಲ್ಲಿ ಸಕ್ರೀಯ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು.

ಬ್ಯಾಂಕಿನ ಮೂಲಕ ಅಥವಾ ಆಂತರಿಕ ಸಾಲ ಪಡೆದು ನಿಯಮಿತವಾಗಿ ಸಾಲ ಮರುಪಾವತಿ ಮಾಡಿರಬೇಕು.

ಸ್ವ–ಸಹಾಯ ಗಂಪು ಸಂಬಂಧಪಟ್ಟನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಡೇ–ಎನ್‌ಯುಎಲ್‌ಎಂಅಭಿಯಾನದಡಿ ನೋಂದಾಯಿಸಿಕೊಂಡು ಮಾನ್ಯತೆ ಇರುವ ಎಂ.ಐಎಸ್ ಕೋಡ್ ಹೊಂದಿರಬೇಕು.

ಸ್ವ–ಸಹಾಯ ಗುಂಪು ರಚನೆಯಾಗಿ ಕನಿಷ್ಠ 03 ವರ್ಷ ಪೂರೈಸಿರಬೇಕು. ಸ್ವ–ಸಹಾಯ ಗುಂಪು ಮತ್ತು ಗುಂಪಿನ ಸದಸ್ಯರು ಯಾವುದೇ ಅಪರಾಧ ಅಥವಾ ಸಮಾಜ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿರುವ ಬಗ್ಗೆ ಹಿನ್ನಲೆಯನ್ನುಹೊಂದಿರಬಾರದು.

ಸಿರುಗುಪ್ಪನಗರಸಭೆಯಿಂದ ನಿಗದಿಪಡಿಸಿದ ಆಸ್ತಿ ತೆ–ರಿಗೆ ಮತ್ತು ನೀರಿನ ಶುಲ್ಕ ವಸೂಲಾತಿ ಗುರಿಗೆ ತಕ್ಕಂತೆ ಕಾರ್ಯನಿರ್ವಹಿಸಲು ಆಸಕ್ತಿ ಮತ್ತುಬದ್ಧತೆಹೊಂದಿರಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಸಂಚಾರ ಗಣತಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 13: ಕರ್ನಾಟಕ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಿಂದ 2025ನೇ ಸಾಲಿನ 2025ರ ಫೆಬ್ರವರಿ 17 ರಂದು ಬೆಳಿಗ್ಗೆ 6 ರಿಂದ ಫೆಬ್ರವರಿ 24ರ ವರೆಗೆ ಸತತವಾಗಿ 7 ದಿನಕಾಲ ರಸ್ತೆ ಸಂಚಾರ ಗಣ–ತಿಯ ಆಯೋಜಿಸಲಾಗಿದೆ ಎಂದು ಕಲಬುರಗಿ ವೃತ್ತ ಲೋಕೋಪಯೋಗಿ ಇಲಾಖೆ ಅಧೀಕ್ಷಕ ಅಭಿಯಂತರರು ಅವರು ತಿಳಿಸಿದ್ದಾರೆ. ಪ್ರತಿ 5 ವರ್ಷಕ್ಕೊಮ್ಮೆ 7ಸತತವಾಗಿ ದಿನಗಳಕಾಲ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ವಾಹನ ಸಂಚಾರ ಗಣತಿ ಕಾರ್ಯವನ್ನು ಕೈಗೊಳ್ಳಲಾಗಿತ್ತಿದೆ. ಈ ಗಣತಿಯಿಂದ ಸಂಗ್ರಹಿಸಿದ ಮಾಹಿತಿಯಿಂದ ಸರ್ಕಾರಕ್ಕೆ ರಸ್ತೆಗಳ ಸಂಚಾರ ಸಾಂದ್ರತೆ, ಸಾಂಚರ ತೀವ್ರತೆ ಕಂಡುಹಿಡಿಯುವುದಕ್ಕೆ ರಸ್ತೆಗಳ ಅಗಲತೆ ನಿರ್ಧರಿಸಲು, ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಹಾಗೂ ರಸ್ತೆಗಳ ಸ್ಥಿತಿಗತಿ ಸುಧಾರಿಸಲು ಅನುಕೂಲವಾಗುತ್ತದೆ. ಲೋಕೋಪಯೋಗಿ ಇಲಾಖೆಯು ಪ್ರತಿ 5 ವರ್ಷಕ್ಕೊಮ್ಮೆ ಸತತವಾಗಿ 7 ದಿನಗಳಕಾಲ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾಮುಖ್ಯ ರಸ್ತೆಗಳ ಮೇಲೆ ವಾಹನ ಸಂಚಾರ ಗಣತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದ್ದು, ಈ ಸಂಚಾರ ಗಣತಿಯ 2025ನೇ ಸಾಲಿನಲ್ಲಿ 7 ದಿನಗಳಕಾಲ 2025ರ ಫೆಬ್ರವರಿ 17 ರಂದು ಬೆಳಿಗ್ಗೆ 6 ರಿಂದ ಫೆಬ್ರವರಿ 24ರ ಬೆಳಿಗ್ಗೆ 6 ಗಂಟೆ–ಯ ವರೆಗೆ ಸತತವಾಗಿ 7 ದಿನಗಳಕಾಲ ರಸ್ತೆ ಸಂಚಾರ ಗಣತಿ ಇರುತ್ತದೆ. 2025ರ ಫೆಬ್ರವರಿ 14 ರಿಂದ 20ರ ವರೆಗೆ ರಸ್ತೆ ಸಂಚಾರ ಗಣತಿ ಇದೇ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಗತಿ ಪರಿಶೀಲನಾ ಸಭೆಯಲ್ಲಿ ರಾಜ್ಯ ಆಯುಕ ದಾಸ್ ಸೂರ್ಯವಂಶಿ ಸೂಚನೆ ವಿಶೇಷಚೇತನರಿಗಿರುವ ಶೇ.05 ರಷ್ಟು ಅನುದಾನ ಬಳಕೆಯಾಗಬೇಕು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.13–ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರ ವಿವಿಧ ಇಲಾಖೆಗಳ ಅಭಿವೃದ್ಧಿ ಯೋಜನೆಗಳಡಿ ವಿಶೇಷಚೇತನರಿಗಾಗಿಯೇ ಮೀಸಲಿರಿಸಿದ ಶೇ.05 ಅನುದಾನ ಪರಿಪೂರ್ಣವಾಗಿ ಬಳಸಿ, ಅವರ ಏಳ್ಗೆಗಾಗಿ ಅಧಿಕಾರಿಗಳು ಕಾಳಜಿ ವಹಿಸಬೇಕು ಎಂದು ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ ಅನುಷ್ಠಾನದ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ ಅವರು ಹೇಳಿದರು.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ 2016 ರ ಅನುಷ್ಠಾನ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶೇಷಚೇತನರ ಸಮುದಾಯದಲ್ಲಿ 21 ರೀತಿಯ ವಿವಿಧ ಅಂಗವಿಕಲ ವೈಫಲ್ಯತೆ ಕಾಣಬಹುದು. ಅವರ ಕಷ್ಟಕರ ಜೀವನ ಊಹಿಸಲಾರದು. ಹಾಗಾಗಿ ಕಾನೂನುಬದ್ಧವಾಗಿ ಅವರಿಗಿರುವ ಸೌಲಭ್ಯಗಳನ್ನು ತಲುಪಿಸುವ ಮೂಲಕ ಅಧಿಕಾರಿಗಳು ದಾರಿದೀಪವಾಗಬೇಕು ಎಂದರು.

ವಿಶೇಷಚೇತನರಿಗೆ ಶಿಕ್ಷಣವು ವೈಯಕ್ತಿಕ ಮತ್ತು ವೃತ್ತಿಪರ ಬೆಳವಣಿಗೆಯ ಅಡಿಪಾಯವಾಗಿದೆ. ಹಾಗಾಗಿ ಜಿಲ್ಲೆಯಲ್ಲಿನ ಶಾಲೆಗಳಲ್ಲಿ ದೃಷ್ಟಿಹೀನ ಮತು ಕಿವುಡ ವಿದ್ಯಾರ್ಥಿಗಳಿಗೆ ಬ್ರೈಲ್ ಸ್ಪರ್ಶ ಬರವಣಿಗೆ ವ್ಯವಸ್ಥೆ ಮಾಡಬೇಕು. ಇದರಿಂದ ಸ್ಪರ್ಶದ ಮೂಲಕ ಓದಲು ಮತ್ತು ಬರೆಯಲು ಅನುವು ಮಾಡಿಕೊಡುತ್ತದೆ ಮತ್ತು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುತ್ತಾರೆ ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಾಜ್ಯ ಸರ್ಕಾರ ಅಧೀನದಲ್ಲಿರುವ ಸುಮಾರು 900 ವಸತಿ ಶಾಲೆಗಳಲ್ಲಿ ಶೇ.25 ಪ್ರತಿಶತ ಅಂಗವಿಕಲತೆ ಹೊಂದಿದ ಮಕ್ಕಳಿಗೆ ಶೇ.10 ರಷ್ಟು ಸೀಟ್ ಮೀಸಲಾತಿ ಇರಿಸಿ ಉಚಿತ ಶಿಕ್ಷಣ ನೀಡಲು ಅವಕಾಶವಿದೆ ಎಂದು ತಿಳಿಸಿದರು.

ಬ್ರೈಲ್ ಲಿಪಿ ಕಲಿತ ಅಂಧರು ಸುಮಾರು 12 ಜನ ಐಎಎಸ್ ಅಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಶಿಕ್ಷಣ ಪಡೆಯುವ ಮೀಸಲಾತಿ ಜೊತೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ನೇಮಕಾತಿಯಲ್ಲಿ ಅಂಗವಿಕಲರಿಗಾಗಿಯೇ ಇರುವ ಶೇ.4 ರಿಂದ 5 ರಷ್ಟು ಮೀಸಲಾತಿ ಇದೆ ಎಂದು ತಿಳಿಸಿದರು.

ಪ್ರವಾಸಿ ತಾಣ, ಶಾಲಾ–ಕಾಲೇಜು, ಉದ್ಯಾನವನ, ಪೊಲೀಸ್ ಠಾಣೆ, ಸಾರ್ವಜನಿಕ ಸ್ಥಳ ಸೇರಿದಂತೆ ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ವಿಕಲಚೇತನರ ಸ್ನೇಹಿ ವಾತಾವರಣ ಇರಬೇಕು ಎಂದು ಸರ್ವೋಚ್ಚನ್ಯಾಯಾಲಯದ ಆದೇಶವಿದೆ. ಆಯಾ ಸ್ಥಳಗಳಲ್ಲಿ ಅಂಗವಿಕಲರ ಓಡಾಟಕ್ಕೆ ಸುಲಭ ದಾರಿ, ವ್ಹೀಲ್‌ಚೇರ್ ವ್ಯವಸ್ಥೆ, ಶೌಚಾಲಯ ಸೇರಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಹೇಳಿದರು.

ಕಳೆದ ಪ್ಯಾರಾಲಂಪಿಕ್ಸ್‌ಲ್ಲಿ ದೇಶಕ್ಕೆ ಸಾಕಷ್ಟು ಪದಕ ಲಭಿಸಿವೆ. ಕ್ರೀಡಾ ವಲಯದಲ್ಲಿ ಪ್ರೋತ್ಸಾಹಿಸಲು ಕ್ರೀಡೆಗಳಲ್ಲಿ ಆಸಕ್ತಿ ಹೊಂದಿದವರಿಗಾಗಿ ಜಿಲ್ಲಾ ಮಟ್ಟದಲ್ಲಿ ಕ್ರೀಡೆ ಆಯೋಜಿಸಬೇಕು ಎಂದು ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ವಿಶೇಷಚೇತನರ ಮುನ್ನಲೆಗೆ ನಗರಸಭೆ, ಸ್ಥಳೀಯ– ಸಂಸ್ಥೆಗಳ ಶೇ.05 ರ ಅನುದಾನದಲ್ಲಿ ಜಿಲ್ಲಾ ಕೇಂದ್ರದಲ್ಲಿ ಟೈಲರಿಂಗ್ ಹಾಗೂ ವಿವಿಧ ರೀತಿಯ ಉದ್ಯೋಗ ತರಬೇತಿ ನೀಡಬೇಕು. ಇದರಿಂದ ಸ್ವಾವಲಂಬಿ ಉದ್ಯೋಗ ನಡೆಸಲು ಸಹಕಾರಿಯಾಗಲಿದೆ ಎಂದು ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ರಾಷ್ಟ್ರೀಯ ಅಂಗವಿಕಲರ ಅಭಿವೃದ್ಧಿ ಹಣಕಾಸು ಸಂಸ್ಥೆಯ ಮೂಲಕ ಪ್ರತಿ ವರ್ಷ ರಾಜ್ಯಕ್ಕೆ ರೂ.100 ಕೋಟಿ ಅನುದಾನ ತರಬಹುದಾಗಿದ್ದು, ಅಂಗವಿಕಲರಿಗೆ 50 ಲಕ್ಷದವರೆಗೆ ಸಾಲ ಸೌಲಭ್ಯ ಹಾಗೂ ಇತರೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬಹುದಾಗಿದೆ ಎಂದರು.

ವಿಕಲಚೇತನ ವ್ಯಕ್ತಿಗಳಿಗೆ ಅಗತ್ಯವಿರುವ ಆರೋಗ್ಯ, ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ ಹಾಗೂ ಸಾಮಾಜಿಕ ಭದ್ರತೆಗಳಂತಹ ಪುನರ್ವಸತಿ ಸೇವೆಗಳನ್ನು ಕಲ್ಪಿಸಲು, ವಿಕಲಚೇತನ ವ್ಯಕ್ತಿಗಳನ್ನು ಸಬಲೀಕರಣಗೊಳಿಸುವುದರ ಮೂಲಕ ಅವರ ಹಕ್ಕುಗಳನ್ನು ಸಂರಕ್ಷಿಸಲು ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016 ರಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದರು.

ರಾಜ್ಯದಲ್ಲಿ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಅನುಷ್ಠಾನಕ್ಕಾಗಿ ರಾಜ್ಯ ಆಯುಕ್ತರ ಕಚೇರಿ ಸ್ಥಾಪಿಸಿದ್ದು, ಆಯುಕ್ತರನ್ನು ನೇಮಕ ಮಾಡಿದೆ. ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ–2016 ಅನುಷ್ಠಾನಗೊಳಿಸುವಲ್ಲಿ ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಪ್ರಾಮಾಣಿಕತೆಯಿಂದ ಸೇವೆ ನೀಡಬೇಕಿದೆ ಎಂದು ಹೇಳಿದರು.

ಆರ್‌ಬಿಎಸ್‌ಕೆ ಆರೋಗ್ಯ ಕಾರ್ಯಕ್ರಮದಡಿ ಮೂರು ವೈದ್ಯರನ್ನೊಳಗೊಂಡ ತಂಡವು ಪ್ರತಿ ಶಾಲೆಗೆ ಭೇಟಿ 0–18 ವರ್ಷದೊಳಗಿನ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆ ಕೈಗೊಂಡು ಅವರಲ್ಲಿನ ಅಂಗವಿಕಲತೆಯನ್ನು ಗುರುತಿಸಲಾಗುತ್ತಿದೆ. ಕಕ ಭಾಗದ ಸುಮಾರು 35 ಬುದ್ಧಿಮಾಂದ್ಯ ಮಕ್ಕಳ ಶಾಲೆಗಳ ಅಭಿವೃದ್ಧಿಗಾಗಿ ಈ ಭಾಗದ ಕೆಕೆಆರ್‌ಡಿಬಿ ವತಿಯಿಂದ ವಿಶೇಷ ಅನುದಾನಕ್ಕಾಗಿ ಪ್ರಸ್ತಾಪಿಸಿ ಮನವಿ ಮಾಡಲಾಗುವುದು ಎಂದು ಹೇಳಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ವಿಶೇಷಚೇತನರಿಗೆ ಮಾಸಾಶನ ಸೌಲಭ್ಯ ಪಡೆಯಲು ಮತ್ತು ಪಿಂಚಣಿ ಪಡೆಯಲು ವಿಳಂಬವಾದಲ್ಲಿ ಆಯಾ ಗ್ರಾಪಂ ಮಟ್ಟದ ನಾಡಕಚೇರಿಗೆ ಸಂಪರ್ಕಿಬೇಕು. ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಮಾಹಿತಿ ಪಡೆದು ಕೂಡಲೇ ಪರಿಹಾರಕ್ಕಾಗಿ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಇದೇ ಸಂದರ್ಭಲ್ಲಿ ಆಯುಕ್ತರಾದ ದಾಸ್ ಸೂರ್ಯವಂಶಿ ಅವರು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಿಂಗಳಲ್ಲಿ ಒಂದು ಬಾರಿಯಾದರೂ ವಿಶೇಷಚೇತನರ ಕುಂದು–ಕೊರತೆ ಸಭೆ ಮಾಡಬೇಕು ಎಂದು ಸಭೆಗೆ ತಿಳಿಸಿದರು.

ವಿಶೇಷಚೇತನರಿಗಾಗಿ ಭೂಮಿ ಖರೀದಿ, ಗಂಗಾ–ಕಲ್ಯಾಣ ಯೋಜನೆ ಸೇರಿದಂತೆ ವಿವಿಧ ಇಲಾಖೆಗಳ ನಿಗಮದ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ಕಾರ್ಯಕರ್ತರು, ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಫೆ.15 ರಂದು ವಿದ್ಯುತ್ ಗ್ರಾಹಕರ ಕುಂದು–ಕೊರತೆ ಮತ್ತು ಜಾಗೃತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.13–ಬಳ್ಳಾರಿ ನಗರ ಜೆಸ್ಕಾಂ ಉಪ–ವಿಭಾಗ 1 ಮತ್ತು 2ರ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು–ಕೊರತೆ ಸಭೆ ಮತ್ತು ಜಾಗೃತಿ ಸಭೆಯನ್ನು ಫೆ.15 ರಂದು ಬೆಳಿಗ್ಗೆ 11 ಗಂಟೆಗೆ ನಗರ ಉಪ–ವಿಭಾಗ ಕಚೇರಿಯಲ್ಲಿ ಏರ್ಪಡಿಸಲಾಗಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಭೆಗೆ ಹಾಜರಾಗಬೇಕು ಎಂದು ಬಳ್ಳಾರಿ ನಗರ ಉಪ–ವಿಭಾಗ–1 ಮತ್ತು ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಕೆಆರ್‌ಟಿಸಿ ಬಳ್ಳಾರಿ ವಿಭಾಗ: ಶಿಶಿಕ್ಷು ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.13–ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗ ವತಿಯಿಂದ ಸಿರುಗುಪ್ಪ ಮತ್ತು ಸಂಡೂರು ಘಟಕಗಳಲ್ಲಿ ವಿವಿಧ ತಾಂತ್ರಿಕ ವೃತ್ತಿಗಳಿಗೆ ಶಿಶಿಕ್ಷು ತರಬೇತಿ ನೀಡಲು ಅರ್ಹ ಐಟಿಐ ಪೂರ್ಣಗೊಳಿಸಿದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು www.apprenticeship.gov.in / www.ncvtmis.com ವೆಬ್‌ಸೈಟ್‌ಗೆ ಭೇಟಿ ನೀಡಿ ಹೆಸರು ನೋಂದಾಯಿಸಿಕೊಂಡು ತಮ್ಮ ವೃತ್ತಿಗನುಗುಣವಾಗಿ ಎಲ್ಲಾ ವಿವರಗಳೊಂದಿಗೆ ನಗರದ ಸಿರುಗುಪ್ಪ ರಸ್ತೆಯ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ಕಚೇರಿಗೆ ಮಾ.05 ರಂದು ಬೆಳಿಗ್ಗೆ 11 ಗಂಟೆಗೆ ನಡೆಯುವ ನೇರ ಸಂದರ್ಶನಕ್ಕೆ ಹಾಜರಾಗಬಹುದು.

*ಶಿಶಿಕ್ಷು ವೃತ್ತಿ ಸಂಖ್ಯೆ*

ಆಟೋ ಎಲೆಕ್ಟ್ರಿಷಿಯನ್–02, ಡಿಸೇಲ್ ಮೆಕಾನಿಕ್–16, ಮೋಟರ್ ಮೆಕ್ಯಾನಿಕ್ ವೆಹಿಕಲ್–02.

*ಬೇಕಾದ ದಾಖಲೆಗಳು:*

ಆಧಾರ್ ಕಾರ್ಡ್, ಇ–ಮೇಲ್ ಐಡಿ, ಮೊಬೈಲ್ ಸಂಖ್ಯೆ, ಐಟಿಐ ಮೂಲ ಅಂಕಪಟ್ಟಿ, ಎಸ್‌ಎಸ್‌ಎಲ್‌ಸಿ ಮೂಲ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಬುಕ್ ನಕಲು, ಇತ್ತೀಚಿನ ಮೂರು ಭಾವಚಿತ್ರ, ಆನ್‌ಲೈನ್ ನೋಂದಣಿ ವಿವರದ ಪ್ರತಿ ಒದಗಿಸಬೇಕು.

*ಸೂಚನೆ:*

ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳದ ಅಭ್ಯರ್ಥಿಗಳು ಸಂದರ್ಶನ ಹಾಜರಾಗಲು ಅರ್ಹರಾಗಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಗರದ ಸಿರುಗುಪ್ಪ ರಸ್ತೆಯ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ಕಚೇರಿಗೆ ಭೇಟಿ ನೀಡಬಹುದು ಎಂದು ಬಳ್ಳಾರಿ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

# ಬೃಹತ್ ರಕ್ತದಾನ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.13 –ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕ ವತಿಯಿಂದ ಫೆ.20 ರಿಂದ 22 ರ ವರೆಗೆ ಸಂಡೂರು ತಾಲ್ಲೂಕಿನ ತೋರಣಗಲ್ಲು ಬಳಿಯ ಜೆಎಸ್‌ಡಬ್ಲ್ಯೂ ಜಿಂದಾಲ್‌ನ 10 ಸ್ಥಳಗಳಲ್ಲಿ ಬೃಹತ್ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*ರಕ್ತದಾನ ಶಿಬಿರ ನಡೆಯುವ ಸ್ಥಳ:*

ಜಿಂದಾಲ್‌ನ ಓಪಿಜೆ ಸೆಂಟರ್‌ನ ತಮನ್ನಾ ಶಾಲೆ, ವಿದ್ಯಾನಗರದ ಆರೋಗ್ಯ ಕೇಂದ್ರ ಮತ್ತು ಲಿಟಲ್ ಎಲ್ಲೆ, ಹೆಚ್‌ಎಸ್‌ಟಿ ಕಾಂಪ್ಲೆಕ್ಸ್, ಸಿಆರ್‌ಎಂ–1ಪ್ಲಾಂಟ್, ಲಾಜಿಸ್ಟಿಕ್ ಪ್ಲಾಂಟ್, ಎಸ್‌ಎಂಎಸ್–4 ಪ್ಲಾಂಟ್, ಹೆಚ್‌ಆರ್‌ಡಿ ಪ್ಲಾಂಟ್, ಜೆಎಸ್‌ಎಂಎಸ್ ಹೆಚ್‌ನಸ್ಟೆಪ್‌ಡೌನ್ ಐಸಿಯು ಮತ್ತು ಜೆಎಸ್‌ಡಬ್ಲ್ಯೂ ಎನರ್ಜಿ ಸಭಾಂಗಣ.

# ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿ ಪ್ರಾರಂಭ



ಮಲ್ಲಮ್ಮ ನುಡಿ ವಾರ್ತೆ

ಇಂಡಿ: ಫೆ13 ಕೇಂದ್ರಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಇಂಡಿ ತಾಲ್ಲೂಕಿನ ಲಿಂಗದಹಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಹಯೋಗದಲ್ಲಿ ವತಿಯಿಂದ 2024–25 ನೇ ಸಾಲಿನಲ್ಲಿ ತೆ–ೂಗರಿ ಖರೀದಿ ಕೇಂದ್ರವನ್ನು ಪ್ರಾರಂಭಿಸಲಾಯಿತು.

ಈಸಂದರ್ಭದಲ್ಲಿಮಾತನಾಡಿದ ಲಿಂಗದಹಳ್ಳಿಕೃಷಿಪತ್ತಿನಸಹಕಾರ ಸಂಘದ ಕಾರ್ಯನಿರ್ವಾಹಕ ಅಧಿಕಾರಿ ಎನ್ ಎಂ ವಾಲಿಕಾರ ಮಾತನಾಡಿ2024–25ನೇಸಾಲಿನಲ್ಲಿ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂಗುಣಮಟ್ಟದ ತೊಗರಿ ಖರೀದಿಗೆ ಸಂಭಂಧಿಸಿದಂತೆ, ಕೇಂದ್ರ ಸರ್ಕಾರದ ಬೆಂಬಲ ಬೆಲೆ 7,550 ರೂ. ಜೊತೆಗೆ ರಾಜ್ಯಸರ್ಕಾರದ ಪ್ರೋತಾಹಧನ 450 ರೂ. ಪ್ರತಿ ಕ್ವಿಂಟಾಲಗೆ, ಸೇರಿ ಒಟ್ಟು 8,000 ರೂ. ಪ್ರತಿ ಕ್ವಿಂಟಾಲ ರಂತೆ ತೊಗರಿ ಖರೀದಿಸಲಾಗುವುದು ಹಾಗೂ ಪ್ರತಿ ರೈತರಿಂದ ಪ್ರತಿ ಎಕ–ರೆಗೆ ನಾಲ್ಕು ಕ್ವಿಂಟಾಲ್ ನಂತೆ, ಗರಿಷ್ಠ ಎರಡೂ ಹೇಕ್ಟರವರಿಗೆ ಖರೀದಿಸಲಾಗುತ್ತದೆ ಎಂದು ಹೇಳಿದರು.

ಈಸಂದರ್ಭದಲ್ಲಿಕನ್ನಾಳಮಠದ ಭೀಮಾಶಂಕರ ಸ್ವಾಮಿಗಳು,ವೇ!! ಪ್ರಭುಸ್ವಾಮಿಗಳು,ಪಿಕೆಪಿಎಸ್ ಅಧ್ಯಕ್ಷರಾದ ಶಶಿಧರ ಟೆಂಗಳಿ, ತಡವಲಗಾ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ತಮ್ಮಣ್ಣ ಪೂಜಾರಿ, ಭಾರತೀಯ ಕಿಸಾನ್ ಸಂಘದ ಇಂಡಿ ತಾಲೂಕು ಅಧ್ಯಕ್ಷರಾದ ಈರಣ್ಣ ಗೋಟ್ಯಾಳ, ಶ್ರೀಮಂತ ಹಿರೇಕುರಬರ, ಕಾಸು ಜಾಧವ್, ಬಾಬು ಡೊಂಬರ,ಸೋಮನಿಂಗತೋರವಿ, ಹಣಮಂತ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಉತ್ತಮ ಫಲಿತಾಂಶಕ್ಕಾಗಿ ಪ್ರಯತ್ನ ಮಾಡಿ

ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಫೆ.13:ನಿಮ್ಮದೆಯಾದ ಯೋಜನೆಹಾಗೂವೇಳಾಪಟ್ಟಿಯನ್ನು ತಯಾರಿಸಿಕೊಂಡು ಉತ್ತಮ ಫಲಿತಾಂಶಕ್ಕಾಗಿ ಪ್ರಯತ್ನ ಮಾಡಬೇಕು ಎಂದು ಡಯಟ್ ಪ್ರಾಂಶುಪಾಲ ವೃಷಬೇಂದ್ರಯ್ಯ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾವರ್ಧಕ ಪ್ರೌಢ ಶಾಲೆಗೆ ಹಠಾತ ಭೇಟಿ ನೀಡಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪೂರ್ವ ಸಿದ್ಧತೆ ಪರೀಕ್ಷೆ ಕುರಿತು ಮಾತನಾಡಿದರು. ಉತ್ತಮ ಸಾಧನೆಗೆ ಪರಿಶ್ರಮ ಅತಿ ಮುಖ್ಯವಾಗಿದೆ. ಪರೀಕ್ಷೆಗಳು ಪ್ರಾರಂಭವಾಗುತ್ತಿದ್ದೂ ಯಾವುದೆ ಆತಂಕ ಇಲ್ಲದೆ ಬರೆಯಲು ವೇಳಾ ಪಟ್ಟಿಯನ್ನು ತಯಾರಿಸಿಕೊಂಡು ಶಿಕ್ಷಕರ ಮಾರ್ಗದರ್ಶನದೊಂದಿಗೆ ವಿದ್ಯಾರ್ಥಿಗಳು ಕಾರ್ಯ ನಿರ್ವಹಿಸಿದರೆ ಉತ್ತಮ ಸಾಧನೆ ನಿಮ್ಮದಾಗುತ್ತದೆ ಎಂದು ಹೇಳಿದರು. ಶಿಕ್ಷಕರು ಪರೀಕ್ಷೆ ಭಯ ದೂರ ಮಾಡಲು ಅವರಿಗೆ ಸತತ ಅಧ್ಯಯನದಲ್ಲಿ ತೊಡಗಿಸಿ ವಿಷಯವನ್ನು ಸರಳೀಕರಣಗೊಳಿಸಿ ಆಸಕ್ತಿದಾಯವಾಗಿ ಪರಿವರ್ತನೆ ಮಾಡಬೇಕು. ಅಂದಾಗ ವಿದ್ಯಾರ್ಥಿಗಳು ಕಲಿಕೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಗುಣಮಟ್ಟದ ಶಿಕ್ಷಣ ಪಡೆಯಲು ಸಾಧ್ಯವಾಗುತ್ತದೆ. ಅತಿ ಹೆಚ್ಚಿನ ವಿದ್ಯಾರ್ಥಿಗಳ ಸಂಖ್ಯೆ ಹೊಂದಿದ ಈ ಶಾಲೆಯಲ್ಲಿ ನಿಮ್ಮ ಪ್ರಯತ್ನ ಅತಿ ಮಹತ್ವದ್ದಾಗಿದೆ. ಪ್ರತಿ ವರ್ಷ ಇಲ್ಲಿ ಉತ್ತಮ ಫಲಿತಾಂಶ ಬಂದಿದ್ದೂ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆ ನಿಮ್ಮದಾಗಲಿ ಎಂದು ಕಿವಿ ಮಾತುಗಳನ್ನು ಹೇಳಿದರು.

ಈಸಂದರ್ಭದಲ್ಲಿ ಮುಖ್ಯಗುರು ಲಿಂಗಾರೆಡ್ಡಿನಾಯಕ,ಪ್ರಾಂಶುಪಾಲ ಜಿ.ಎಂ.ಗುರುಪ್ರಸಾದ ಸೇರಿದಂತೆ ಇತರರಿದ್ದರು.

ಡಯಟ್ ಪ್ರಾಂಶುಪಾಲರು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳನ್ನು ಭೇಟಿ ಮಾಡಿ ಶಿಕ್ಷಕರ ಕಾರ್ಯ ವಿಧಾನದ ಬಗಗೆ ಮಾಹಿತಿ ಪಡೆದರು. ಶನಿವಾರ ಪೂರ್ಣ ದಿನವನ್ನಾಗಿ ಹಾಗೂ ಭಾನುವಾರ ವಿಶೇಷ ವರ್ಗಗಳು ಅಲ್ಲದೆ ಉತ್ತೀರ್ಣರಾಗುವುದಕ್ಕೆ ಬೇಕಾದ ಮಹತ್ವ ವಿಷಯಗಳನ್ನು ಆಯಾ ವಿಷಯ ಶಿಕ್ಷಕರು ಹೆಚ್ಚಿನ ಗಮನ ವಹಿಸಿತ್ತಿರುವುದು ಅಲ್ಲದೆ ವಿಶೇಷ ಗುಂಪುಗಳನ್ನು ಮಾಡಿ ಚರ್ಚೆಯ ಮೂಲಕ ಕಲಿಸುತ್ತಿದ್ದಾರೆ ಎಂದು ವಿದ್ಯಾರ್ಥಿಗಳು ಮಾಹಿತಿ ನೀಡಿದರು.

# ಮಕ್ಕಳನ್ನು ಸತ್ಪ್ರಜೆಗಳನ್ನಾಗಿ ರೂಪಿಸುವ ಹೊಣೆ ಶಿಕ್ಷಕರದ್ದು–ಗೀತಾ ದಾನಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.13–ಮಕ್ಕಳ ಭಾವನೆಗಳನ್ನು ಅರಳಿಸಿ ಅವರನ್ನ ಸತ್ಪ್ರಜೆಗಳನ್ನಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಕಾರ್ಯದರ್ಶಿ ಡಾ.ಗೀತಾ ದಾನಶೆಟ್ಟಿ ಹೇಳಿದ್ದಾರೆ.

ನವನಗರದ 62 ನೇ ಸೆಕ್ಟರ್ ನಲ್ಲಿರುವ ಪೋದಾರ್ ಜಂಬೋ ಕಿಡ್ಸ್ ಶಾಲೆಯ 16 ನೇ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಂದು ಮಗುವಿನಲ್ಲಿ ವಿಭಿನ್ನ ಭಾವನೆಗಳು ತುಂಬಿರುತ್ತವೆ. ಅವುಗಳನ್ನು ಗುರುತಿಸಿ ಪ್ರೋತ್ಸಾಹಿಸಿ ವೇದಿಕೆ ಕಲ್ಪಿಸುವ ಮೂಲಕ ಅವರಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಬೇಕು ಎಂದರು.

ಶಾಲೆಯ ಮುಖ್ಯಸ್ಥೆ ರಶ್ಮಿ ಪಾಟೀಲ ಶಾಲೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಿದ್ದು ಮಕ್ಕಳ ಮನೋಭಾವನೆಗೆ ತಕ್ಕಂತೆ ವೈಜ್ಞಾನಿಕವಾಗಿ ಪೂರಕವಾಗಿರುವಂತೆ ಆಕರ್ಷಣೆಯವಾಗಿ ನಿರ್ಮಾಣ ಮಾಡುವುದರ ಜೊತೆಗೆ ಆಡಳಿತಾತ್ಮಕವಾಗಿ ಕಠಿಣ ನಿಲುವುಗಳಿಂದ ಸದೃಢವಾಗಿ ಕೆಲಸ ಮಾಡುತ್ತಿದ್ದಾರೆ. ಅವರ ಕಾರ್ಯ ಅತ್ಯಂತ ಶ್ಲಾಘನೀಯ ಎಂದು ದಾನಶೆಟ್ಟಿ ಹೇಳಿದರು.

ಬಾಗಲಕೋಟೆ ನಗರಸಭೆ ಉಪಾಧ್ಯಕ್ಷೆ ಶೋಭಾ ರಾವ್ ಮಾತನಾಡಿ, ಪ್ರತಿ ಮಗು ಹುಟ್ಟುತ್ತಲೇ ವಿಶಿಷ್ಟ ಗುಣ ಮತ್ತು ಪ್ರತಿಭೆಯಿಂದ ರೂಪಗೊಂಡಿರುತ್ತದೆ. ಆ ವಿಶಿಷ್ಟ ಗುಣ ಮತ್ತು ಪ್ರತಿಭೆಯನ್ನು ಮಗುವಿನ ಪಾಲಕರು ಮತ್ತು ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸುವುದರೊಂದಿಗೆ ಅವರ ಸರ್ವತೋಮುಖ ಬೆಳವಣಿಗೆಗೆ ಸಹಕರಿಸಬೇಕು ಎಂದರು.

ಪೋದಾರ್ ಜಂಬೂ ಕಿಡ್ಸ್ ನ ಮುಖ್ಯಸ್ಥರಾದ ಶ್ರೀಮತಿ ರಶ್ಮಿ ಪಾಟೀಲ,ಕಳೆದ 16 ವರ್ಷಗಳಿಂದ ಶಾಲೆ ನಡೆದು ಬಂದ ದಾರಿ ಮತ್ತು ಸಾಧಿಸಿದ ಪ್ರಗತಿಯ ಕುರಿತು ಸಭೆಗೆ ತಿಳಿಸಿದರು. ಕಾರ್ಯಕ್ರಮವನ್ನು ವಿಜಯಲಕ್ಷ್ಮಿ ವಿ. ನಿರೂಪಿಸಿದರು. ವಾರ್ಷಿಕ ವರದಿಯನ್ನು ರುಕ್ಮಿಣಿ ಕುಂದರಗಿ ಪ್ರಸ್ತುತಪಡಿಸಿದರು. ನಂತರ ನಡೆದ ಮಕ್ಕಳ ಆಕರ್ಷಕ ನೃತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರನ್ನು ಆಕರ್ಷಿಸಿದವು.

# ರಾಯಚೂರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಗುಣಮಟ್ಟದ ಸಾರಿಗೆ ಸೌಕರ್ಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು 1973ರ ಜನವರಿ 9ರಂದು ಅಸ್ತಿತ್ವಕ್ಕೆ ಬಂದಿದ್ದು, ಪ್ರಯಾಣಿಕರಿಗೆ ಕಡಿಮೆ ವೆಚ್ಚದಲ್ಲಿ ಸಮರ್ಪಕ, ವಿಶ್ವಾಸಾರ್ಹ ಮತ್ತು ಉತ್ತಮ ಗುಣಮಟ್ಟದ ಸಾರಿಗೆ ಸೌಲಭ್ಯಗಳನ್ನು ನೀಡುವ ಉದ್ದೇಶದೊಂದಿಗೆ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ.

ರಾಯಚೂರ ವಿಭಾಗದಲ್ಲಿ ವಿಭಾಗೀಯ ಕಾರ್ಯಗಾರ ಮತ್ತು ವಿಭಾಗೀಯ ಕಚೇರಿ ಇದೆ. ಜೊತೆಗೆ ರಾಯಚೂರು–1,ರಾಯಚೂರು–2, ರಾಯಚೂರು–3, ಮಾನವಿ, ಲಿಂಗಸಗೂರು, ಸಿಂಧನೂರು ಹಾಗೂ ದೇವದುರ್ಗ ಮತ್ತು ಮಸ್ಕಿ ಸೇರಿ ರಾಯಚೂರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಒಟು 8 ಘಟಕಗಳಿದ್ದು, ಇಲ್ಲಿ 2563 ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. 635 ಅನುಸೂಚಿಗಳು ಮತ್ತು 690 ವಾಹನಗಳಿವೆ. ಪ್ರತಿ ದಿನ 2.33 ಲಕ್ಷ ಕಿ.ಮೀ. ಕಾರ್ಯಾಚರಣೆಯಿದೆ. ಪ್ರತಿ ದಿನದ ಸಾರಿಗೆ ಆದಾಯವು 94.74 ಲಕ್ಷ ರೂ. ಇದೆ. ಪ್ರತಿ ದಿನ ಒಟ್ಟು 2.08 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಾರೆ.

ವಿವಿಧ ಯೋಜನೆಗಳು: ವಿದ್ಯಾರ್ಥಿ ಉಚಿತ ಬಸ್ ಪಾಸ್, ವಿಕಲಚೇತನದ ರಿಯಾಯಿತಿ ಬಸ್ ಪಾಸ್, ಸ್ವಾತಂತ್ರ ಹೋರಾಟಗಾರರ ಉಚಿತ ಬಸ್ ಪಾಸ್, ಅಪಘಾತ ಪರಿಹಾರ ನಿಧಿ, ಅಂಧರ ಉಚಿತ ಬಸ್ ಪಾಸ್, ಸ್ವಾತಂತ್ರ್ಯ ಹೋರಾಟಗಾರರ ಪತ್ನಿಯವರಿಗೆ 2000 ರೂ. ಮೌಲ್ಯದ ಉಚಿತ ಪ್ರಯಾಣದ ಕೂಪನ್ ಮತ್ತು ಹಿರಿಯ ನಾಗರಿಕರಿಗೆ ಪ್ರಯಾಣ ದರದಲ್ಲಿ ಶೇ.25 ರಷ್ಟು ರಿಯಾಯತಿ ಸೌಕರ್ಯದ ಯೋಜನೆಗಳಿವೆ.

ಪ್ರಯಾಣಿಕರ ಸುರಕ್ಷತೆಗಾಗಿ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಮತ್ತು ಬಸ್ ಘಟಕಗಳಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ. ಪಬ್ಲಿಕ್ ಅನೌನ್ಸಮೆಂಟ್ ಮೂಲಕ ಬಸ್ ನಿಲ್ದಾಣಗಳಲ್ಲಿರುವ ಪ್ರಯಾಣಿಕರಿಗೆ ವಾಹನಗಳ ಮಾರ್ಗದ ಮಾಹಿತಿ ವ್ಯವಸ್ಥೆ ಕಲ್ಪಿಸಲಾಗಿದೆ. ವಿಭಾಗ ಮಟ್ಟದಲ್ಲಿ ಅನುಚ್ಛೇದ 371ಜೆ ಅಡಿಯಲ್ಲಿ ವಿವಿಧ ದರ್ಜೆಯ ಸಿಬ್ಬಂದಿಗೆ ಪದೋನ್ನತಿ ನೀಡಲಾಗಿದೆ.

ವಿದ್ಯಾರ್ಥಿಗಳ ಪಾಸ್ ವಿವರ: 2024–25ನೇ ಸಾಲಿನ ವಿದ್ಯಾರ್ಥಿ ಉಚಿತ ರಿಯಾಯಿತಿ ಬಸ್ ಪಾಸುಗಳನ್ನು ಇಡಿಸಿಎಸ್ ಇಲಾಖೆಯ ಸೇವಾಸಿಂಧು ತಂತ್ರಾಂಶದ ಮುಖಾಂತರ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ರಾಯಚೂರ ವಿಭಾಗದಿಂದ ಒಟ್ಟು 28,463 ಪಾಸಗಳನ್ನು ವಿತರಿಸಲಾಗಿದೆ.

ಹೊಸ ವಾಹನಗಳ ಸೇರ್ಪಡೆ: ರಾಯಚೂರ ವಿಭಾಗಕ್ಕೆ 2024–2025ನೇ ಸಾಲಿನಲ್ಲಿ ಅಗಸ್ಟ್–2024ರವರೆಗೆ ಒಟ್ಟು 32 ಹೊಸ ಬಿಎಸ್–04 ಲೈಲ್ಯಾಂಡ್ ವಾಹನಗಳು, 2023–2024ನೇ ಸಾಲಿನಲ್ಲಿ ಒಟ್ಟು 119 ಹೊಸ ಬಿಎಸ್–04 ಲೈಲ್ಯಾಂಡ್ ವಾಹನಗಳು ಸೇರ್ಪಡೆಯಾಗಿವೆ. ಅವುಗಳ ಪೈಕಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಯೋಜನೆಯಡಿ 15 ವಾಹನಗಳು ಸೇರ್ಪಡೆಯಾಗಿವೆ. ಜೊತೆಗೆ ಸಿಂಧನೂರದಿಂದ ಬೆಂಗಳೂರುಗೆ 02 ವೋಲ್ವೊ ಮಲ್ಟಿ ಆಕ್ಸೆಲ್ ಎ.ಸಿ ಸ್ಲೀಪರ್ ಕಲ್ಯಾಣ ರಥ ಬಸ್‌ಗಳನ್ನು ಪ್ರಾರಂಭಿಸಲಾಗಿದೆ ಹಾಗೂ ಲಿಂಗಸೂಗುರು ದಿಂದ ಮೈಸೂರಗೆ ಎರಡು ನಾನ್ ಎ.ಸಿ ಸ್ಲೀಪರ್ ಅಮೋಘ ವರ್ಷ ಬಸ್‌ಗಳನ್ನು ಪ್ರಾರಂಭಿಸಲಾಗಿದೆ. 2023–24 ಮತ್ತು 2024–25ನೇ ಸಾಲಿನ ಅಗಸ್ಟ್–2024ರವರೆಗೆ ರಾಯಚೂರು ವಿಭಾಗ–ಕ್ಕೆ ಒಟ್ಟು 157 ವಾಹನಗಳು ಸೇರ್ಪಡೆಯಾಗಿವೆ.

ಕಾಮಗಾರಿಗಳ ವಿವರ: ಸಿರವಾರ ಪಟ್ಟಣದಲ್ಲಿ ನೂತನ ಬಸ್ ನಿಲ್ದಾಣವನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಯೋಜನೆಯಡಿಯಲ್ಲಿ 3 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿದ್ದು, ಈ ಕಾಮಗಾರಿಯು ಪ್ರಗತಿಯಲ್ಲಿದೆ. ರಾಯಚೂರು ಕೇಂದ್ರ ಬಸ್ ನಿಲ್ದಾಣದ ಮುಂಭಾಗದಲ್ಲಿ ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಕೇಂದ್ರ ಭೂ ಸಾರಿಗೆ ಯೋಜನೆಯಡಿ ನೂತನವಾಗಿ ನಗರ ಸಾರಿಗೆ ಬಸ್ ನಿಲ್ದಾಣವನ್ನು ಪ್ರಯಾಣಿಕರ ಮೂಲಭೂತ ಸೌಕರ್ಯ ಕೇಂದ್ರದೊಂದಿಗೆ 18 ಕೋಟಿ ರೂ.ವೆಚ್ಚದಲ್ಲಿ ನಿರ್ಮಿಸಲಾಗುತ್ತಿದ್ದು, ಈ ಕಾಮಗಾರಿಯು ಪ್ರಗತಿಯಲ್ಲಿದೆ. ಮಾನವಿ ವಿಧಾನಸಭಾ ಕ್ಷೇತ್ರದ ಮಾನವಿ ಪಟ್ಟಣದಲ್ಲಿ ನೂತನ ವೇಗದೂತ (ಎಕ್ಸ್‌ಪ್ರೆಸ್) ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಯೋಜನೆಯಡಿ 5 ಕೋಟಿ ರೂ. ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ 04.50 ಕೋಟಿ ರೂ.ಸೇರಿ ಒಟ್ಟು 09.50 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದ್ದು, ಈ ಕಾಮಗಾರಿಯು ಪ್ರಗತಿಯಲ್ಲಿದೆ.

ಶಕ್ತಿ ಯೋಜನೆ: ರಾಯಚೂರು ಜಿಲ್ಲೆಯಲ್ಲಿ 2023ರ ಜೂನ್ 11ರಂದು ರಾಯಚೂರು ಕೇಂದ್ರ ಬಸ್ ನಿಲ್ದಾಣದಲ್ಲಿ ಶಕ್ತಿ ಯೋಜನೆಗೆ ಚಾಲನೆ ನೀಡಲಾಯಿತು. ವಿದ್ಯಾರ್ಥಿನಿಯರು ಸೇರಿದಂತೆ ಕರ್ನಾಟಕ ರಾಜ್ಯದ ಮಹಿಳೆಯರಿಗೆ ಈ ಉಚಿತ ಪ್ರಯಾಣ ಸೌಲಭ್ಯ ಅನ್ವಯಿಸುತ್ತದೆ. ಈ ಮಹಿಳಾ ಪ್ರಯಾಣಿಕರ ಪೈಕಿ 06 ವರ್ಷದಿಂದ 12 ವರ್ಷದವರೆಗಿನ ಬಾಲಕಿಯರ ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸಹ ಈ ಯೋಜನೆಯ ವ್ಯಾಪ್ತಿಗೆ ಒಳಪಡುತ್ತಾರೆ. ಶಕ್ತಿ ಯೋಜನೆ ಜಾರಿಯಾದ 2023ರ ಜೂನ್ 11 ರಿಂದ 2025ರ ಜನವರಿ 14ರವರೆಗೆ ಒಟ್ಟು 679.01 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಸರಾಸರಿ ಪ್ರತಿ ನಿತ್ಯ 1.18 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. 2023ರ ಜೂನ್ 11 ರಿಂದ 2025ರ ಜನವರಿ 14ರವರೆಗೆ ಸಾರಿಗೆ ಇಲಾಖೆಗೆ 254.78 ಕೋಟಿ ರೂ.ನಷ್ಟು ಆದಾಯ ಬಂದಿದೆ. ಪ್ರತಿ ನಿತ್ಯ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ ಸರಾಸರಿ ಸಾರಿಗೆ ಆದಾಯವು 44.16 ಲಕ್ಷ ರೂ. ಆಗಿರುತ್ತದೆ. ಶಕ್ತಿ ಯೋಜನೆ ಜಾರಿಯಾದ ನಂತರ ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು 95 ಹೊಸದಾದ ಅನುಸೂಚಿಗಳನ್ನು ಪ್ರಾರಂಭಿಸಲಾಗಿದೆ. ಕಾರ್ಯಚರಣೆಯಲ್ಲಿದ್ದ ಅನುಸೂಚಿಗಳ ಪೈಕಿ 188 ಅನುಸೂಚಿಗಳಿಗೆ ಪರಿಷ್ಕರಣೆ ಮಾಡಿ ಒಟ್ಟು 346 ಟ್ರೀಪ್‌ಗಳನ್ನು ಹೆಚ್ಚಿಗೆ ಸೇರ್ಪಡೆಗೊಳಿಸಲಾಗಿದೆ.

**ಗವಿಸಿದ್ದಪ್ಪ ಹೊಸಮನಿ,**
**ವಾರ್ತಾ ಸಹಾಯಕರು,**
**ವಾರ್ತಾ ಇಲಾಖೆ,**
**ರಾಯಚೂರು**

# ಬಲಿಗಾಗಿ ಕಾಯುತ್ತಿರುವ ವಿದ್ಯುತ್ ಕಂಬ






ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ನಗರದ ಸರಕಾರಿ ಕನ್ಯಾ ಪ್ರೌಢ ಶಾಲೆಯ ಆವರಣದಲ್ಲಿ ಪ್ರಾಣ ಬಲಿಗಾಗಿ ವಿದ್ಯುತ ಕಂಬ ಕಾಯುತ್ತಿದೆ ಎಂದು ಶಾಲಾ ವಿದ್ಯಾರ್ಥಿನೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದ ಸರಕಾರಿ ಕನ್ಯಾ ಪ್ರೌಢ ಶಾಲೆಯ ಆವರಣದ ಮಧ್ಯಭಾಗದಲ್ಲಿ ಜೆಸ್ಕಾಂ ಇಲಾಖೆಯಿಂದ ವಿದ್ಯುತ್ ಕಂಬ ಅಳವಡಿಸಲಾಗಿದೆ..

ಹಿಗಾಗಿ ಸರಕಾರಿ ಕನ್ಯಾ ಶಾಲೆ ವಿದ್ಯಾರ್ಥಿನೀಯರು ಜೀವಭಯದಲ್ಲಿ ವಿದ್ಯೆ ಕಲಿಯುತ್ತಿದ್ದು , ಯಾವುದೆ ಸಮಯದಲ್ಲಿ ಅಹಿತಕರ ಘಟನೆ ನಡೆಯಬಹುದೆಂದು ವಿದ್ಯಾರ್ಥಿನಿಯರು ಅಳಲು ತೋಡಿಕೊಳ್ಳುತ್ತಿದ್ದಾರೆ...

ನಮ್ಮಗೆ ದಿನನಿತ್ಯ ವಿದ್ಯುತ್ ಕಂಬದಿಂದ ಬಹಳ ತೊಂದರೆಯಾಗುತ್ತಿದೆ.

ಶಾಲಾ ಪ್ರಾರ್ಥನೆ ಸಮಯದಲ್ಲಿ ನಮ್ಮಗೆ ಕಿರಿಕಿರಿ ಎನಿಸುತ್ತಿದ್ದು , ಆಟ ಆಡುತ್ತಿರುವಾಗ ತಲೆಗೆ ಬಡಿಯಬಹುದೆಂದು ಎಂದು ಭಯವಾಗುತ್ತಿದೆ..

ಈಗಾಗಲೇ ಶಾಲಾ ವಿದ್ಯಾರ್ಥಿನೀಯರು ಕಂಬವನ್ನು ಬಡಿಸಿಕೊಂಡು ತಲೆ ಮತ್ತು ಕಾಲಿಗೆ ಪೆಟ್ಟು ಮಾಡಿಕೊಂಡಿದ್ದಾರೆ.

ಕೇಲವು ವಿದ್ಯಾರ್ಥಿನೀಯರು ತಲೆಗೆ ಬಡಿಸಿಕೊಂಡು ರಕ್ತಸ್ರಾವ ಮಾಡಿಕೊಂಡಿದ್ದಾರೆ ಎಂದು ನೋವು ತೊಡಿಕೊಳ್ಳತ್ತಿದ್ದಾರೆ..

ಹಿಗಾಗಿ ಶಾಲಾ ಆವರಣದಲ್ಲಿರುವ ವಿದ್ಯುತ ಕಂಬವನ್ನು ತೇರವುಗೊಳಿಸಿ ಬೇರೆ ಕಡೆ ಸ್ಥಳಾಂತರಿಸಬೇಕೆಂದು ವಿದ್ಯಾರ್ಥಿನೀಯರು ಆಗ್ರಹಿಸಿದ್ದಾರೆ...

# ಬ್ರಿಡಜ್‌ವಾಟರ್ ವಿಶ್ವವಿದ್ಯಾಲಯದೊಂದಿಗೆ ಬೀದರ ವಿಶ್ವವಿದ್ಯಾಲಯದ ಒಪ್ಪಂದ

ಮಲ್ಲಮ್ಮ ನುಡಿ ವಾರ್ತೆ




ಬೀದರ:ಫೆಬ್ರುವರಿ.13: ಇಂದು ಬೆಂಗಳೂರಿನ ಶೆರ್ಟನ್ ಹೋಟೆನ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರ ಅವರು ಅಮೇರಿಕಾದ ಬ್ರಿಡಜ್‌ವಾಟರ್ ಸ್ಟೇಟ್ ವಿಶ್ವವಿದ್ಯಾಲಯದ ಅಧ್ಯಕ್ಷ ಡಾ.ಫ್ರೆಡ್ರಿಕ್ ಕ್ಲಾರ್ಕ್ ಅವರೊಂದಿಗೆ ಹಲವಾರು ಶೈಕ್ಷಣಿಕ ಸಹಕಾರಿ ಕ್ಷೇತ್ರದ ಒಪ್ಪಂದಗಳಿಗೆ ಪರಸ್ಪರ ಸಹಿ ಹಾಕಿದರು.

ಬೀದರ ವಿಶ್ವವಿದ್ಯಾಲಯ ಹಾಗೂ ಅಮೇರಿಕಾದ ಬ್ರಿಡಜ್‌ವಾಟರ್ ವಿಶ್ವವಿದ್ಯಾಲಯಗಳ ಈ ಐತಿಹಾಸಿಕ ಒಪ್ಪಂದದಿಂದಾಗಿ ಉಭಯ ವಿಶ್ವವಿದ್ಯಾಲಯಗಳ ಶಿಕ್ಷಣ, ಸಂಶೋಧನೆ, ಅಭಿವೃದ್ಧಿ ಕ್ಷೇತ್ರಗಳಲ್ಲಿ ವಿನೂತನ ಯುಗ ಆರಂಭವಾಗುತ್ತದೆ ಎನ್ನಲಾಗಿದೆ. ಪರಸ್ಪರ ತಂತ್ರಜ್ಞಾನದ ವಿಚಾರ ವಿನಿಮಯ, ಜಂಟಿಯಾಗಿ ಪದವಿ ಕಾರ್ಯಕ್ರಮಗಳ ವಿನಿಮಯಗಳಿಗೆ ಅನುಕೂಲವಾಗುತ್ತದೆ. ಎರಡೂ ವಿಶ್ವವಿದ್ಯಾಲಯಗಳ ಅಧ್ಯಾಪಕರ ವಿನಿಮಯದಿಂದ ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗೆ ಹೊಸ ಆಯಾಮ ದೊರೆಯಲಿದೆ. ವಿದ್ಯಾರ್ಥಿಗಳಿಗೆ ಆಧುನಿಕ ಶೈಲಿಯ ಕೃತಕ ಬುದ್ಧಿಮತ್ತೆಯಂತಹ ಕ್ಷೇತ್ರಗಳಲ್ಲಿ ದಾಪುಗಾಲಿಡಲು ಪೂರಕವಾಗುತ್ತದೆ. ಈ ಐತಿಹಾಸಿಕ ಒಪ್ಪಂದದಿಂದಾಗಿ ಶೈಕ್ಷಣಿಕ, ಸಾಂಸ್ಕೃತಿಕ, ಸಂಶೋಧನೆ, ಅಭಿವೃದ್ಧಿ ಕ್ಷೇತ್ರಗಳಲ್ಲಿ ಮಹತ್ವದ ಮೈಲುಗಲ್ಲಾಗಲಿದೆ ಎಂದು ಉಭಯ ಮುಖ್ಯಸ್ಥರು ಒಡಂಬಡಿಕೆಯ ಮಹತ್ವ ಕುರಿತು ಚರ್ಚಿಸಿದರು.

ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಈ ಎರಡೂ ವಿಶ್ವವಿದ್ಯಾಲಯಗಳ ಒಪ್ಪಂದ ಇಂದಿನ ಆಧುನಿಕ, ತಂತ್ರಜ್ಞಾನದ, ವೇಗದ ಯುಗದಲ್ಲಿ ತುಂಬಾ ಅವಶ್ಯಕ ಹಾಗೂ ಮಹತ್ವದ್ದಾಗಿದೆ ಎಂದರು. ನೂತನ ಬೀದರ ವಿಶ್ವವಿದ್ಯಾಲಯವು ಈಗಾಗಲೇ ಅನೇಕ ಶೈಕ್ಷಣಿಕ ಹಾಗೂ ಕೌಶಲ್ಯ ಕೇಂದ್ರಗಳೊಂದಿಗೆ ಒಪ್ಪಂದ ಮಾಡಿಕೊಂಡಿರುವುದನ್ನು ಇಲ್ಲಿ ಸ್ಮರಿಸಬಹುದು. ಅವುಗಳಲ್ಲಿ ಕೇಂದ್ರ ಸರ್ಕಾರದ ತಂತ್ರಜ್ಞಾನ ಕೌಶಲ್ಯದ ಸೀಪೆಟ್ ಹಾಗೂ ತಂಜಾವೂರಿನ ನಿಫ್ಟೆಮ್ ಉದ್ಯಮಶೀಲತಾ ಕೇಂದ್ರಗಳೊಂದಿಗಿನ ಮಹತ್ವದ ಒಪ್ಪಂದಗಳಾಗಿವೆ. ಪ್ರಸ್ತುತ ಅಮೇರಿಕಾದ ಬ್ರಿಡಜ್‌ವಾಟರ್ ವಿಶ್ವವಿದ್ಯಾಲಯದೊಂದಿಗೆ ಬೀದರ ವಿಶ್ವವಿದ್ಯಾಲಯದ ಶೈಕ್ಷಣಿಕ ಕ್ಷೇತ್ರದ ಒಪ್ಪಂದ ತುಂಬಾ ಅವಿಸ್ಮರಣೀಯವಾಗಿದೆ.

ಈ ಒಪ್ಪಂದದ ಸಂದರ್ಭದಲ್ಲಿ ಬಿಎಸ್‌ಯುನ ಉಪಾಧ್ಯಕ್ಷರಾದ ಡಾ.ಉಮಾ ಶರ್ಮಾ, ಡಾ.ಜಬ್ಬಾರ ಹಾಗೂ ವಿವಿಧ ವಿಶ್ವವಿದ್ಯಾಲಯಗಳ ಕುಲಪತಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಈ ಒಪ್ಪಂದ ಕಾರ್ಯಕ್ರಮವನ್ನು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಕೆ.ರವಿ ಅವರು ಯಶಸ್ವಿಯಾಗಿ

# ಕ್ರೂಸರ್ ಪಲ್ಟಿ: ಓರ್ವ ಸ್ಥಳದಲ್ಲೇ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.13: ಕ್ರೂಸರ್ ಪಲ್ಟಿಯಾಗಿ ಓರ್ವ ಸವಾರ ಸ್ಥಳದಲ್ಲೇ ಸಾವಿಗೀಡಾಗಿ ಐವರು ಗಾಯಗೊಂಡಿರುವ ಘಟನೆ ಇಲ್ಲಿಗೆ ಸಮೀಪದ ಕೆಸರಟಗಿ ಗ್ರಾಮದ ಬಳಿ ನಡೆದಿದೆ.

ಸೂರ್ಯಕಾಂತ (49) ಮೃತಪಟ್ಟ ವ್ಯಕ್ತಿ ಎಂದು ಪೊಲೀಸರು ತಿಳಿಸಿದ್ದಾರೆ. ಕ್ರೂಸರ್ ಮರತೂರು ಗ್ರಾಮದಿಂದ ಕಲಬುರಗಿ ಕಡೆಗೆ ಹೊರಟಿತ್ತು. ಕೆಸರಟಗಿ ಸಮೀಪದ ರಸ್ತೆ ಮೇಲೆ ಬರುತ್ತಿದ್ದ ವೇಳೆ ಚಾಲಕನ ನಿಯಂತ್ರಣ ತಪ್ಪಿ ಕ್ರೂಸರ್ ಪಲ್ಟಿಯಾಗಿದೆ. ಈ ವೇಳೆ ಓರ್ವ ವ್ಯಕ್ತಿ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾನೆ. ಐವರು ಪ್ರಯಾಣಿಕರು ಗಾಯಗೊಂಡಿ–ದ್ದು, ಗಾಯಾಳುಗಳನ್ನು ಜಿಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಕಲಬುರಗಿ ಸಂಚಾರಿ ಠಾಣೆ–1 ರಲ್ಲಿ ಪ್ರಕರಣ ದಾಖಲಾಗಿದೆ.

# ಕುಸ್ತಿ ಪಂದ್ಯಾವಳಿ: ಗೆಲುವಿನ ನಗೆ ಬೀರಿದ ಭೈರವನಾಥ ಜೋಗಿ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಫೆ.13: ತಾಲ್ಲೂಕಿನ ಘಮಸುಬಾಯಿ ತಾಂಡಾ ಬೋಂತಿಯ ಇಚ್ಛಾಪೂರ್ತಿ ಮಾತಾ ಜಗದಂಬಾ ಜಾತ್ರಾ ಮಹೋತ್ಸವದ ನಿಮಿತ್ತ ಬುಧವಾರ ನಡೆದ ಜಂಗಿ ಕುಸ್ತಿ ಪಂದ್ಯಾವಳಿಯಲ್ಲಿ ಮಹಾರಾಷ್ಟ್ರದ ಲಾತೂರಿನ ಕುಸ್ತಿಪಟು ಭೈರವನಾಥ ಜೋಗಿ ಗೆಲುವಿನ ನಗೆ ಬೀರಿದರು.

ಮಹಾರಾಷ್ಟ್ರರಾಜ್ಯದವರಾದ ದೀಪಕಲಾತೂರೆಅವರೊಂದಿಗೆ ತೀವ್ರಸೆಣಸಾಟನಡೆಸಿದಪೈಲ್ವಾನ್ ಭೈರವನಾಥ ಅವರು ಕೊನೆ ಗಳಿಗೆಯಲ್ಲಿ ಎದುರಾಳಿಯನ್ನು ಚುರುಕುತನದಿಂದ ಕೆಡವಿ 11 ಸಾವಿರ ಬಹುಮಾನ ತಮ್ಮದಾಗಿಸಿಕೊಂಡರು.

ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ವಿಜೇತರಿಗೆ ಶಾಲು ಹೊದಿಸಿ ನಗದು ಬಹುಮಾನ ಮತ್ತು ಪ್ರಮಾಣ ಪತ್ರವನ್ನು ವಿತರಿಸಿ ಸನ್ಮಾನಿಸಿದರು. ಮುಂದಿನ ದಿನಗಳಲ್ಲಿ ಇನ್ನಷ್ಟು ಚನ್ನಾಗಿ ಆಟವಾಡಬೇಕೆಂದು ಪ್ರೋತ್ಸಾಹಿಸಿದರು.

ತೀವ್ರಕುತೂಹಲ ಕೆರಳಿಸಿದ 7 ಸಾವಿರ ವಿಭಾಗದ ಕುಸ್ತಿಯಲ್ಲಿ ಪರಭಣಿಯ ರಮೇಶ ತುಡಿಮೆ ಅವರನ್ನುಗಂಗಾಧರ ಅಂತಪುರ ಸೋಲಿಸಿ ಗಮನ ಸೆಳೆದರು. 10 ರೂ.ನಿಂದ ಶುರುವಾದ ಕುಸ್ತಿ ಪಂದ್ಯಾವಳಿ 11 ಸಾವಿರದ ಸ್ಪರ್ಧೆಯೊಂದಿಗೆಕೊನೆಗೊಂಡಿತು. ರಾಜ್ಯ, ಅಂತರ್ ರಾಜ್ಯ ಮಟ್ಟದ ಮತ್ತು ಸ್ಥಳೀಯರು ಸೇರಿದಂತೆ 200ಕ್ಕೂ ಹೆಚ್ಚು ಕುಸ್ತಿಪಟುಗಳು ಆಗಮಿಸಿ, ತಮ್ಮ ತಾಕತ್ತನ್ನು ತೋರಿಸಿದರು.

ಅಖಾಡದಲ್ಲಿ ಕುಸ್ತಿಪಟುಗಳು ತೊಡೆ ತಟ್ಟಿ, ಸೆಡ್ಡು ಹೊಡೆದು ಒಬ್ಬರಿಗೊಬ್ಬರು ಸೆಣಸಾಡುತ್ತಿದ್ದರೆ, ಇತ್ತ ಪ್ರೇಕ್ಷಕರ ಗ್ಯಾಲರಿಯಿಂದ ಸಿಳ್ಳೆ, ಕೂಗಾಟ, ಚಪ್ಪಾಳೆಯ ಸದ್ದು ಕುಸ್ತಿಪಟುಗಳಿಗೆ ಉತ್ತೇಜನ ನೀಡಿತು. ತಮ್ಮಲ್ಲಿರುವ ನಾನಾ ಪಟ್ಟುಗಳನ್ನು ಪ್ರದರ್ಶಿಸಿ ಎದುರಾಳಿಯನ್ನು ಮಣ್ಣು ಮುಕ್ಕಿಸುವ ತವಕದ ದೃಶ್ಯವನ್ನು ಕಂಡು ಪ್ರೇಕ್ಷಕರು ಕೇಕೆ ಹಾಕಿದರು. ಗೆದ್ದ ಕುಸ್ತಿಪಟುಗಳನ್ನು ಭುಜದ ಮೇಲೆ ಹೊತ್ತು ಸಂಭ್ರಮಿಸಿದರು.

# ರನ್ನ ರಥಯಾತ್ರೆಗೆ ಸಚಿವ ತಿಮ್ಮಾಪೂರ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.13:ಜಿಲ್ಲೆಯ ಮುಧೋಳದಲ್ಲಿ ಫೆಬ್ರವರಿ 22 ರಿಂದ 24 ವರೆಗೆ ಜರುಗಲಿರು ರನ್ನ ವೈಭವದ ಹಿನ್ನೆಲೆಯಲ್ಲಿ ಹಮ್ಮಿಕೊಂಡಿರುವ ರನ್ನ ರಥಯಾತ್ರೆಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಗುರುವಾರ ಚಾಲನೆ ನೀಡಿದರು.

ಮುಧೋಳ ತಾಲೂಕಿನ ರನ್ನ ಬೆಳಗಲಿಯ ರನ್ನ ಸರ್ಕಲ್‌ನಲ್ಲಿ ರನ್ನ ರಥಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ಈ ರಥಯಾತ್ರೆ ರನ್ನ ಬೆಳಗಲಿಯಿಂದ ಪ್ರಾರಂಭವಾಗಿ ಮುಧೋಳ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಯ 72 ಗ್ರಾಮಗಳಿಗೆ ಸಂಚರಿಸಿ ಮರಳಿ ರನ್ನ ಬೆಳಗಲಿಗೆ ಮುಕ್ತಾಯಗೊಳ್ಳಲಿದೆ. ರನ್ನ ರಥಯಾತ್ರೆ ಆಯಾ ಗ್ರಾಮಗಳಿಗೆ ಆಗಮಿಸಿದಾಗ ವಿಜೃಂಭಣೆಯಿಂದ ಸ್ವಾಗತಿಸಿ, ಬೀಳ್ಕೊಡಬೇಕು. ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಪಾಲ್ಗೊಳ್ಳುವ ಮೂಲಕ ರಥಯಾತ್ರೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ರನ್ನ ರಥ ರನ್ನನ ಗತ ವೈಭವ ಸಾರಲಿದ್ದು, ಸಾಂಸ್ಕೃತಿಕ ಕಾರ್ಯಕ್ರಮದ ಯಶಸ್ವಿಗೆ ಸಾಕ್ಷಿಯಾಗಲಿದೆ. ಈ ಕಾರ್ಯಕ್ರಮವನ್ನು ದಾಖಲೆ ಮೀರಿ ಯಶಸ್ವಿಗೊಳಿಸಿ ರನ್ನ ವೈಭವ ಎಲ್ಲೆಡೆ ಪ್ರಸರಿಸುವಂತೆ ಮಾಡಲು ಎಲ್ಲರೂ ಪಾಲ್ಗೊಳ್ಳುವಿಕೆ ಮುಖ್ಯವಾಗಿದೆ ಎಂದು ಸಚಿವರು ತಿಳಿಸಿದರು. ರನ್ನರಥ ರನ್ನ ಬೆಳಗಲಿ ಪಟ್ಟಣದ ನಾನಾ ಕಡೆಗಳಲ್ಲಿ ಸಂಚರಿಸಿತು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಹಾಗೂ ಶಾಲಾ ಮಕ್ಕಳು ಪಾಲ್ಗೊಂಡಿರುವುದು ಮೆರವಣಿಗೆಗೆ ಮೆರಗು ತಂದಿತು.

ಇನೊಂದು ರನ್ನ ರಥಯಾತ್ರೆ ಜಿಲ್ಲಾ ಮಟ್ಟದಲ್ಲಿ ಫೆಬ್ರವರಿ 17 ರಿಂದ 21 ವರೆಗೆ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಸಂಚರಿಸಲಿದೆ. ಮತ್ತೊಂದು ರಥ ರಾಜ್ಯ ಮಟ್ಟದ ರನ್ನ ರಥಯಾತ್ರೆ ಫೆಬ್ರವರಿ 19 ರಿಂದ 22 ವರೆಗೆ ನಡೆಯಲಿದೆ. ಪ್ರತಿಯೊಂದು ಹಂತದ ರಥಯಾತ್ರೆ ಯಶಸ್ವಿಗೊಳಿಸಲು ನೋಡಲ್ ಅಧಿಕಾರಿಗಳನ್ನು ಸಹ ನೇಮಿಸಲಾಗಿದೆ ಎಂದು ತಿಳಿಸಿದರು.

ರಥಯಾತ್ರೆಯಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಯೋಜನಾಧಿಕಾರಿ ಪುನಿತ್ ಬಿ.ಆರ್, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಸಿದ್ರಾಮೇಶ್ವರ ಉಕ್ಕಲಿ, ತಹಶೀಲ್ದಾರ ಮಹಾದೇವ ಸನಮುಡಿ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಇತರರು ಪಾಲ್ಗೊಂಡಿದ್ದರು.

# ರಸ್ತೆ ಅಪಘಾತಗಳಲ್ಲಿ ಅಧಿಕ ಸಾವು: ಕಳವಳ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.13: ರಸ್ತೆ ಸುರಕ್ಷತಾ ನಿಯಮಗಳ ಪಾಲನೆಯ ನಿರ್ಲಕ್ಷ್ಯದಿಂದ ರಸ್ತೆ ಅಪಘಾತಗಳಿಂದಲೇ ಅಧಿಕ ಸಾವು ಸಂಭವಿಸುತ್ತಿವೆ ಎಂದು ಮಹಮ್ಮದ್ ಜಾಫರ್ ಸಿದ್ದಿಕಿ ಕಳವಳ ವ್ಯಕ್ತಪಡಿಸಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಛಯದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಇಲಾಖೆ, ಗ್ರಾಮೀಣ ಪೊಲೀಸ್ ಠಾಣೆ ಸಹಯೋಗದಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ರಸ್ತೆ ಸಂಚಾರ ನಿಯಮಗಳ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಪಘಾತಗಳಲ್ಲಿ ಸಾವನ್ನಪ್ಪುವವರ ಸಂಖ್ಯೆ ಹೆಚ್ಚಾಗಿರುವುದರಿಂದ ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸಲು ಹೆಚ್ಚು ಒತ್ತು ಕೊಡಲಾಗುತ್ತಿದೆ. ರಸ್ತೆ ಅಪಘಾತದಲ್ಲಿ ಕುಟುಂಬದ ಒಬ್ಬ ವ್ಯಕ್ತಿಯ ಜೀವ ಹೋದರೂ ಇಡೀ ಕುಟುಂಬ ಸದಸ್ಯರು ಸಂಕಷ್ಟಕ್ಕೆ ಒಳಗಾಗುತ್ತಾರೆ. ದುಃಖದಿಂದ ಹೊರಬರಲು ವರ್ಷಗಳೇ ಬೇಕಾಗುತ್ತದೆ. ನಿತ್ಯವೂ ಸುರಕ್ಷಿತ ಸಂಚಾರದ ಕಡೆಗೆ ಹೆಚ್ಚು ಲಕ್ಷ್ಯ ವಹಿಸಬೇಕು ಎಂದು ಸಲಹೆ ಮಾಡಿದರು. ಸಿಪಿಐ ಜಿ.ಎಸ್.ಬಿರಾದಾರ ಮಾತನಾಡಿ, ಕುಡಿದು ವಾಹನ ಚಾಲನೆ ಮಾಡುವುದು ಸ್ವ-ಯಂ ಆತ್ಮಹತ್ಯೆಯ ದಾರಿ ತುಳಿದಂತೆ. ನಿರ್ಲಕ್ಷ್ಯ, ವೇಗದ ಚಾಲನೆ ಮತ್ತೊಬ್ಬರ ಮನೆಯ ನಂದಾದೀಪ ಆರಿಸುತ್ತದೆ. ಎಲ್ಲರೂ ರಸ್ತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ನಿಧಾನವಾಗಿ ವಾಹನಗಳನ್ನು ಚಲಾಯಿಸಬೇಕು ಎಂದು ನುಡಿದರು.

ವಾಹನ ನಿರೀಕ್ಷಕ ವಿಜಯಕುಮಾರ, ಪ್ರಮುಖರಾದ ರಮೇಶ ಪಟ್ನೆ, ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ ಸೇರಿದಂತೆ ಇತರರು ಇದ್ದರು.

# ಸಂಭ್ರಮದ ಅದ್ದೂರಿ ಪಲ್ಲಕ್ಕಿ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.13: ತಾಲೂಕಿನ ಗಡಿಭಾಗದ ಮೆಹಕರ್ ಶ್ರೀಗುರು ವೀರುಪಾಕ್ಷೇಶ್ವರ ಜಾತ್ರಾ ಮಹೋತ್ಸವ ಸಂಭ್ರಮದಿಂದ ಬುಧುವಾರ ತೆರೆ ಕಂಡಿತು. ಶ್ರೀ ಗುರು ರಾಜೇಶ್ವರ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಹನ್ನೊಂದು ದಿನಗಳ ಕಾಲ ನಡೆದ ಈ ಜಾತ್ರಾ ಮಹೋತ್ಸವದಲ್ಲಿ ಮಹಾರುದ್ರಾಭಿಷೇಕ, ಜಪ, ಧ್ಯಾನ, ದೀಪೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧೆ ಭಕ್ತಿಯಿಂದ ನೆರವೇರಿದವು.

ಪ್ರತಿದಿನವೂ ಶ್ರೀಗಳ ಆಶೀರ್ವಚನ ಭಕ್ತರಲ್ಲಿ ಭಕ್ತಿಭಾವ ಮತ್ತು ಆತ್ಮಚಿಂತನೆಗೆ ಸ್ಫೂರ್ತಿಯನ್ನಿತ್ತು. ಶರಣಸಾಂಸ್ಕೃತಿಕ ಪರಂಪರೆಯ ಮಹತ್ವ, ನೈತಿ-ಕತೆ, ಸದ್ಗುಣಗಳು ಹಾಗೂ ಸಂಸಾರದ ನೈಜ ತಾತ್ಪರ್ಯ ಕುರಿತು ಶ್ರೀಗಳು ಉಪದೇಶ ಮಾಡಿದರು. ಸಾವಿರಾರು ಭಕ್ತರು ಶ್ರೀ ಗುರು ವೀರುಪಾಕ್ಷೇಶ್ವರ ದೇವರ ಹಾಗು&ಟಿಭರಿ; ಶ್ರೀಗಳ ದರ್ಶನ ಪಡೆದು ಪುನೀತರಾದರು. ಬುಧವಾರ ಪಲ್ಲಕ್ಕಿ ಉತ್ಸವ ಸಂಭ್ರಮದಿಂದ ಜರುಗಿತು. ಡೊಳ್ಳುಕುಣಿತ, ವೀರಗಾಸೆ, ಕಂಸಾಳೆ, ಹಾರ್ಮೋನಿಯಂ ಮೇಳ, ಜಾನಪದ ಕಲಾತಂಡಗಳು ಪಲ್ಲಕ್ಕಿ ಉತ್ಸವಕ್ಕೆ ವಿಶೇಷ ಮೆರಗು ತಂದುಕೊಟ್ಟಿದ್ದವು.

ಬರುವ ಮೇ 21, 22, 23 ರಂದು ರಂಭಾಪುರಿ ಜಗದ್ಗುರುಗಳ ದಿವ್ಯ ಸಾನಿಧ್ಯದಲ್ಲಿ ಶ್ರೀ ಗುರು ರಾಜೇಶ್ವರ ಶಿವಾಚಾರ್ಯರ ಗುರುಗಳ ಪಟ್ಟಾಭಿಷೇಕ ರಜತ ಮಹೋತ್ಸವದ ಜರುಗಲಿದೆ. ಹಾಗಾಗಿ ವೀರುಪಾಕ್ಷೇಶ್ವರ ದೇವರಿಗೆ ಬೆಳ್ಳಿ ಪಲ್ಲಕ್ಕಿ ಸಮರ್ಪಣೆ ನೆರವೇರಲಿದ್ದು, ಭಕ್ತರು ಈಗಿನಿಂದಲೇ ಬೆಳ್ಳಿ ಪಲ್ಲಕ್ಕಿಗೆ ದೇಣಿಗೆ ಸಲ್ಲಿಸಲು ಮುಂದೆ ಬರುತ್ತಿದ್ದಾರೆ.

> ಶ್ರೀಗುರು ವೀರುಪಾಕ್ಷೇಶ್ವರ ಜಾತ್ರಾಮಹೋತ್ಸವದಲ್ಲಿ ವಿವಿಧ ಭಾಗಗಳಿಂದ ಅಸಂಖ್ಯಾತ ಭಕ್ತರು ಶ್ರದ್ಧೆ, ಭಕ್ತಿಯಿಂದ ಪಾಲ್ಗೊಂಡು ದೇವರ ಅನುಗ್ರಹಕ್ಕೆ ಪಾತ್ರರಾಗಿದ್ದಾರೆ. ದೇವರ ಆಶೀರ್ವಾದ ಸದಾ ಭಕ್ತರ ಮೇಲಿರಲಿ.
>
> – ಶ್ರೀಗುರು ರಾಜೇಶ್ವರ ಶಿವಾಚಾರ್ಯರು ವೀರುಪಾಕ್ಷೇಶ್ವರ ಮಠ ಮೆಹಕರ್

# ಬಸ್ ನಿರ್ವಾಹಕ ಗಂಗಾರಾಮ್‌ಗೆ ಸನ್ಮಾನಿಸಿ ಪ್ರಶಂಸನಾ ಪತ್ರ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.13:ದೇವಲ ಗಾಣಗಾಪೂರಕ್ಕೆ ಮಾಘ ಉತ್ಸವ ಪ್ರಯುಕ್ತ ಶ್ರೀ ದತ್ತಾತ್ರೇಯ ದರ್ಶನಕ್ಕೆ ಎಂದು ಬಂದು ಬಸ್ ನಲ್ಲಿ ಪ್ರಯಾಣಿ ಮಾಡುವ ಸಮಯದಲ್ಲಿ ತೆಲಂಗಾಣ ಮೂಲಕ ಮಹಿಳಾ ಪ್ರಯಾಣಿಕರ ಚಿನ್ನದ ಮಂಗಳಸೂತ್ರ ಕಳ್ಳತನ ಮಾಡಿದ ಮಹಿಳೆಯನ್ನು ಪತ್ತೆ ಹಚ್ಚಿ ಕಳೆದುಕೊಂಡ ಮಹಿಳೆಗೆ ಮರಳಿ ಮಂಗಳಸೂತ್ರ ನೀಡಿ ಮಾನವೀಯತೆ ಮೆರೆದ ಕಲಬುರಗಿ ಘಟಕ-3ರ ನಿರ್ವಾಹಕ ಗಂಗಾರಾಮ ಇವರಿಗೆ ಕಲಬುರಗಿ ಘಟಕ 2 ವತಿಯಿಂದ ಕಲಬುರಗಿ ವಿಭಾಗ-2 ರ ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ದಪ್ಪ ಗಂಗಾಧರ ಮತ್ತು ಕಲಬುರಗಿ ಘಟಕ-3 ಘಟಕ ವ್ಯವಸ್ಥಾಪಕ ರವೀಂದ್ರಕುಮಾರ ಅವರು ಕಚೇರಿಯಲ್ಲಿ ಬುಧವಾರ ಸಿಹಿ ತಿನಿಸಿ ನಗದು ಪುರಸ್ಕಾರ ನೀಡಿ ಸನ್ಮಾನಿಸಿ ಪ್ರಶಂಸನಾ ಪತ್ರ ವಿತರಿಸಲಾಯಿತು.

ಬಸ್ ನಿರ್ವಾಹಕ ಗಂಗಾರಾಮ ಅವರು ನಿಗಮದ ಇತರೆ ಚಾಲಕ/ನಿರ್ವಾಹಕರಿಗೆ ಮಾದರಿಯಾಗಿ ಅವರು ಸಹ ಪ್ರಾಮಾಣಿಕತೆಯಿಂದ ಮೆರೆದಿದ್ದಾರೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-2ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

# ಬಸವ ಪ್ರಶಸ್ತಿ ಸೇರಿ ವಿವಿಧ ಪ್ರಶಸ್ತಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.13: ರಾಜ್ಯ ಸರ್ಕಾರ 2024-25ನೇ ಬಸವ, ಭಗವಾನ್ ಮಹಾವೀರ್ ರಾಷ್ಟ್ರೀಯ ಶಾಂತಿ ಪ್ರಶಸ್ತಿ,ಟಿ ಚೌಡಯ್ಯ ಪ್ರಶಸ್ತಿ, ಗಾನಯೋಗಿ ಪಂಚಾಕ್ಷರಿ ಗವಾಯಿ ರಾಷ್ಟ್ರೀಯ ಪ್ರಶಸ್ತಿ ಸೇರಿದಂತೆ ವಿವಿಧ ಪ್ರಶಸ್ತಿಗಳಿಗೆ ಸಾಧಕರನ್ನು ಅಯ್ಕೆ ಮಾಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಇಂದಿಲ್ಲಿ ತಿಳಿಸಿದ್ದಾರೆ

ಧಾರವಾಡದ ಡಾ. ಎಸ್. ಆರ್. ಗುಂಜಾಳ ಅವರನ್ನು ಬಸವ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ ಮಾಡಿದ್ದು ಪ್ರಶಸ್ತಿ ಮೊತ್ತ 10 ಲ್ಕಷ ರೂಪಾಯಿ ಆಗಿದೆ ಅದೇ ರೀತಿ ಭಗವಾನ್ ಮಹಾವೀರ್ ರಾಷ್ಟ್ರೀಯ ಶಾಂತಿ ಪ್ರಶಸ್ತಿಗೆ ಪಂಡಿತ ರತ್ನ ಎ ಶಾಂತಿರಾಜ ಶಾಸ್ತ್ರಿ ಟ್ರಸ್ಟ್ ಆಯ್ಕೆ ಮಾಡಿದ್ದು ಇದರ ಮೊತ್ತ 10 ಲಕ್ಷ ಎಂದು ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ

ಟಿ. ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿಗೆ ಬಾಗಲಕೋಟೆಯ ಬಸಪ್ಪ ಎಚ್. ಭಜಂತ್ರಿ,ಗಾನಯೋಗಿ ಪಂಡಿತ್ ಪಂಚಾಕ್ಷರಿ ಗವಾಯಿ ರಾಷ್ಟ್ರೀಯ ಪ್ರಶಸ್ತಿಗೆ ಬೇಗಂ ಪರ್ವೀನ್ ಸುಲ್ತಾನಾ ಮುಂಬಯಿ, ಸಂಗೊಳ್ಳಿ ರಾಯಣ್ಣ ಪ್ರಶಸ್ತಿಗೆ ಕೆ.ರಾಜಕುಮಾರ್, ಕೋಲಾರ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದ್ದಾರೆ

ಅಕ್ಕಮಹಾದೇವಿ ಪ್ರಶಸ್ತಿಗೆ ಡಾ. ಹೇಮಾ ಪಟ್ಟಣಶೆಟ್ಟಿ, ಪಂಪ ಪ್ರಶಸ್ತಿಗೆ ಡಾ. ಬಿ.ಎ.ವಿವೇಕ ರೈ, ದಕ್ಷಿಣ ಕನ್ನಡ, ಕುಂದಾಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿಯನ್ನು ಪ್ರೊ ರ.ಕೆ.ಜಿ ಸ. ರಘುನಾಥ ಅವರಿಗೆ ಸಂದಿದೆ. ಸಾಹಿತ್ಯ-ವಿಭಾಗದಲ್ಲಿ ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ ಹಾಸನ ಡಾ. ವೈ.ಸಿ.ಭಾನುಮತಿ ಅವರಿಗೆ, ಬಿ.ವಿ ಕಾರಂತ್ ಪ್ರಶಸ್ತಿ ಜೆ.ಲೋಕೇಶ್, ಡಾ. ಗುಬ್ಬಿ ವೀರಣ್ಣ ಪ್ರಶಸ್ತಿ ಕೆ.ನಾಗರತ್ನಮ್ಮ,ಮರಿಯಮ್ಮನಹಳ್ಳಿ, ವಿಜಯನಗರ ಹಾಗು ಡಾ. ಸಿದ್ದಲಿಂಗಯ್ಯ ಸಾಹಿತ್ಯ ಪ್ರಶಸ್ತಿಗೆ ಡಾ. ಎಲ್. ಹನುಮಂತಯ್ಯ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ

# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಹೆಚ್ಚುವರಿ ಕೋಣೆಗಳ ನಿರ್ಮಾಣಕ್ಕೆ ಶಿಲಾನ್ಯಾಸ



ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್. ಫೆ. 13. ಪಟ್ಟಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ – ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ – ವಿಭಾಗ ಯಾದಗಿರಿ 2022-23 ನೇ ಸಾಲಿನ ಕೆ.ಕೆ.ಆರ್.ಡಿ.ಬಿ. ಯೋಜನೆ ಅಡಿಯಲ್ಲಿ( ಅಂದಾಜು ಮೊತ್ತ : 190.00 ಲಕ್ಷಗಳು) ಗುರುಮಿಠಕಲ್ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಮೊದಲನೇ ಮಹಡಿಯ ಮೇಲೆ 6 ಕೋಣೆಗಳು ಮತ್ತು ಉಪಕರಣಗಳ ಸರಬರಾಜು ಮಾಡುವ ಕಾಮಗಾರಿಗೆ ಶಾಸಕರಾದ ಶರಣಗೌಡ ಕಂದಕೂರ ರವರು ತಮ್ಮ ಅಮೃತ ಹಸ್ತದಿಂದ ಶಿಲಾನ್ಯಾಸ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡಿ ನಮ್ಮ ಕಾಲೇಜಿನಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಆದುನಿಕ ಮೂಲಭೂತ ಸೌಲಭ್ಯಗಳನ್ನು ಒದಗಿಸಿದ್ದೇವೆ ಅವುಗಳನ್ನು ಸದ್ಭಳಕೆ ಮಾಡಿಕೊಳ್ಳಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಮತಿ ಜೈಯಶ್ರೀ ರಗುನಾಥರೆಡ್ಡಿ ಪುರಸಭೆ ಅಧ್ಯಕ್ಷರು ಗುರುಮಿಠಕಲ್. ಹಾಗೂ ಪುರಸಭೆ ಸರ್ವ ಸದಸ್ಯರು. ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರು. ಸರಕಾರಿ ವಿವಿಧ ಇಲಾಖೆಯ ಅಧಿಕಾರಿಗಳು. ಪಟ್ಟಣದ ಹಿರಿಯ ನಾಗರಿಕರು ಯುವಕರು ಮತ್ತು ಕಾಲೇಜಿನ ಪ್ರಾಂಶುಪಾಲರಾದ ಡಾ. ಪುರುಷೋತ್ತಮ. ವಿ. ಜೋಶಿ. ಹಾಗೂ ಪ್ರಾಧ್ಯಾಪಕರಾದ . ಬಸವರಾಜ. ಆಂಜನೇಯ. ಇಮ್ರಾನ್ ಖಾಜಿ. ಶರಣಪ್ಪ ಗಡೆದ. ಅಲ್ಲಮಪ್ರಭು. ಶ್ರೀಮತಿ ಮಾಲತಿ. ಉಪನ್ಯಾಸಕರಾದ. ಡಾ. ಬಾಲಪ್ಪ. ಡಾ. ಮಾಣಿಕಪ್ಪ. ಡಾ. ಮರೆಪ್ಪನಾಟಿಕರ್. ಬಿಚ್ಚಪ್ಪ. ಡಾ. ಮಲ್ಲಪ್ಪ. ಡಾ. ಕೃಷ್ಣ. ಕೆ. ಕೆ. ಡಾ. ರಾಮುಲು. ಡಾ. ಅಶೋಕ ಕುಮಾರ. ಡಾ. ಪ್ರಸನ್ನ ಕುಮಾರ. ಡಾ. ಭೀಮರಾಯ. ಡಾ. ಪೀರಪ್ಪ. ಆಕಾಶ್. ಡಾ. ರಾಮುಲು ಜಿನಕೆರಾ. ಅಮರನಾಥ್. ರಾಯಪ್ಪ. ಶರಣಯ್ಯಮಠಪತಿ. ಶ್ರೀ ಮತಿ ಸಂಗೀತಾ. ಶ್ರೀ ಮತಿ ಅಮೃತ ಬಾಯಿ. ಶ್ರೀ ಮತಿ ಉಷಾಂತಮ್ಮ. ಪ್ರಥಮ ದರ್ಜೆ ಸಹಾಯಕರಾದ ಶ್ರೀ ಮತಿ ಕಲಾವತಿ ಗಣಕ ಯಂತ್ರ ನಿರ್ವಹಕ ಭೀಮಾಶಂಕರ ರೆಡ್ಡಿ. ನರೇಶ್. ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

## ಫೆ.15 ರಂದು ವಿವಿಧ ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ ಸುವ್ಯವಸ್ಥಿತವಾಗಿ ನಡೆಸಲು ಜಿಲ್ಲಾಧಿಕಾರಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.13: ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿ ಪ್ರವೇಶ ಪರೀಕ್ಷೆ ಫೆಬ್ರುವರಿ.15 ರಂದು ನಡೆಯಲಿದ್ದು, ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಡೆಸಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಫೆ.15 ರಂದು ನಡೆಯಲಿರುವ ವಿವಿಧ ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶ ಪರೀಕ್ಷೆ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೀದರ ಜಿಲ್ಲೆಯಲ್ಲಿ ಒಟ್ಟು 22 ಪರೀಕ್ಷೆ ಕೇಂದ್ರಗಳಲ್ಲಿ 6644 ವಿದ್ಯಾರ್ಥಿಗಳು 6ನೇ ತರಗತಿಗೆ ಪ್ರವೇಶ ಪರೀಕ್ಷೆ ಬರೆಯಲಿದ್ದು, ಬೀದರ ನಗರದಲ್ಲಿ 5 ಪರೀಕ್ಷಾ ಕೇಂದ್ರಗಳಲ್ಲಿ 1518 ವಿದ್ಯಾರ್ಥಿಗಳು, ಬಸವಕಲ್ಯಾಣದಲ್ಲಿ 5 ಪರೀಕ್ಷಾ ಕೇಂದ್ರಗಳಲ್ಲಿ 1430 ವಿದ್ಯಾರ್ಥಿಗಳು, ಭಾಲ್ಕಿ 3 ಪರೀಕ್ಷಾ ಕೇಂದ್ರಗಳಲ್ಲಿ 821 ವಿದ್ಯಾರ್ಥಿಗಳು, ಔರಾದ 3 ಪರೀಕ್ಷಾ ಕೇಂದ್ರಗಳಲ್ಲಿ 1143 ವಿದ್ಯಾರ್ಥಿಗಳು, ಹುಮನಾಬಾದ 3 ಪರೀಕ್ಷಾ ಕೇಂದ್ರಗಳಲ್ಲಿ 684 ವಿದ್ಯಾರ್ಥಿಗಳು, ಕಮಲನಗರ 1 ಪರೀಕ್ಷಾ ಕೇಂದ್ರದಲ್ಲಿ 310 ವಿದ್ಯಾರ್ಥಿಗಳು, ಚಿಟಗುಪ್ಪಾ 1 ಪರೀಕ್ಷಾ ಕೇಂದ್ರದಲ್ಲಿ 528 ವಿದ್ಯಾರ್ಥಿಗಳು, ಹುಲಸೂರು 1 ಪರೀಕ್ಷಾ ಕೇಂದ್ರದಲ್ಲಿ 210 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.